ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೮

**ಪಟ್ಟಿ – ೨೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ : ೨೩ನೇ ನವೆಂಬರ್, ೨೦೧೫.**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಸಾರಿಗೆ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು.

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು.

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

## ಮದ್ದೂರು ತಾಲ್ಲೂಕಿನಲ್ಲಿ ಶಕ್ತಿ ಭವನ ನಿರ್ಮಾಣದ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೧ (೨೮೪೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರಣ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನಲ್ಲಿ ಸ್ತ್ರೀ ಶಕ್ತಿ ಭವನ ನಿರ್ಮಿಸಲು ನಿವೇಶನವನ್ನು ಗುರುತಿಸಲಾಗಿದೆಯೇ ; ಹಾಗಿದ್ದಲ್ಲಿ, ಸ್ಥಳ ಮತ್ತು ವಿಸ್ತೀರ್ಣ ಮಾಹಿತಿಯನ್ನು ಒದಗಿಸುವುದು ;

(ಆ) ಸರ್ಕಾರ ನಿಗದಿಪಡಿಸಿರುವ ರೂ. ೧೦.೦೦ ಲಕ್ಷಗಳ ಅನುದಾನದಲ್ಲಿ ಉತ್ತಮ ಸ್ತ್ರೀ ಶಕ್ತಿ ಭವನವನ್ನು ನಿರ್ಮಾಣ ಮಾಡಲು ಸಾಧ್ಯವಿಲ್ಲದೇ ಇರುವುದರಿಂದ ಕನಿಷ್ಠ ರೂ. ೧.೦೦ ಕೋಟಿಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವಾಗ ಹೆಚ್ಚಿಸಲಾಗುವುದು ; (ಪೂರ್ಣ ಮಾಹಿತಿ ನೀಡುವುದು)

(ಇ) ಹೆಚ್ಚಿನ ಅನುದಾನ ಬಿಡುಗಡೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

## ಹೆಣ್ಣು ಮಕ್ಕಳ ಜನನ ಪ್ರಮಾಣ ಕಡಿಮೆಯಾಗುತ್ತಿರುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೨(೨೮೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೆಣ್ಣು ಮಕ್ಕಳ ಜನ ಪ್ರಮಾಣ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೆಣ್ಣು ಮಕ್ಕಳ ಜನನ ಕಡಿಮೆಯಾಗಲು ಕಾರಣಗಳೇನು ; ಈ ಬಗ್ಗೆ ಸರ್ಕಾರ ಸಮೀಕ್ಷಾ ಕಾರ್ಯವನ್ನು ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ವರದಿಯಲ್ಲಿನ ಪ್ರಮುಖ ಅಂಶಗಳು ಯಾವುವು ; ಪೂರ್ಣ ವಿವರಗಳನ್ನು ನೀಡುವುದು ; (ಕಳೆದ ೨ ವರ್ಷಗಳ ಹೆಣ್ಣು ಮತ್ತು ಗಂಡು ಮಕ್ಕಳ ಜನನದ ಪ್ರಮಾಣದ ಅಂಕಿ ಅಂಶಗಳನ್ನು ಒದಗಿಸುವುದು)

(ಇ) ರಾಜ್ಯದಲ್ಲಿ ಹೆಣ್ಣು ಮಕ್ಕಳ ಜನನ ಸಂಖ್ಯೆಯನ್ನು ಹೆಚ್ಚು ಮಾಡಲು ಸರ್ಕಾರವು ಹೊಸ ಹೊಸ ಕಾರ್ಯಕ್ರಮಗಳನ್ನು ಅಳವಡಿಸಿಕೊಳ್ಳಲಾಗಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ಮಂಡ್ಯ ಜಿಲ್ಲೆಯ ಮಿಮ್ಸ್ ಆಸ್ಪತ್ರೆಯಲ್ಲಿ ನಾನ್ ಕ್ಲಿನಿಕಲ್ ಸಿಬ್ಬಂದಿಗಳ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೩ (೩೨೧೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯದ ಮಿಮ್ಸ್ ಮತ್ತು ಜಿಲ್ಲೆಯ ಜಿಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನಾನ್ ಕ್ಲಿನಿಕಲ್ ಗುತ್ತಿಗೆ ನೌಕರರ ಸಂಖ್ಯೆ ಎಷ್ಟು ; (ಹೆಸರು, ಹುದ್ದೆಗಳ ಸಹಿತ ಮಾಹಿತಿ ನೀಡುವುದು)

(ಆ) ಇವರಿಗೆ ನಿಗದಿಪಡಿಸಿರುವ ವೇತನ ಎಷ್ಟು; ಅದನ್ನು ಕಾಲಕ್ಕೆ ಸರಿಯಾಗಿ ಚೆಕ್ ಮೂಲಕ ಪಾವತಿ ಮಾಡಲಾಗುತ್ತಿದೆಯೇ ; ಇವರಿಗೆ ಕಾನೂನಿನ ಪ್ರಕಾರ ಕನಿಷ್ಠ ವೇತನ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಈ ನೌಕರರುಗಳ ಪಿ.ಎಫ್ ಹಣವನ್ನು ದುರುಪಯೊಗ ಪಡಿಸಿಕೊಳ್ಳಲಾಗಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮ ಏನು ?

## ಮಂಡ್ಯ ಜಿಲ್ಲೆಯ ಆತಗೂರಿನ ಚೆಲ್ಲೇಶ್ವರ ದೇವಸ್ಥಾನದ ಒತ್ತುವರಿ ಬಗ್ಗೆ.

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೪ (೩೨೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರಣ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆತಗೂರಿನಲ್ಲಿರುವ ಅತ್ಯಂತ ಪ್ರಾಚೀನ (ಕ್ರಿ.ಶ. ೯೫೦ರ) ಚೆಲ್ಲೇಶ್ವರ ದೇವಾಲಯದ ಮುಂದಿನ ಕೊಳ. ಇವುಗಳ ಅಭಿವೃದ್ಧಿಗೆ ಮತ್ತು ಅತಿಕ್ರಮಣವಾಗಿರುವ ದೇವಾಲಯದ ಜಾಗವನ್ನು ತೆರವುಗೊಳಿಸಲು ದೇವಾಲಯಕ್ಕೆ ಕಾಂಪೌಂಡ್ ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ;

(ಆ) ಈ ಊರಿನಲ್ಲಿದ್ದ ಕ್ರಿ.ಶ. ೯೫೦ರ ಅತ್ಯಂತ ಪ್ರಮುಖ ಶಾಸನವು ಈಗ ಬೆಂಗಳೂರು ಮ್ಯೂಸಿಯಂನಲ್ಲಿದ್ದು, ಇದರ ಪ್ರತಿಕೃತಿಯನ್ನು ಈ ದೇವಾಲಯದ ಬಳಿ ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ ?

## ಪಡಿತರ ಚೀಟಿ Online ಅಪ್ ವಿವರ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)) :–**

೨೪೫೫ (೨೮೫೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೦ರ ನಂತರ ಗ್ರಾಮ ಪಂಚಾಯತ್ ಮೂಲಕ ಸ್ವೀಕೃತವಾದ ಒಟ್ಟು ಹೊಸ ಪಡಿತರ ಚೀಟಿ ಅರ್ಜಿಗಳ ಸಂಖ್ಯೆ ಮತ್ತು ವಸೂಲಾದ ಅರ್ಜಿ ಶುಲ್ಕದ ಮೊತ್ತವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೦ ರ ನಂತರ ಗ್ರಾಮ ಪಂಚಾಯತ್ ಮೂಲಕ Online ಸ್ವೀಕೃತವಾದ ಪಡಿತರ ಚೀಟಿ ತಿದ್ದುಪಡಿ/ಸೇರ್ಪಡೆ/ತೆಗೆದು ಹಾಕುವಿಕೆ ಅರ್ಜಿಗಳ ಸಂಖ್ಯೆ ಎಷ್ಟು; ವಸೂಲಾದ ಶುಲ್ಕದ ಮೊತ್ತವೆಷ್ಟು; (ಜಿಲ್ಲೆ–ತಾಲ್ಲೂಕುವಾರು ವಿವರ)

(ಇ) ಪಡಿತರ ಚೀಟಿ Online ಅರ್ಜಿ ಸಂಬಂಧ ವಸೂಲಾಗುವ ಶುಲ್ಕವನ್ನು ಗ್ರಾಮ ಪಂಚಾಯತ್‌ಗೆ ಬಳಸಿಕೊಳ್ಳಲು ಆದೇಶವಿದ್ದಾಗ್ಯೂ ಕೆಲ ತಹಶೀಲ್ದಾರರು ಶುಲ್ಕವನ್ನು ಸರ್ಕಾರಕ್ಕೆ ಪಾವತಿಸಲು ನೊಟೀಸ್ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಬಗ್ಗೆ ಸರ್ಕಾರ ಗೊಂದಲ ನಿವಾರಿಸಲು ಕೈಗೊಳ್ಳುವ ಕ್ರಮಗಳೇನು ?

## ಸರ್ಕಾರಿ ಹಾಗೂ ಖಾಸಗಿ ಬಸ್ಸುಗಳಲ್ಲಿ ಪ್ರಯಾಣ ದರ ಏರಿಕೆ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೬ (೨೮೪೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಬ್ಬ–ಹರಿದಿನಗಳಲ್ಲಿ ಮತ್ತು ವಾರಾಂತ್ಯದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳೂ ಸೇರಿದಂತೆ ಇತರ ಖಾಸಗಿ ಬಸ್ಸುಗಳಲ್ಲಿ ಪ್ರಯಾಣಿಕರಿಂದ ಹೆಚ್ಚುವರಿ ದರ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಅವೈಜ್ಞಾನಿಕವಾಗಿ ದರ ಏರಿಕೆ ಮತ್ತು ಇಳಿಕೆ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ತಪ್ಪಿಸಿ ಏಕರೂಪದ ದರ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು ; ಈ ಕುರಿತು ಯಾವ ಕಾಲಮಿತಿಯಲ್ಲಿ ಯಾವ ಕ್ರಮ ಕೈಗೊಳ್ಳಲಾಗುವುದು ?

## ಕ್ರಿಯಾ ಯೋಜನೆಗಳ ಕಾಮಗಾರಿಗಳ ಪ್ರಗತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೭ (೨೮೪೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳ ಕ್ರಿಯಾ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಜಿಲ್ಲಾವಾರು ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನಗೊಂಡ ಕಾಮಗಾರಿಗಳು ಯಾವುವು ; ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ? (ಜಿಲ್ಲಾವಾರು, ಯೋಜನೆವಾರು, ಪ್ರಗತಿವಾರು ವಿವರ ನೀಡುವುದು)

## ಅಕ್ರಮ ಸರಕು ಸಾಮಗ್ರಿ ವಶಪಡಿಸಿಕೊಂಡಿರುವ ಬಗ್ಗೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೫೮ (೨೮೪೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮವಾಗಿ ದಾಸ್ತಾನುಗೊಂಡ ಧಾನ್ಯ–ಇನ್ನಿತರ ಸರಕುಗಳನ್ನು ವಶಪಡಿಸಿಕೊಂಡ ಸಂಪೂರ್ಣ ವಿವರ ನೀಡುವುದು ;

(ಆ) ವಶಪಡಿಸಿಕೊಂಡ ಆಹಾರ ಧಾನ್ಯಗಳ ಒಟ್ಟು ಮೊತ್ತವೆಷ್ಟು ;

(ಇ) ಟೆಂಡರ್ ವಶಪಡಿಸಿಕೊಂಡ ಆಹಾರ ಧಾನ್ಯಗಳನ್ನು ಟೆಂಡರ್ ಮೂಲಕ ವಿಕ್ರಯಗೊಳ್ಳಲು ಟೆಂಡರ್ ಕರೆಯಲಾಗಿದೆಯೇ ? (ವಿವರ ನೀಡುವುದು)

## ಅರ್ಹ ವ್ಯಕ್ತಿಗಳಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವುದು

**ಶ್ರೀಮತಿ ತಾರಾ ಅನೂರಾಧ (ನಾಮ ನಿರ್ದೇಶನ ಹೊಂದಿದವರು) :–**

೨೪೫೯ (೨೮೫೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರಣ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆಗೈದಿರುವ ವ್ಯಕ್ತಿಗಳಿಗೆ ರಾಜ್ಯೋತ್ಸವ ಪ್ರಶಸ್ತಿಯನ್ನು ಕೊಡಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಆ) ರಾಜ್ಯೋತ್ಸವ ಪ್ರಶಸ್ತಿಗೆ ಕೊಡುವ ಪ್ರಶಸ್ತಿ ಧನವೆಷ್ಟು ;

(ಇ) ಯಾವುದೇ ಶಿಫಾರಸ್ಸುಗಳು ಪ್ರಭಾವಿ ಲಾಬಿ ಇಲ್ಲದೆ ಅರ್ಹ ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವುದು ಗಗನ ಕುಸುಮವಾಗಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಜನಸಾಮಾನ್ಯರೂ ಈ ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಮಾಡಲು ಮತ ಚಲಾವಣೆ (೫೦%) ಬೇರೆ ಮಾನದಂಡಗಳ ೫೦% ರಂತೆ ಆಯ್ಕೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಮಂಡ್ಯ ಜಿಲ್ಲೆಯ ಶಿವಪುರ ಧ್ವಜಸತ್ಯಾಗ್ರಹ ಅಭಿವೃದ್ಧಿ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೨೪೬೧ (೩೨೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಪುರ ಧ್ವಜಸತ್ಯಾಗ್ರಹ ಸೌಧದ ಅಭಿವೃದ್ಧಿಗೆ ಸರ್ಕಾರದಿಂದ ಬಿಡುಗಡೆ ಆಗಿರುವ ಹಣ ಎಷ್ಟು ; ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ; (ಕಾಮಗಾರಿಯ ಹೆಸರು, ಒದಗಿಸಲಾದ ಮೊತ್ತ ಇವುಗಳ ವಿವರ ಒದಗಿಸುವುದು)

(ಆ) ಪಾದಚಾರಿಗಳ ಮಾರ್ಗ ನಿರ್ಮಾಣಕ್ಕೆ ಹೆಚ್ಚಿನ ಹಣ ಒದಗಿಸಿರುವುದು ಸರಿಯೇ ; ಇಷ್ಟೊಂದು ಹಣದ ಅಗತ್ಯ ಇದೆಯೇ ; ಈ ಅಂದಾಜನ್ನು ಪರಿಷ್ಕರಿಸಲಾಗುವುದೇ ;

(ಇ) ಶೌಚಾಲಯ ಸೌಲಭ್ಯ, ಸ್ವಂತಂತ್ರ್ಯ ಹೋರಾಟಕ್ಕೆ ಸಂಬಂಧಿಸಿದ ಗ್ರಂಥಗಳ ಒಂದು ಗ್ರಂಥಾಲಯ ಯೋಜನೆಯನ್ನು ರೂಪಿಸಿ ಹಣ ಒದಗಿಸಲಾಗುವುದೇ ?

## ಹೊಸ ನ್ಯಾಯ ಬೆಲೆ ಅಂಗಡಿ

**ಶ್ರೀ ವೀರಕುಮಾರ ಅ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೨ (೨೮೫೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಎಷ್ಟು ನ್ಯಾಯಬೆಲೆ ಅಂಗಡಿಗಳನ್ನು ಮುಚ್ಚಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜನಸಂಖ್ಯೆಯ ಆಧಾರದ ಮೇಲೆ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಪ್ರಸಕ್ತ ಸಾಲಿನಲ್ಲಿ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉಡುಪಿ ಜಿಲ್ಲೆಯಲ್ಲಿನ ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೩ (೨೮೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಆ ಅಂಗನವಾಡಿ ಕೇಂದ್ರಗಳಿಗೆ ಹಾಜರಾಗುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; ಆ ಮಕ್ಕಳಿಗೆ ತಿಂಗಳಿಗೆ ಅಗತ್ಯವಿರುವ ಆಹಾರ ಪದಾರ್ಥಗಳ ಪ್ರಮಾಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಆಹಾರ ಪದಾರ್ಥಗಳನ್ನು ಯಾವ ಸಂಸ್ಥೆಗಳಿಂದ, ಯಾವ ಕೇಂದ್ರಗಳಿಂದ ವಿತರಣೆ ಮಾಡಲಾಗುತ್ತಿದೆ ; (ವಿತರಣಾ ವಾಹನಗಳಿದ್ದಲ್ಲಿ, ವಾಹನಗಳ ಮಾಲೀಕರ ಹೆಸರು, ನೋಂದಣಿ ಸಂಖ್ಯೆಯ ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯ ಅಂಗನವಾಡಿಗಳಲ್ಲಿ ಮಕ್ಕಳ ಹಾಜರಾತಿಗಿಂತ ಹೆಚ್ಚಿನ ಪ್ರಮಾಣದ ಆಹಾರ ಪದಾರ್ಥಗಳನ್ನು ಅಕ್ರಮವಾಗಿ ವಿತರಿಸುತ್ತಿರುವ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ವಿರುದ್ಧ ತನಿಖೆ ಮಾಡಿ ಕ್ರಮ ಕೈಗೊಳ್ಳಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಉಡುಪಿ ಜಿಲ್ಲೆಯಲ್ಲಿ ಬಸ್ ರಹದಾರಿಗೆ ಪರವಾನಿಗೆ ಕೋರಿ ಬಂದ ಅರ್ಜಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೪೬೪ (೨೮೬೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಬೇರೆ ಬೇರೆ ಸಂಘ ಸಂಸ್ಥೆಗಳಿಂದ ಮತ್ತು ಗ್ರಾಮ ಪಂಚಾಯತ್‌ಗಳಿಂದ ಖಾಸಗಿ ಅಥವಾ ಸರ್ಕಾರಿ ಬಸ್ಸುಗಳ ಸಂಚಾರಕ್ಕಾಗಿ ಪರವಾನಗಿ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ವರ್ಷಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ರಹದಾರಿ ಪರವಾನಗಿ ನೀಡಲ್ಪಟ್ಟ ಅರ್ಜಿಗಳೆಷ್ಟು ; ಪರವಾನಗಿ ನೀಡಲು ಬಾಕಿ ಇರುವ ಅರ್ಜಿಗಳೆಷ್ಟು ;

(ಇ) ರಹದಾರಿ ಪರವಾನಗಿ ಪಡೆದು ಬಸ್ಸುಗಳನ್ನು ಓಡಿಸುತ್ತಿರುವ ಪರವಾನಗಿದಾರರ ಸಂಖ್ಯೆ ಎಷ್ಟು ; ರಹದಾರಿ ಪರವಾನಗಿ ಪಡೆದು ಬಸ್ಸುಗಳನ್ನು ಓಡಿಸದೆ ಇರುವ ಪರವಾನಗಿದಾರರ ಸಂಖ್ಯೆ ಎಷ್ಟು ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ರಹದಾರಿ ಪರವಾನಗಿ ಪಡೆದು ಬಸ್ಸುಗಳನ್ನು ಓಡಿಸದಿರುವ ಪರವಾನಗಿದಾರರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ; ಇಲ್ಲವಾದಲ್ಲಿ ಇದಕ್ಕೆ ಕಾರಣವೇನು ?

## ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿ ಮಾರ್ಗಸೂಚಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೨೪೬೫ (೨೮೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗನವಾಡಿಯ ಕಾರ್ಯಕರ್ತೆಯರ ನೇಮಕಾತಿಯಲ್ಲಿ ವಿಧವೆಯವರಿಗೆ ಪ್ರಥಮ ಆದ್ಯತೆ ನೀಡುತ್ತಿರುವುದು ನಿಜವೇ ; (ನೇಮಕಾತಿ ಕುರಿತ ಇಲಾಖಾ ಮಾರ್ಗದರ್ಶಿ ಸೂಚಿಯ ಪ್ರತಿ ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ನಿವೃತಿಯಿಂದ ತೆರವಾಗಿರುವ ಸ್ಥಾನಗಳಿಗೆ ಅರ್ಜಿಯನ್ನು ಆಹ್ವಾನಿಸದೇ ವರ್ಗಾವಣೆಯ ಮೂಲಕ ತುಂಬುವುದರೊಂದಿಗೆ ವಿಧವೆಯರಿಗೆ

ವಂಚನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಳ್ಳುವ ಕ್ರಮಗಳೇನು ; ಒಂದು ಪಕ್ಷದಲ್ಲಿ ಇದೇ ಸರ್ಕಾರದ ನೀತಿಯಾದಲ್ಲಿ ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಮಹಿಳಾ ಪ್ರಾಶಸ್ತ್ಯದ ವಂಚನೆಯು ಮಹಿಳಾ ದೌರ್ಜನ್ಯವಾಗುವುದಿಲ್ಲವೆ?

## ರಾಜ್ಯದಲ್ಲಿನ ರಹದಾರಿ ರಾಷ್ಟ್ರೀಕರಣವಾದ ಜಿಲ್ಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೨೪೬೬ (೨೮೬೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಹದಾರಿಗಳ ರಾಷ್ಟ್ರೀಕರಣವಾದ ಜಿಲ್ಲೆಗಳು ಯಾವುವು ; ಮತ್ತು ರಾಷ್ಟ್ರೀಕರಣವಾಗದ ಜಿಲ್ಲೆಗಳು ಯಾವುವು ; ರಾಷ್ಟ್ರೀಕರಣವಾದ ವರ್ಷ ಯಾವುದು ;

(ಆ) ಖಾಸಗಿ ಬಸ್ಸಿನವರಿಗೆ ತೊಂದರೆಯಾಗದ ರೀತಿಯಲ್ಲಿ, ವಿದ್ಯಾರ್ಥಿಗಳು ಮತ್ತು ನಾಗರೀಕರಿಗೆ ಅನುಕೂಲವಾಗುವಂತೆ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳನ್ನು ಸಂಚರಿಸಲು ಕ್ರಮ ಕೈಗೊಳ್ಳಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಕೆಲವು ರಸ್ತೆಗಳಲ್ಲಿ ಖಾಸಗಿಯವರ ಬಸ್ಸುಗಳಾಗಲಿ, ಕೆ.ಎಸ್.ಆರ್.ಟಿ.ಸಿ ಬಸ್ಸುಗಳಾಗಲಿ ಸಂಚರಿಸದೆ ಇರುವುದರಿಂದ, ವಿದ್ಯಾರ್ಥಿಗಳು ಮತ್ತು ನಾಗರಿಕರು ಸೌಕರ್ಯವಿಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ತುರ್ತು ಕ್ರಮಗಳಾವುವು ?

## ಕುಂದಾಪುರ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿರುವ ಅಂಗನವಾಡಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೨೪೬೭ (೨೮೬೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಂದಾಪುರ ತಾಲ್ಲೂಕಿನಲ್ಲಿರುವ ಒಟ್ಟು ಪ್ರಾಥಮಿಕ ಕೇಂದ್ರಗಳ ಸಂಖ್ಯೆ ಎಷ್ಟು ; ಈ ಪ್ರಾಥಮಿಕ ಕೇಂದ್ರಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; (ಕೇಂದ್ರವಾರು ವಿವರ ನೀಡುವುದು)

(ಆ) ಕುಂದಾಪುರ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಕೇಂದ್ರಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿಗಳ ಮಕ್ಕಳ ಸಂಖ್ಯೆ ಎಷ್ಟು ; ಈ ಅಂಗನವಾಡಿ ಕೇಂದ್ರಗಳಿಗೆ ವೈದ್ಯರು ಹಾಗೂ ಆರೋಗ್ಯ ಸಿಬ್ಬಂದಿಗಳು ಎಷ್ಟು ದಿನಕ್ಕೊಮ್ಮೆ ಭೇಟಿ ನೀಡುತ್ತಾರೆ ; (ಪ್ರಾಥಮಿಕ ಕೇಂದ್ರವಾರು ವಿವರ ನೀಡುವುದು)

(ಇ) ಕುಂದಾಪುರ ತಾಲ್ಲೂಕಿನಲ್ಲಿರುವ ಅಂಗನವಾಡಿಗಳಲ್ಲಿನ ಮಕ್ಕಳ ದೈಹಿಕ ಸಮಸ್ಯೆ (Under Weight) ಗಳಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ? (ಪ್ರಾಥಮಿಕ ಕೇಂದ್ರವಾರು ವಿವರ ನೀಡುವುದು)

## ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದ ಅನುಷ್ಠಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೬೮ (೨೮೮೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಶಾಸಕರಿಗೆ ನೀಡುವ ಅನುದಾನದ ಅನುಷ್ಠಾನದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೨-೧೩, ೨೦೧೩-೧೪ ಮತ್ತು ೨೦೧೪-೧೫ರ ಕಾಮಗಾರಿ ವಿವರ, ಅನುದಾನ ನೀಡಿದ ದಿನಾಂಕ, ಮೊತ್ತ ಕಾಮಗಾರಿಗೆ ಹಣ ಬಿಡುಗಡೆ ಮಾಡಿದ ದಿನಾಂಕ, ಕಾಮಗಾರಿಯ ಪ್ರಗತಿ ಅನುಷ್ಠಾನಗೊಳಿಸಿದ ಪೂರ್ಣ ವಿವರಗಳನ್ನು ಒದಗಿಸುವುದು ? (ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ, ಮೈಸೂರು, ಹಾಸನ, ತುಮಕೂರು, ಕೋಲಾರ, ಮಂಡ್ಯ, ಚಿಕ್ಕಮಗಳೂರು, ಚಾಮರಾಜನಗರ, ಉಡುಪಿ ಜಿಲ್ಲೆಗಳ ಪೂರ್ಣ ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿದ್ಯಾಸಂಸ್ಥೆಗಳಿಗೆ ಸಮುದಾಯ ಭವನಗಳಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೬೮(ಎ) (೨೮೮೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸಮುದಾಯ ಭವನ ಕಟ್ಟಡ, ವಿದ್ಯಾರ್ಥಿನಿಲಯ ಕಟ್ಟಡ ಮತ್ತು ವಿದ್ಯಾರ್ಥಿ ಶಾಲಾ ಕಟ್ಟಡ ನಿರ್ಮಾಣಕ್ಕೆ ಹಿಂದುಳಿದ ವರ್ಗಗಳಿಗೆ ಸರ್ಕಾರ ಅನುದಾನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಆ ಬಾಬ್ತಿಗಾಗಿ ಸರ್ಕಾರ ಆಯವ್ಯಯದಲ್ಲಿ ಮೀಸಲಿಟ್ಟ ಮೊತ್ತ ಎಷ್ಟು ; ಇದುವರೆವಿಗೆ ಖರ್ಚಾಗಿರುವ ಮೊತ್ತವೆಷ್ಟು ; ವರ್ಷವಾರು ವಿವರ ಒದಗಿಸುವುದು ;

(ಇ) ೨೦೧೪-೧೫, ೨೦೧೫-೧೬ನೇ ಸಾಲಿನಲ್ಲಿ ಆ ಬಾಬ್ತುಗಳಿಗಾಗಿ ವಿವಿಧ ಸಂಘ ಸಂಸ್ಥೆಗಳಿಂದ ಅನುದಾನ ಕೋರಿ ಬಂದ ಒಟ್ಟು ಮನವಿಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ಒದಗಿಸುವುದು)

(ಈ) ಅದರಲ್ಲಿ ಆಗಿರುವ ಮನವಿಗಳ ಸಂಖ್ಯೆ ಎಷ್ಟು ; ಅನುಷ್ಠಾನಗೊಂಡಿರುವ ಮತ್ತು ಅನುಷ್ಠಾನಗೊಳ್ಳುತ್ತಿರುವ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಖಾಸಗಿ ಕಟ್ಟಡಗಳ ಮೇಲೆ ಟಿ.ವಿ. ಟವರ್‌ಗಳನ್ನು ನಿರ್ಮಾಣ ಮಾಡುತ್ತಿರುವ ಕುರಿತು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೬೯ (೨೮೬೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖಾಸಗಿ ಕಟ್ಟಡಗಳ ಮೇಲೆ ಟಿ.ವಿ. ಟವರ್‌ಗಳನ್ನು ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಂತಹ ಟವರ್‌ಗಳಿಂದ ಸುತ್ತಮುತ್ತ ವಾಸಿಸುವ ಸಾರ್ವಜನಿಕರ ಆರೋಗ್ಯಕ್ಕೆ ಹಾನಿಕಾರ ಎಂಬ ಅಂಶವನ್ನು ಸರ್ಕಾರ ಗಮನಿಸಿದೆಯೇ ;

(ಇ) ಅಂತಹ ಟವರ್‌ಗಳನ್ನು ಸ್ಥಾಪಿಸಲು ಬಿಬಿಎಂಪಿ ಲೈಸನ್ಸ್ ನೀಡಿದೆಯೇ;

(ಈ) ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಟಿ.ವಿ. ಟವರ್‌ಗಳನ್ನು ತೆರವುಗೊಳಿಸಲು ಹಾಗೂ ಇದಕ್ಕೆ ಸೂಕ್ತ ನೀತಿ ನಿಯಮಗಳನ್ನು ನಿಗದಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ಹಾಗೂ ಎಷ್ಟು ದಿನಗಳಲ್ಲಿ ಇದನ್ನು ಕಾರ್ಯಗತ ಮಾಡಲಾಗುವುದು ?

## ಹುಬ್ಬಳ್ಳಿ ಡಿಪೋನಲ್ಲಿ ಗುಜರಿಗೆ ಹೊಸ ಬಸ್ಸುಗಳನ್ನು ಕಳುಹಿಸುವುದರ ಅವ್ಯವಹಾರದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೭೦ (೩೧೭೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ ಡಿಪೋನಲ್ಲಿ NWKSRTC ನಿರುಪಯುಕ್ತ ಬಸ್ಸುಗಳನ್ನು ಗುಜರಿಗೆ ಕಳುಹಿಸುವ ಬದಲಿಗೆ ಹೊಸ ಬಸ್ಸುಗಳನ್ನು ಕಳುಹಿಸಿ ಅವ್ಯವಹಾರ ನಡೆಸಿರುವುದು ನಿಜವೇ ; (ಗುಜರಿ ಮಾಫಿಯಾ)

(ಆ) ಹಾಗಿದ್ದಲ್ಲಿ, ಎಷ್ಟು ಹೊಸ ಬಸ್ಸುಗಳನ್ನು ಗುಜರಿಗೆ ಕಳುಹಿಸಲಾಗಿದೆ ; ಇದಕ್ಕೆ ಶಿಫಾರಸ್ಸು ಮಾಡಿದ ಅಧಿಕಾರಿಗಳು ಯಾರು ; ಸದರಿ ಬಸ್ಸುಗಳ ಒಟ್ಟು ಮೊತ್ತ ಎಷ್ಟು ; ತಪ್ಪಿತಸ್ಥರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೭೧ (೨೯೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲೆಮಾರಿ/ಅರೆ ಅಲೆಮಾರಿ ಜನಾಂಗದಲ್ಲಿನ ಮೌಢ್ಯತೆ ಹೋಗಲಾಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ಪ್ರತ್ಯೇಕ ನಿಗಮ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು ?

## ಗೊಲ್ಲರ ಹಟ್ಟಿಗಳ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೭೨ (೨೮೮೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಗೊಲ್ಲರ ಹಟ್ಟಿಗಳ ಸಂಖ್ಯೆ ಎಷ್ಟು ;

(ಆ) ಗೊಲ್ಲರ ಹಟ್ಟಿಗಳ ಅಭಿವೃದ್ಧಿಗೆ ಮೀಸಲಿಟ್ಟಿರುವ ಅನುದಾನವೆಷ್ಟು ;

(ಇ) ೨೦೧೫ನೇ ಸಾಲಿನಲ್ಲಿ, ಎಷ್ಟು ಗೊಲ್ಲರ ಹಟ್ಟಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗಿದೆ ? (ವಿವರ ನೀಡುವುದು)

## ಬಿ.ಸಿ.ಎಂ. ವಿದ್ಯಾರ್ಥಿ ನಿಲಯ ಆರಂಭಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೭೩ (೨೯೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಸತಿ ನಿಲಯ (BCM Hostel) ಗಳನ್ನು ಚಿತ್ರದುರ್ಗದಲ್ಲಿ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಇ) ಇದ್ದಲ್ಲಿ, ಯಾವಾಗ ವಸತಿ ನಿಲಯ ಆರಂಭಿಸಲಾಗುವುದು ?

## ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ವಸತಿ ಸೌಕರ್ಯದ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೭೪ (೨೮೬೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ವಸತಿ ಸೌಕರ್ಯ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಈ ಜನಾಂಗದ ಜನಸಂಖ್ಯೆಗೆ ಅನುಗುಣವಾಗಿ ವಸತಿ ಸೌಕರ್ಯವನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ ಯಾವ ಜಿಲ್ಲೆಗೆ ಎಷ್ಟೆಷ್ಟು ಪ್ರಮಾಣದಲ್ಲಿ ವಸತಿ ಸೌಕರ್ಯ ಒದಗಿಸಲು ಸರ್ಕಾರ ಉದ್ದೇಶಿಸಿದೆ ? (ಜಿಲ್ಲಾವಾರು ವಿವರ ನೀಡುವುದು)

## ವಿದ್ಯಾಸಿರಿ ಯೋಜನೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೭೫ (೨೮೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯಾಸಿರಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ನೀಡುತ್ತಿರುವ ಹಣ ಎಷ್ಟು ;

(ಆ) ಈ ಮೊತ್ತವನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಶೇ. ೪೫ ಅಥವಾ ಹೆಚ್ಚು ಅಂಕ ಪಡೆದಿರುವ ವಿದ್ಯಾರ್ಥಿಗಳಿಗೆ ಮಾತ್ರ ಈ ಯೋಜನೆ ಅನ್ವಯಿಸುತ್ತಿದ್ದು, ಈ ಮಾನದಂಡವನ್ನು ತೆಗೆದುಹಾಕುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಮೊರಾರ್ಜಿ ವಸತಿ ಶಾಲೆಗಳಿಗೆ ಕುಡಿಯುವ ನೀರು ಶುದ್ಧೀಕರಣ ಯಂತ್ರಗಳ ಸರಬರಾಜು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೪೭೬ (೩೦೮೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ವಸತಿ ಶಾಲೆಗಳಿಗೆ ಕುಡಿಯುವ ನೀರು ಶುದ್ಧೀಕರಣ ಯಂತ್ರ ಸರಬರಾಜು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದರೆ ಸದರಿ ಯೋಜನೆಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಮೊರಾರ್ಜಿ ವಸತಿ ಶಾಲೆಗಳಿಗೆ ಕುಡಿಯುವ ನೀರು ಶುದ್ಧೀಕರಣ ಯಂತ್ರಗಳನ್ನು ಖರೀದಿಸಲು ದರಪಟ್ಟಿ ಕರೆಯಲಾಗಿದೆಯೇ; ಹಾಗಾದರೆ, ದರಪಟ್ಟಿ ಸಲ್ಲಿಸುವುದಕ್ಕಾಗಿ ಜಾಹೀರಾತು ನೀಡಲಾಗಿರುವ ಸ್ಥಳೀಯ ಪತ್ರಿಕೆಗಳು ಯಾವುವು ; (ಮಾಹಿತಿ ನೀಡುವುದು)

(ಇ) ಜಾಹೀರಾತಿನಂತೆ ದರಪಟ್ಟಿ ಸಲ್ಲಿಸಿದ ಏಜೆನ್ಸಿಗಳು ಯಾವುವು; (ಮಾಹಿತಿ ನೀಡುವುದು)

(ಈ) ಮೊರಾರ್ಜಿ ವಸತಿ ಶಾಳೆಗಳಿಗೆ ಕುಡಿಯುವ ನೀರು ಶುದ್ಧೀಕರಣ ಯಂತ್ರ ಸರಬರಾಜು ಮಾಡಲು ವಹಿಸಿದ ಏಜೆನ್ಸಿಗಳು ಯಾವುವು; ಯಾವ ಮಾನದಂಡಗಳ ಆಧಾರದ ಮೇಲೆ ವಹಿಸಲಾಗಿದೆ? (ಮಾಹಿತಿ ನೀಡುವುದು)

## ಡೆಂಗ್ಯೂ ವೈರಾಣುಗಳನ್ನು ಸಂಪೂರ್ಣವಾಗಿ ಪತ್ತೆ ಹಚ್ಚಿ ನಿರ್ಮೂಲನೆ ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೪೭೭ (೩೦೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅರ್ಧದಷ್ಟು ಜನರು ಡೆಂಗ್ಯೂ ಜ್ವರದಿಂದ ಬಳಲುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಖಾಯಿಲೆಯಿಂದ ಬಳಲುತ್ತಿರುವ ಜನಸಂಖ್ಯೆ ಎಷ್ಟು ; ಆಸ್ಪತ್ರೆಗಳಲ್ಲಿ ದಾಖಲಾಗಿರುವ ರೋಗಿಗಳ ಸಂಖ್ಯೆ ಹಾಗೂ ಡೆಂಗ್ಯೂ ಜ್ವರದಿಂದ ವಾಸಿಯಾಗಿರುವವರ ಸಂಖ್ಯೆ ಮತ್ತು ಮೃತಪಟ್ಟಿರುವ ಜನಸಂಖ್ಯೆ ಎಷ್ಟು ; ಮೃತಪಟ್ಟಿರುವ ಕುಟುಂಬಗಳಿಗೆ ಸರ್ಕಾರದಿಂದ ಪರಿಹಾರ ನೀಡಲಾಗುತ್ತಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಡೆಂಗ್ಯೂ ವೈರಾಣುಗಳನ್ನು ಶೀಘ್ರ ಪತ್ತೆ ಹಚ್ಚಿ ಸಂಪೂರ್ಣ ನಿರ್ಮೂಲನೆ ಮಾಡಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ;

(ಈ) ಈ ಡೆಂಗ್ಯೂ ವೈರಸ್‌ನಿಂದ ಹರಡುವ ನಾಲ್ಕು ಬಗೆಯ ರೋಗವನ್ನು ತಡೆಯಲು “ಡೆಂಗ್ಯೂ ನಿರೋಧಕ ಲಸಿಕೆ” ತಯಾರಿಸಲು ಯಾವ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಆ ಸಂಸ್ಥೆಗಳ ಹೆಸರೊಂದಿಗೆ ಮಾಹಿತಿ ನೀಡುವುದು)

## ಬಳ್ಳಾರಿ ಜಿಲ್ಲೆಯ ಹೊಸಪೇಟೆ ನಗರದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೪೭೮ (೩೦೯೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯ ಹೊಸಪೇಟೆ ನಗರದಲ್ಲಿ ಲಾರಿಗಳ ತಂಗುದಾಣ (ಟ್ರಕ್ ಟರ್ಮಿನಲ್) ನಿರ್ಮಾಣ ಮಾಡುವ ವಿಷಯ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಯೋಜನೆ ಸರ್ಕಾರದಿಂದ ಮಂಜೂರಾಗಿದ್ದು ಯಾವಾಗ ; (ಮಾಹಿತಿ ನೀಡುವುದು)

(ಆ) ಈ ಯೋಜನೆಗಾಗಿ ಸರ್ಕಾರದಿಂದ ಸ್ವಾಧೀನಪಡಿಸಿಕೊಳ್ಳಲಾದ ಜಮೀನು ಎಷ್ಟು ;

(ಇ) ಸದರಿ ಯೋಜನೆಯ ಕಾಮಗಾರಿಯ ಪ್ರಗತಿಯಲ್ಲಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳುವುದು? (ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳಿಗೆ ಎಸ್.ಸಿ.ಪಿ./ ಟಿ.ಎಸ್.ಪಿ. ಯೋಜನೆಯಲ್ಲಿ ಬಿಡುಗಡೆಯಾಗಿರುವ ಹಣ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೪೭೯ (೩೦೯೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ (ಎಸ್.ಸಿ.ಪಿ./ಟಿ.ಎಸ್.ಪಿ.) ಯೋಜನೆಯಡಿ ಹೈದರಾಬಾದ್–ಕರ್ನಾಟಕ ಜಿಲ್ಲೆಗಳಿಗೆ ೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿಗೆ ಸರ್ಕಾರದಿಂದ ಬಿಡುಗಡೆಯಾದ, ಖರ್ಚಾದ ಹಾಗೂ ಬಾಕಿ ಉಳಿದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳು ಎಷ್ಟು ; ಅವು ಯಾವುವು ; ಕೈಗೊಂಡ ಕಾಮಗಾರಿಗಳ ಪೈಕಿ ಪೂರ್ಣಗೊಂಡ ಹಾಗೂ ಬಾಕಿ ಉಳಿದ ಕಾಮಗಾರಿಗಳು ಎಷ್ಟು ; (ಮಾಹಿತಿ ನೀಡುವುದು)

(ಇ) ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳು ಹಾಗೂ ಹರಪನಹಳ್ಳಿ ತಾಲ್ಲೂಕು ಸೇರಿದಂತೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ (ಎಸ್.ಸಿ.ಪಿ./ಟಿ.ಎಸ್.ಪಿ.) ಯೋಜನೆಯಡಿ ಹೈದರಬಾದ್–ಕರ್ನಾಟಕ ಜಿಲ್ಲೆಗಳಿಗೆ ೨೦೧೫–೧೬ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಸರ್ಕಾರದಿಂದ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಮಂಜೂರು ಮಾಡಲಾಗಿರುವ ಹಣ ಎಷ್ಟು ? (ವಿವರ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ವೇರ್ ಹೌಸ್, ಗೋದಾಮುಗಳಿಂದ ಜಪ್ತಿ ಮಾಡಿದ ಆಹಾರ ಪದಾರ್ಥಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೪೮೦ (೨೮೬೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಅಕ್ಟೋಬರ್–ನವೆಂಬರ್ ತಿಂಗಳಲ್ಲಿ ಹೈದರಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ವೇರ್ ಹೌಸ್ ಹಾಗೂ ಇತರೆ ಗೋದಾಮುಗಳಿಂದ ಜಪ್ತಿ ಮಾಡಿದ ಆಹಾರ ಧಾನ್ಯಗಳ ಪ್ರಮಾಣ ಎಷ್ಟು ; (ಆಹಾರ, ಧಾನ್ಯಗಳವಾರು, ಪ್ರಮಾಣವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಪ್ತಿ ಮಾಡಿದ ಆಹಾರ ಧಾನ್ಯಗಳ ಮಾರುಕಟ್ಟೆ ಬೆಲೆ ಎಷ್ಟು ; ಜಪ್ತಿ ಮಾಡುವುದಕ್ಕಿಂತ ಪೂರ್ವದ ಹಾಗೂ ಜಪ್ತಿ ಆದ ನಂತರದ ದರ ಎಷ್ಟು ; (ಆಹಾರ ಧಾನ್ಯವಾರು ಬೆಲೆ ನೀಡುವುದು)

(ಇ) ಆಹಾರ ಧಾನ್ಯಗಳನ್ನು ಜಪ್ತಿ ಮಾಡಲು ಕಾರಣಗಳೇನು ; ಇದರಿಂದ ಯಾವ ಯಾವ ಆಹಾರ ಧಾನ್ಯಗಳ ಬೆಲೆಗಳು ಕಡಿಮೆಯಾಗಿವೆ? (ಆಹಾರ ಧಾನ್ಯಗಳವಾರು, ದರವಾರು ಸಂಪೂರ್ಣ ಮಾಹಿತಿ ನೀಡುವುದು)

## ಪಡಿತರ ವ್ಯವಸ್ಥೆಯಲ್ಲಿರುವ ಲೋಪಗಳನ್ನು ಬಗೆಹರಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೮೧ (೨೮೮೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಹಾರ ಇಲಾಖೆ ಸೆನ್ಸ್‌ಸ್ ಪ್ರಕಾರ ರಾಜ್ಯದಲ್ಲಿರುವ ಒಟ್ಟು ಕುಟುಂಬಗಳೆಷ್ಟು ; ಈ ಕುಟುಂಬಗಳ ಪೈಕಿ ಅಂತ್ಯೋದಯ ಕಾರ್ಡ್, ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್ ನೀಡಿರುವ ಕುಟುಂಬಗಳೆಷ್ಟು ;

(ಆ) ರಾಜ್ಯದಲ್ಲಿ ಈವರೆಗೆ ಪತ್ತೆ ಹಚ್ಚಿರುವ ಬೋಗಸ್ ಕಾರ್ಡ್‌ಗಳೆಷ್ಟು; ಇವುಗಳನ್ನು ವಿತರಿಸಿರುವ ಅಧಿಕಾರಿಗಳ ಮತ್ತು ಪಡೆದವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಇ) ಬೋಗಸ್ ಪಡಿತರ ಕಾರ್ಡ್‌ಗಳಿಂದ ಉಂಟಾಗಿರುವ ನಷ್ಟವೆಷ್ಟು; ನಷ್ಟ ವಸೂಲಾತಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಬೋಗಸ್ ಕಾರ್ಡ್‌ಗಳ ರದ್ದತಿಯ ಹೆಸರಲ್ಲಿ ಬಡವರ ಹಾಗೂ ಅಸಹಾಯಕರ ಕಾರ್ಡ್‌ಗಳನ್ನು ಮಾತ್ರ ರದ್ದುಗೊಳಿಸುವುದನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು ?

## ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರ ಕೊರತೆ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೮೨ (೨೮೮೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಒಟ್ಟು ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ;

(ಆ) ಆರೋಗ್ಯ ಕೇಂದ್ರಗಳಲ್ಲಿ ಒಟ್ಟು ಇರುವ ತಜ್ಞ ವೈದ್ಯರೆಷ್ಟು ಮತ್ತು ಸ್ಥಾನೀಕ ವೈದ್ಯರೆಷ್ಟು ;

(ಇ) ಆರೋಗ್ಯ ಕೇಂದ್ರಗಳಲ್ಲಿ ಸಕಾಲದಲ್ಲಿ ಬಡವರಿಗೆ ವೈದ್ಯಕೀಯ ಸೇವೆ ಸಿಗುವಂತಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಹಾಸನದ ಹೈಟೆಕ್ ಆಸ್ಪತ್ರೆಯ ಪ್ರಾರಂಭಕ್ಕೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಸದರಿ ನೂತನ ಆಸ್ಪತ್ರೆಗೆ ಅಗತ್ಯವಿರುವ ಹಣವನ್ನು ಬಿಡುಗಡೆ ಮಾಡಿ ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳೇನು?

## ಸರ್ಕಾರಿ ಬಸ್ಸುಗಳಿಗೆ ಟೋಲ್ ವಿಧಿಸುತ್ತಿರುವ ಬಗ್ಗೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೮೩ (೨೮೬೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಟಿ.ಸಿ./ವಾಯುವ್ಯ/ಈಶಾನ್ಯ ನಿಗಮಗಳ ಸರ್ಕಾರಿ ಬಸ್ಸುಗಳು ಟೋಲ್ ಪಾವತಿಸಿ ಸಂಚರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು ; (ನಿಗಮವಾರು ವಿವರ ನೀಡುವುದು)

(ಆ) ಸದರಿ ಬಸ್ಸುಗಳಿಗೆ ಟೋಲ್ ಪಾವತಿಸಲು ದಿನಕ್ಕೆ/ತಿಂಗಳಿಗೆ/ವರ್ಷಕ್ಕೆ ಎಷ್ಟು ಹಣವನ್ನು ಪಾವತಿಸಲಾಗುತ್ತಿದೆ ; (ನಿಗಮವಾರು ವಿವರ ನೀಡುವುದು) ಈ ಹಣವನ್ನು ಟಿಕೇಟ್‌ನಲ್ಲೆ ಹೆಚ್ಚು ದರ ವಿಧಿಸಿ, ಪ್ರಯಾಣಿಕರಿಂದ ವಸೂಲು ಮಾಡಲಾಗುತ್ತಿದೆಯೇ; ಅಥವಾ ಆಯಾ ನಿಗಮಗಳು ಭರಿಸುತ್ತಿವೆಯೇ ; (ಸ್ಪಷ್ಟವಾದ ವಿವರ ನೀಡುವುದು)

(ಇ) ರಾಜ್ಯ ಸರ್ಕಾರಿ ವಾಹನಗಳಿಗೆ (ಕಾರು/ಜೀಪು/ಇತರೆ ವಾಹನಗಳು) ಟೋಲ್ ಪಾವತಿಸಲು ವಿನಾಯಿತಿ ಇರುವುದರಿಂದ ಟೋಲ್ ಪಾವತಿಸಲು ಪ್ರಯಾಣಿಕರ ಮೇಲೆ ಅಧಿಕ ಆರ್ಥಿಕ ಹೊರೆ ಹಾಕುವುದನ್ನು ಕಡಿಮೆ ಮಾಡಲು ಸರ್ಕಾರಿ ಬಸ್ಸುಗಳಿಗೂ ವಿನಾಯಿತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸಾರಿಗೆ ಇಲಾಖೆಯು ಜಪ್ತಿ ಮಾಡಿದ ವಾಹನಗಳ ವಿಲೇವಾರಿ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮೪ (೨೮೭೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳ ಅವಧಿಯಲ್ಲಿ ವಿವಿಧ ಕಾರಣಗಳಿಗಾಗಿ ಸಾರಿಗೆ ಇಲಾಖೆಯು ಜಪ್ತಿ ಮಾಡಿದ ವಾಹನಗಳ ಸಂಖ್ಯೆ ಎಷ್ಟು; ಜಪ್ತಿ ಮಾಡಲಾದ ವಾಹನಗಳ ಪೈಕಿ ವಿಲೇವಾರಿ ಮಾಡಲಾದ ವಾಹನಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಜಪ್ತಿಗೊಂಡ ವಾಹನಗಳನ್ನು ಶೀಘ್ರ ವಿಲೇವಾರಿ ಮಾಡುವಲ್ಲಿನ ವಿಳಂಬದಿಂದಾಗಿ ಆರ್.ಟಿ.ಓ. ಕಚೇರಿಗಳು ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ವಾಹನಗಳು ಭಾರಿ ಸಂಖ್ಯೆಯಲ್ಲಿ ನಿಂತಿರುವುದು ನಿಜವೇ; ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಯಾವುವು? (ಸಂಪೂರ್ಣ ಮಾಹಿತಿ ಒದಗಿಸುವುದು)

## ವೈದ್ಯಕೀಯ ಕ್ಷೇತ್ರವು ವಾಣಿಜ್ಯಕರಣಗೊಳ್ಳುತ್ತಿರುವ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೮೫ (೨೮೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯಕೀಯ ಕ್ಷೇತ್ರವು ಸೇವಾ ಕ್ಷೇತ್ರವಾಗಿರದೇ ಇತ್ತೀಚೆಗೆ ವಾಣಿಜ್ಯ ಕ್ಷೇತ್ರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು ;

(ಆ) ಈ ಅಪವಾದ ತಪ್ಪಿಸಲು ಸರ್ಕಾರ ಮುಂದಾಗುವುದೇ ; ಈ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು ;

(ಇ) ಜಾನಪದ ವೈದ್ಯ ಪದ್ಧತಿಯ ಶಿಕ್ಷಣವನ್ನು ಆಯುಷ್ ಇಲಾಖೆ ಹೊರತುಪಡಿಸಿ ಯಾರಿಗೆ ಅವಕಾಶ ನೀಡಲಾಗಿದೆ ;

(ಈ) ಆಯುರ್ವೇದ, ನಾಟಿವೈದ್ಯ, ಗಿಡಮೂಲಿಕೆ ವೈದ್ಯ, ನ್ಯಾಚುರೋಪತಿ ಚಿಕಿತ್ಸೆಗಳ ನೆಪದಲ್ಲಿ ಸಾರ್ವಜನಿಕರಿಂದ ಯಥೇಚ್ಛವಾಗಿ ಹಣ ಸುಲಿಗೆ ಮಾಡುತ್ತಿರುವುದು ಕಂಡುಬಂದಿದೆಯೇ; ಹಾಗಿದ್ದಲ್ಲಿ ಇದರ ತಡೆಗೆ ಸರ್ಕಾರ ಮುಂದಾಗುವುದೇ ;

(ಉ) ಈ ನಿಟ್ಟಿನಲ್ಲಿ ಮಸಾಜ್ ಪಾರ್ಲ್‌ರ್‌ಗಳು, ಸ್ಪಾ ಸೆಂಟರ್‌ಗಳು ಪಂಚಕರ್ಮ ಪದ್ಧತಿಯ ಚಿಕಿತ್ಸೆ ನೀಡಲು ಪರಿಣತರಲ್ಲದ ಸಿಬ್ಬಂದಿಗಳನ್ನು ನೇಮಕ ಮಾಡಿ ದಂಧೆ ಪ್ರಾರಂಭಿಸಿರುವ ಬಗ್ಗೆ ಸರ್ಕಾರದ ನಿಲುವೇನು ; ಇದರ ಪತ್ತೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## SCP ಯೋಜನೆಯ ಅನುಷ್ಠಾನ ಕಾಯ್ದೆಯನ್ನು ಜಾರಿಗೊಳಿಸುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮೬ (೨೮೭೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ವಿಶೇಷ ಘಟಕ ಯೋಜನೆಯ ಅನುಷ್ಠಾನ ಕಾಯ್ದೆಯನ್ನು ಸರ್ಕಾರ ಜಾರಿಗೊಳಿಸಿದೆಯೇ ಹಾಗೂ ಈ ಕಾನೂನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲಾಗಿದೆಯೇ ;

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸೌಲಭ್ಯವನ್ನು ವಂಚಿಸಿದ ಪ್ರಕರಣಗಳೆಷ್ಟು ; ಯಾವ ಯಾವ ಪ್ರಕರಣಗಳಲ್ಲಿ ಯಾವ ಯಾವ ಅಧಿಕಾರಿಗಳು ಭಾಗಿಯಾಗಿದ್ದಾರೆ ;

(ಇ) ಹಾಗಿದ್ದಲ್ಲಿ, ಈ ಪ್ರಕರಣಗಳಲ್ಲಿ ಭಾಗಿಯಾಗಿಯಾದ ಯಾವ ಯಾವ ಅಧಿಕಾರಿಗಳಿಗೆ ಶಿಕ್ಷೆ ನೀಡಲಾಗಿದೆ ;

(ಈ) ಕಾಯ್ದೆ ಜಾರಿಗೊಂಡು ೩ ವರ್ಷಗಳಾದರೂ ಕಾನೂನು ಜಾರಿಗೆ ತರಲು ವಿಳಂಬವೇಕೆ ; ಇದಕ್ಕೆ ಕಾರಣವೇನು ?

## ಕೆ.ಎಸ್.ಆರ್.ಟಿ.ಸಿ. ಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮೭ (೨೮೭೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಇವರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು ; (ವಿಭಾಗವಾರು ಮಾಹಿತಿ ನೀಡುವುದು)

(ಇ) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಲಭ್ಯವಿರುವ ಮೀಸಲಾತಿ ನಿಯಮಗಳನ್ನು ಅಳವಡಿಸಲಾಗಿದೆಯೇ ;

(ಈ) ಅಳವಡಿಸಿದ್ದಲ್ಲಿ ಬಡ್ತಿಯಲ್ಲಿ ಮೀಸಲಾತಿ ನೀಡುವಾಗ ಎಷ್ಟು ವರ್ಷಗಳ ರಿಯಾಯಿತಿ ನೀಡಲಾಗಿದೆ ?

## ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮೮ (೨೮೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನ ಮುಂಗಡ ಪತ್ರದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಶೈಕ್ಷಣಿಕ ಅಭಿವೃದ್ಧಿಗಾಗಿ ಸಂಘ ಸಂಸ್ಥೆಗಳಿಗೆ ವಿಶೇಷ ಅನುದಾನ ನೀಡಲು ಸರ್ಕಾರ ಘೋಷಣೆ ಮಾಡಿರುತ್ತದೆಯೇ ;

(ಆ) ೨೦೧೫–೧೬ನೇ ಸಾಲಿನಲ್ಲಿ ಈ ಯೋಜನೆಗೆ ಮೀಸಲಿಟ್ಟ ಒಟ್ಟು ಹಣದ ಮೊತ್ತ ಎಷ್ಟು ; ವಿತರಣೆ ಮಾಡಿದ ಅನುದಾನ ಮೊತ್ತ ಎಷ್ಟು ;

(ಇ) ಯಾವ ಯಾವ ಸಂಸ್ಥೆಗಳಿಗೆ ಎಷ್ಟು ಹಣ ನೀಡಲಾಗಿದೆ ; (ವಿವರ ನೀಡುವುದು)

(ಈ) ಮುಖ್ಯ ಮಂತ್ರಿಗಳು ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಮಂಜೂರು ಮಾಡಿದ್ದರೂ ಇಲಾಖೆಯು ಯಾವ ಯಾವ ಶಿಕ್ಷಣ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡದೆ ತಡೆಹಿಡಿಯಲಾಗಿದೆ ; ಇದಕ್ಕೆ ಕಾರಣವೇನು ?

## ಸಾಮೂಹಿಕವಾಗಿ ಸರಳ ವಿವಾಹ ಆಚರಣೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೮೯ (೨೮೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫-೧೬ನೇ ಸಾಲಿನ ಬಜೆಟ್‌ನಲ್ಲಿ ಸಾಮೂಹಿಕವಾಗಿ ಸರಳ ವಿವಾಹ ಕಾರ್ಯಕ್ರಮದಲ್ಲಿ ಸರಳವಾಗಿ ವಿವಾಹ ಮಾಡಿಕೊಳ್ಳುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕುಟುಂಬಗಳಿಗೆ ರೂ.೫೦,೦೦೦/-ಗಳಂತೆ ಆರ್ಥಿಕ ನೆರವನ್ನು ನೀಡಲಾಗುವುದೆಂದು ಘೋಷಣೆ ಮಾಡಲಾಗಿತ್ತೆ;

(ಆ) ಈ ಘೋಷಣೆಯಂತೆ ಇದುವರೆವಿಗೆ ಎಷ್ಟು ಕುಟುಂಬಗಳಿಗೆ ಆರ್ಥಿಕ ನೆರವನ್ನು ನೀಡಲಾಗಿದೆ ; ಈ ಕುಟುಂಬಗಳ ವಿವರ ನೀಡುವುದು ;

(ಇ) ಪರಿಶಿಷ್ಟ ಜಾತಿಯ ಅಂತರ ಜಾತಿ ವಿವಾಹ ಮಾಡಿಕೊಂಡಲ್ಲಿ ಪ್ರತಿ ಕುಟುಂಬದವರಿಗೆ ರೂ. ೨.೦೦ ಲಕ್ಷಗಳಿಂದ ರೂ. ೩.೦೦ ಲಕ್ಷಗಳ ಸಹಾಯಧನ ನೀಡಲಾಗುವುದೆಂದು ಘೋಷಣೆ ಮಾಡಲಾಗಿತ್ತೆ ;

(ಈ) ಯಾರು ಯಾರಿಗೆ ಈ ಸೌಲಭ್ಯವನ್ನು ನೀಡಲಾಗಿದೆ ಜಿಲ್ಲಾವಾರು ಮಾಹಿತಿ ನೀಡುವುದು ?

## ವಸತಿ ನಿಲಯಗಳಲ್ಲಿ ಹಾಸಿಗೆ ಮತ್ತು ದಿಂಬು ಖರೀದಿಯಲ್ಲಿ ಅವ್ಯವಹಾರ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪೯೦ (೨೮೭೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಾಸಿಗೆ ಮತ್ತು ದಿಂಬು ಖರೀದಿ ಹಗರಣದ ಬಗ್ಗೆ ಸದನದಲ್ಲಿ ನಡೆದ ಚರ್ಚೆಗೆ ಒಂದು ತಿಂಗಳಲ್ಲಿ ಈ ಬಗ್ಗೆ ತನಿಖೆ ಮಾಡಿಸಿ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತ್ತಿನಲ್ಲಿಡಲಾಗುವುದೆಂದು ಮಾನ್ಯ ಮುಖ್ಯಮಂತ್ರಿಗಳು ನೀಡಿದ್ದ ಭರವಸೆ ಯಾವ ಹಂತದಲ್ಲಿದೆ ; ಇದರ ಮೇಲೆ ಕೈಗೊಂಡಿರುವ ಕ್ರಮಗಳಾವುವು ;

(ಆ) ಇಲ್ಲದಿದ್ದಲ್ಲಿ, ಈ ರೀತಿಯ ವಿಳಂಬ ನೀತಿ ಅನುಸರಿಸಲು ಕಾರಣ ಏನು ?

## ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ ನಿಯಮಾವಳಿ ಪಾಲಿಸದ ಕಾಲೇಜು ಆಡಳಿತ ಮಂಡಳಿ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೪೯೧ (೨೮೮೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಒಕ್ಕಲಿಗರ ಸಂಘದಿಂದ ಬೆಂಗಳೂರಿನಲ್ಲಿ ನಡೆಸುತ್ತಿರುವ ಕೆಂಪೇಗೌಡ ವೈದ್ಯಕೀಯ ವಿಜ್ಞಾನಿಗಳ ಮಹಾವಿದ್ಯಾಲಯ (ಕಿಮ್ಸ್)ದ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ (ಎಂ.ಸಿ.ಐ) ಗೈಡ್‌ಲೈನ್ಸ್ ಪ್ರಕಾರ ಕರ್ತವ್ಯ ನಿರ್ವಹಿಸಬೇಕಾದ ವೈದ್ಯರು, ಶುಶ್ರೂಷಕಿಯರು ಮತ್ತು ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ;

(ಆ) ಹಾಲಿ ಎಷ್ಟು ವೈದ್ಯರು, ಶುಶ್ರೂಷಕಿಯರು ಮತ್ತು ಇತರೆ ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ;

(ಇ) ಆ ಪೈಕಿ ಎಷ್ಟು ಜನರು ಖಾಯಂ ಮತ್ತು ತಾತ್ಕಾಲಿಕ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ;

(ಈ) ಖಾಯಂ ಮತ್ತು ತಾತ್ಕಾಲಿಕವಾಗಿ ಸೇವೆ ಸಲ್ಲಿಸುತ್ತಿರುವ ವೈದ್ಯರು, ಶುಶ್ರೂಷಕಿಯರು ಮತ್ತು ಇತರೆ ಸಿಬ್ಬಂದಿ ವರ್ಗದವರಿಗೆ ಅನುಕ್ರಮವಾಗಿ ನೀಡುತ್ತಿರುವ ವೇತನ ಮತ್ತು ಇತರೆ ಸೌಲಭ್ಯಗಳಾವುವು ;

(ಉ) ಇತ್ತೀಚೆಗೆ ಎಷ್ಟು ಮಂದಿ ಶುಶ್ರೂಷಕಿಯರನ್ನು ಸದರಿ ಆಡಳಿತ ಮಂಡಳಿಯು ಸೇವೆಯಿಂದ ವಜಾಗೊಳಿಸಿದೆ ; ವಜಾಗೊಳಿಸಲು ನೀಡುವ ಕಾರಣಗಳೇನು ; ಇಂತಹ ಕಾನೂನುಬಾಹಿರ ಕೃತ್ಯ ನಡೆಸುವ ಸಂಸ್ಥೆಗಳ ಮೇಲೆ ಕ್ರಮ ಜರುಗಿಸಲು ಸರ್ಕಾರಕ್ಕಿರುವ ಪರಮಾಧಿಕಾರ ಏನು ; ಇಂತಹ ಎಷ್ಟು ಕಾಲೇಜುಗಳ ಆಡಳಿತ ಮಂಡಳಿ ವಿರುದ್ಧ ಕ್ರಮ ಜರುಗಿಸಲಾಗಿದೆ ;

(ಊ) ಮೇಲ್ಕಂಡ ಸಂಸ್ಥೆಯಲ್ಲಿ ವಜಾಗೊಳಿಸಿರುವ ಶುಶ್ರೂಷಕಿಯರನ್ನು ಕೂಡಲೇ ಕರ್ತವ್ಯಕ್ಕೆ ನೇಮಿಸಿ ಕೊಳ್ಳುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಧಾನ್ಯಗಳ ವಿವರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೯೨ (೨೯೮೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮವಾಗಿ ಆಹಾರ ಪದಾರ್ಥದ ಧಾನ್ಯಗಳನ್ನು ಅಕ್ರಮವಾಗಿ ಸಂಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ೨೦೧೨ ರಿಂದ ೨೦೧೫ರ ಅಕ್ಟೋಬರ್ ಮಾಹೆಯಿಂದ ಇಲ್ಲಿಯವರೆಗೆ ಅಕ್ರಮವಾಗಿ ಸಂಗ್ರಹಿಸಿದ ಧಾನ್ಯಗಳ ಯಾವ ಯಾವ ಗೋದಾಮಿನಲ್ಲಿ ಜಪ್ತಿ ಪಡಿಸಿದ ಧಾನ್ಯಗಳ ವಿವರ ಮಾಹಿತಿ ನೀಡುವುದು ;

(ಇ) ಹಾಗಿದ್ದಲ್ಲಿ, ಸಂಗ್ರಹಿಸಿದ ಗೋದಾಮುಗಳ ತಾಲ್ಲೂಕುವಾರು, ಧಾನ್ಯವಾರು ಮಾಹಿತಿ ನೀಡುವುದು ;

(ಈ) ಇದರ ಹಿಂದೆ ಸರ್ಕಾರದ ಅಧಿಕಾರಿ/ನೌಕರರ ಕೈವಾಡ ಇದೆಯೇ ; ಇದ್ದಲ್ಲಿ, ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ? (ಮಾಹಿತಿ ನೀಡುವುದು)

## ಯೋಜನೆಯ ವಿವರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯೩ (೨೯೮೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಎಲ್ಲಾ ತಾಲ್ಲೂಕು, ಕ್ಷೇತ್ರಗಳ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಅಭಿವೃದ್ಧಿ ಯೋಜನೆಗಳನ್ನು ಹಾಕಿಕೊಂಡಿದೆ ; (ತಾಲ್ಲೂಕುವಾರು ಯೋಜನೆಗಳವಾರು, ಇಲಾಖಾವಾರು, ವಿವಿಧ ಲೆಕ್ಕಶೀರ್ಷಿಗಳವಾರು ವಿವರ ನೀಡುವುದು)

(ಆ) ಅಭಿವೃದ್ಧಿ ಯೋಜನೆಗಳನ್ನು ಹಾಕಿಕೊಂಡಿದ್ದಲ್ಲಿ, ಆಯಾ ವಿವರ ಒದಗಿಸುವುದು ?

## ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುದಾನ ಬಿಡುಗಡೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯೪ (೨೯೮೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಈ ಭಾಗದ ತಾಲ್ಲೂಕುಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಜಿಲ್ಲಾ/ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲೆಯ ತಾಲ್ಲೂಕುಗಳಿಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳಾವುವು ;

(ಇ) ಕಾಮಗಾರಿಗಳನ್ನು ಕೈಗೊಂಡಿದ್ದಲ್ಲಿ, ಅದರ ಸ್ಥಳದ ಸಂಪೂರ್ಣ ಮಾಹಿತಿ, ಅದಕ್ಕೆ ತಗಲಿದ ವೆಚ್ಚದ ಸಂಪೂರ್ಣ ವಿವರ ಒದಗಿಸುವುದು ;

(ಈ) ಕಾಮಗಾರಿಗಳು ಎಲ್ಲೆಲ್ಲಿ ಯಾವ ಹಂತದಲ್ಲಿವೆ, ಕೆಲವು ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ? (ವಿವರ ನೀಡುವುದು)

## ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಫಲಾನುಭವಿಗಳಿಗೂ ಸಾಲ ನೀಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯೫ (೨೯೮೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಇಲಾಖೆಯಿಂದ ವಿವಿಧ ಯೋಜನೆ ಅಡಿಯಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಫಲಾನುಭವಿಗಳಿಗೆ ಹಣವನ್ನು ಸಾಲವಾಗಿ ನೀಡಲಾಗಿರುತ್ತದೆಯೇ ; (ಫಲಾನುಭವಿಗಳ ಹೆಸರುವಾರು ಸ್ಪಷ್ಟವಾಗಿ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ನಿಗಮದಿಂದ ಯಾವ ಯಾವ ಉದ್ದೇಶಕ್ಕಾಗಿ ಎಷ್ಟು ಸಾಲ ನೀಡಲಾಗಿದೆ ; ಬೀದರ್ ಜಿಲ್ಲೆಗೆ ಸಂಬಂಧಪಟ್ಟಂತೆ ತಾಲ್ಲೂಕುವಾರು ಮಾಹಿತಿ ನೀಡುವುದು ?

## ಯೋಜನೆಗಳ ಆಯ್ಕೆ ಮತ್ತು ಅನುಷ್ಠಾನ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೬ (೨೯೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಡಾ: ಬಿ.ಆರ್. ಅಂಬೇಡ್ಕರ್ ಪರಿಶಿಷ್ಠ ಜಾತಿಗಳ ಅಭಿವೃದ್ಧಿ ನಿಗಮ ಮತ್ತು ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮದ ಯೋಜನೆಗಳ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಮತ್ತು ಯೋಜನೆಗಳ ಅನುಷ್ಠಾನ ವಿಳಂಬವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಇದನ್ನು ಸರಿಪಡಿಸಲು ಸರಕಾರ ಕೈಗೊಂಡಿರುವ ಕ್ರಮಗಳು ಯಾವುವು ; (ವಿವರ ನೀಡುವುದು)

(ಇ) ಬಾಗಲಕೋಟೆ ಮತ್ತು ವಿಜಯಪುರದಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿ ಹೊಸ ತಂತ್ರಜ್ಞಾನಗಳನ್ನು ವಿಸ್ತರಿಸುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯೭ (೨೯೮೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾವ ಹೊಸ ತಂತ್ರಜ್ಞಾನಗಳನ್ನು ಪರಿಚಯಿಸಲಾಗುತ್ತಿದೆ ;

(ಆ) ಮಾಹಿತಿ ಮತ್ತು ತಂತ್ರಜ್ಞಾನದಲ್ಲಿ ಕಾನೂನು ಬಾಹಿರವಾಗಿ ಅಪರಾಧಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಬಗ್ಗೆ ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮಗಳೇನು ;

(ಈ) ಮಾಹಿತಿ ಮತ್ತು ತಂತ್ರಜ್ಞಾನವನ್ನು ಯಾವ ಯಾವ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಎಂಡೋಸಲ್ಫಾನ್ ಸಂತ್ರಸ್ತರಿಗೆ ಪ್ರತಿ ತಿಂಗಳು ಮಾಸಾಶನ ವಿತರಣೆಯಾಗದಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೪೯೮ (೨೯೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಂಡೋಸಲ್ಫಾನ್ ಸಂತ್ರಸ್ತರಿಗೆ ಪ್ರತಿ ತಿಂಗಳು ಮಾಸಾಶನ ಸರಿಯಾಗಿ ವಿತರಣೆಯಾಗದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವಾರು ಸಂತ್ರಸ್ತರಿಗೆ ೩ ತಿಂಗಳಿಗೊಮ್ಮೆ ಮಾಸಾಶನ ವಿತರಣೆಯಾಗುತ್ತಿರುವುದರಿಂದ ಎಂಡೋಸಲ್ಫಾನ್ ಸಂತ್ರಸ್ತರು ತೀರ ದುಸ್ಥಿತಿಯಲ್ಲಿ ಜೀವನ ನಿರ್ವಹಣೆ ಮಾಡಬೇಕಾಗಿರುವುದರಿಂದ ಪ್ರತಿ ತಿಂಗಳು ಸರಿಯಾಗಿ ಪರಿಹಾರ ವಿತರಿಸಲು ಸರಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗೆ ಎಷ್ಟು ಪರಿಹಾರ ವಿತರಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರ ನಡೆಸುತ್ತಿರುವ ವೈದ್ಯಕೀಯ ಕಾಲೇಜುಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೪೯೯ (೨೯೯೩) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರ ನಡೆಸುತ್ತಿರುವ ಒಟ್ಟು ವೈದ್ಯಕೀಯ ಕಾಲೇಜುಗಳೆಷ್ಟು ; ಸ್ನಾತಕ ಮತ್ತು ಸ್ನಾತಕೋತ್ತರ ಪ್ರವೇಶಾತಿ ವಿವರ ನೀಡುವುದು ;

(ಆ) ಅವುಗಳಲ್ಲಿ ಎಷ್ಟು ಕಾಲೇಜುಗಳಿಗೆ (MC) ಭಾರತೀಯ ವೈದ್ಯಕೀಯ ಪರಿಷತ್ತಿನಿಂದ ಮಾನ್ಯತೆ ಸಿಕ್ಕಿದೆ ;

(ಇ) ಹೊಸದಾಗಿ ಆರಂಭಿಸಿದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಯ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಬಂದಿದ್ದರೆ, ಇದರ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ವಿದೇಶ ವ್ಯಾಸಂಗಕ್ಕೆ ಕಳುಹಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೦೦ (೨೯೯೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಠ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ವಿದೇಶ ವ್ಯಾಸಂಗಕ್ಕೆ ಕಳುಹಿಸಲು ಸರ್ಕಾರ ನಿರ್ಧರಿಸಿದೆಯೇ ;

(ಆ) ನಿರ್ಧರಿಸಿದ್ದರೆ ಈ ಯೋಜನೆಗೆ ಮೀಸಲಿಟ್ಟ ಹಣವೆಷ್ಟು ;

(ಇ) ವಿದೇಶ ವ್ಯಾಸಂಗಕ್ಕೆ ಹೋಗಲು ವಿದ್ಯಾರ್ಥಿಗಳ ಆಯ್ಕೆಗೆ ಇರುವ ಮಾನದಂಡಗಳೇನು ;

(ಈ) ಈವರೆಗೆ ವಿದೇಶ ವ್ಯಾಸಂಗಕ್ಕೆ ಕಳುಹಿಸಲಾದ ವಿದ್ಯಾರ್ಥಿಗಳ ವರ್ಗಾವಾರು ವಿವರ ನೀಡುವುದು ?

## ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ ಅಂಕಪಟ್ಟಿ ಮತ್ತು ಉತ್ತರ ಪತ್ರಿಕೆಗಳನ್ನು ತಿದ್ದಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೫೦೧ (೪೯೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ ಅಂಕಪಟ್ಟಿ ಮತ್ತು ಉತ್ತರ ಪತ್ರಿಕೆಗಳನ್ನು ತಿದ್ದಿರುವುದು ಹಾಗೂ ಪ್ರವೇಶ ಪರೀಕ್ಷೆಯಲ್ಲಿ ಆದ ಹಗರಣಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ;

(ಆ) ೧೯೯೬ ರಿಂದ ೨೦೧೧ರವರೆಗೆ ವಿಶ್ವವಿದ್ಯಾಲಯದ ಲೆಕ್ಕಪತ್ರ ತಪಾಸಣೆಯಲ್ಲಿ ೧೩೪ ಕೋಟಿ ಅವ್ಯವಹಾರಗಳ ಬಗ್ಗೆ ಆಕ್ಷೇಪಣೆ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಹಗರಣ ಮತ್ತು ಅವ್ಯವಹಾರಗಳನ್ನು ನಿಲ್ಲಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಂಗಮಂದಿರ ನಿರ್ಮಾಣದ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫೦೨ (೩೦೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಪುರಭವನದ ನವೀಕರಣಕ್ಕಾಗಿ ಖರ್ಚು ಮಾಡಿದ ಒಟ್ಟು ಹಣ ಎಷ್ಟು; ಇದಕ್ಕೆ ತಗಲಿದ ಸಮಯ ಎಷ್ಟು; ಯಾವ ಯಾವ ಉದ್ದೇಶಕ್ಕಾಗಿ ಎಷ್ಟು ಹಣ ವಿನಿಯೋಗಿಸಲಾಗಿದೆ; (ಐಟಂವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಂಗಮಂದಿರ ನಿರ್ಮಾಣ ಮಾಡಲು ಚಾಲನೆ ನೀಡದೇ ಇರಲು ಕಾರಣಗಳೇನು ಈ ಯೋಜನೆಯ ಅಂದಾಜು ವೆಚ್ಚವೆಷ್ಟು; ಯಾವ ಮೂಲಗಳಿಂದ ಸಂಗ್ರಹಿಸಲಾಗಿದೆ; ಕಳೆದ ವರ್ಷಗಳಿಂದ ಇದ್ದ ಯೋಜನೆಗಳಾವುವು; ಈ ಪ್ರಸ್ತಾವನೆ ಯಾವ ಹಂತದಲ್ಲಿದೆ;

(ಇ) ರಾಜ್ಯದಲ್ಲಿ ಪುರಭವನದ ರಂಗಮಂದಿರಗಳಿಗೆ ಏಕರೂಪದ ಬಾಡಿಗೆ ವಸೂಲು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದರೆ ವಿವರ ನೀಡುವುದು;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಅಕಾಡೆಮಿಗಳಲ್ಲಿ ಬ್ಯಾರಿ ಮತ್ತು ಕೊಂಕಣಿ ಅಕಾಡೆಮಿಗಳಿಗೆ ಸ್ವಂತ ಕಟ್ಟಡ ಒದಗಿಸಿಕೊಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ರಾಜ್ಯದ ಯಾವ ಯಾವ ಅಕಾಡೆಮಿಗಳಿಗೆ ಸ್ವಂತ ಕಟ್ಟಡ ಒದಗಿಸಲಾಗಿದೆ; ವಿನಿಯೋಗಿಸಿದ ಹಣ ಎಷ್ಟು; (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನರ್ಮ್ ಯೋಜನೆಯನ್ವಯ ನೀಡಲಾದ ಬಸ್ಸುಗಳ ಸಂಖ್ಯೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫೦೩ (೩೦೭೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನರ್ಮ್ ಯೋಜನೆಯನ್ವಯ ನೀಡಲಾದ ಬಸ್ಸುಗಳನ್ನು ಸಂಚಾರಕ್ಕೆ ಬಳಸಿಕೊಳ್ಳಲು ವಿಳಂಬವಾಗುತ್ತಿರಲು ಕಾರಣವೇನು ; ಎಷ್ಟು ಬಸ್ಸುಗಳನ್ನು ಸಂಚಾರಕ್ಕೆ ಬಳಸಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯ ರಸ್ತೆ ಸಾರಿಗೆ ನರ್ಮ್ ಬಸ್ಸುಗಳಿಗಾಗಿ ಪ್ರತ್ಯೇಕ ನಿಲ್ದಾಣವನ್ನು ನಿರ್ಮಿಸುವುದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾರಿಗೆ ಇಲಾಖೆಯ ಬಸ್ಸುಗಳಲ್ಲಿ ಚಾಲಕ/ನಿರ್ವಾಹಕ ಹುದ್ದೆಗಳ ಕೊರತೆ ಇರುವುದೆ ; ಕೊರತೆ ನೀಗಿಸಲು ಇಲಾಖೆ ಕೈಗೊಂಡ ಕ್ರಮವೇನು ;

(ಈ) ಜಿಲ್ಲೆಯಲ್ಲಿ ಚಾಲಕ/ನಿರ್ವಾಹಕರ ಕೊರತೆಯಿಂದ ಬಸ್ಸುಗಳ ಸುತ್ತುವಳಿಗಳನ್ನು ಕಡಿತಗೊಳಿಸಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಸರಿಪಡಿಸಲು ಏನು ಕ್ರಮ ಕೈಗೊಳ್ಳಲಾಗಿದೆ ; ವಿದ್ಯಾರ್ಥಿಗಳಿಗೆ ಎಕ್ಸ್‌ಪ್ರೆಸ್ ಬಸ್ಸಿನಲ್ಲಿ ಪ್ರಯಾಣ ಮಾಡಲು ನಿರಾಕರಿಸುವುದು ಸರಿಯೇ ; ನಿರಾಕರಿಸಿದ್ದಲ್ಲಿ ಇದಕ್ಕೆ ಕಾರಣವೇನು ?

## ಗ್ರಾಹಕರ ಹಿತರಕ್ಷಣಾ ಕಾಯಿದೆಯಲ್ಲಿ ದಾಖಲಾದ ಪ್ರಕರಣಗಳ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫೦೪ (೩೦೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಗ್ರಾಹಕರ ಹಿತರಕ್ಷಣಾ ಕಾಯಿದೆಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ತೀರ್ಪು ನೀಡಿದ ಪ್ರಕರಣಗಳೆಷ್ಟು ; ಬಾಕಿ ಇರುವ ಪ್ರಕರಣಗಳೆಷ್ಟು ; (ವಿವರ ನೀಡುವುದು)

(ಆ) ರಾಜ್ಯದ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆಯಲ್ಲಿ ಖಾಲಿ ಇರುವ ಅಧ್ಯಕ್ಷರ ಸದಸ್ಯರ ಸಂಖ್ಯೆ ಎಷ್ಟು; ಭರ್ತಿ ಮಾಡಲು ಇಲಾಖೆ ಕೈಗೊಂಡ ಕ್ರಮಗಳೇನು ; ದಕ್ಷಿಣ ಕನ್ನಡ ಜಿಲ್ಲೆಗೆ ಹೆಚ್ಚುವರಿ ಗ್ರಾಹಕರ ವೇದಿಕೆ ನ್ಯಾಯಾಲಯವನ್ನು ನೀಡುವುದಾಗಿ ಭರವಸೆ ನೀಡಲಾಗಿದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ಗ್ರಾಹಕರ ಹಕ್ಕುಗಳ ರಕ್ಷಣೆ ಬಗ್ಗೆ ಜನರಿಗೆ ಅರಿವು ಮೂಡಿಸಲು ಇಲಾಖೆ ವಿಫಲವಾಗಿದೆ ಎಂಬ ಆರೋಪ ಇದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಗ್ರಾಹಕರಿಗೆ ವಂಚನೆ ಆದಾಗ ಪ್ರತಿ ಮಾಲ್ ಮತ್ತು ಅಂಗಡಿಗಳಲ್ಲಿ ಈ ಬಗ್ಗೆ ದೂರು ನೀಡಲು ಸಾರ್ವಜನಿಕ ಸ್ಥಳಗಳಲ್ಲಿ ಗ್ರಾಹಕರ ಹಕ್ಕುಗಳ ಬಗ್ಗೆ ನಾಮಫಲಕಗಳನ್ನು ಅಳವಡಿಸಲು ಇಲಾಖೆ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಉ) ಕಾನೂನು ಉಲ್ಲಂಘಿಸಿ ಗ್ರಾಹಕರಿಗೆ ಸರಕುಗಳನ್ನು ಮಾರಾಟ ಮಾಡುತ್ತಿರುವವರ ವಿರುದ್ಧ ದಾಖಲಾಗಿರುವ ಪ್ರಕರಣಗಳು ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಡೀಮ್ಡ್ ವಿಶ್ವವಿದ್ಯಾಲಯಗಳ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫೦೫ (೩೦೭೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಡೀಮ್ಡ್ ವಿಶ್ಯವಿದ್ಯಾಲಯಗಳೆಷ್ಟು; ಈ ವಿಶ್ವವಿದ್ಯಾನಿಲಯಗಳಿಂದ ಎಷ್ಟು ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ ; ಸೀಟುಗಳು ನೀಡದೇ ಇದ್ದಲ್ಲಿ ಕಾರಣಗಳೇನು ; (ವಿಶ್ವವಿದ್ಯಾನಿಲಯವಾರು ವಿವರ ನೀಡುವುದು)

(ಆ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಸಿ.ಇ.ಟಿ ಕೌನ್ಸಿಲ್ ಕೊನೆಯ ದಿನಗಳಲ್ಲಿ ಸೀಟ್ ಮ್ಯಾಟ್ರೀಕ್ಸ್‌ನ್ನು ಘೋಷಿಸುವ ಮೂಲಕ ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶ ಪಡೆಯಲು ಅನುಕೂಲವಾಗುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; ರಾಜ್ಯದಲ್ಲಿ ಸಿ.ಇ.ಟಿ ಮೂಲಕ ಕೊನೆಯ ಹಂತದಲ್ಲಿ ನೀಡಿರುವ ಸೀಟುಗಳ ಸಂಖ್ಯೆ ಎಷ್ಟು ;

(ಇ) ಗ್ರಾಮಾಂತರ ವೈದ್ಯಕೀಯ ಪದವಿ ಬಳಿಕ ಗ್ರಾಮಾಂತರ ಪ್ರದೇಶದಲ್ಲಿ ಸೇವೆ ಸಲ್ಲಿಸುವ ಪದ್ಧತಿ ಜಾರಿಗೆ ಬರದೇ ಇರುವುದು ಇಲಾಖೆ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕಡ್ಡಾಯಗೊಳಿಸುವುದು ಯಾವಾಗಿನಿಂದ ;

(ಈ) ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಪದವಿ ಮತ್ತು ಸ್ನಾತಕೋತ್ತರ ಪದವಿ ಪಡೆಯುತ್ತಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

## ರಾಜ್ಯದ ಅಂಗನವಾಡಿ ಮತ್ತು ಶಾಲಾ ಮಕ್ಕಳಿಗೆ ಮೊಟ್ಟೆ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೫೦೬ (೩೦೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಕ್ಕಳ ಸುರಕ್ಷಿತೆಗಾಗಿ ಇಲಾಖೆ ಕೈಗೊಂಡಿರುವ ಕಾರ್ಯ ಕ್ರಮಗಳಾವುವು ;

(ಆ) ರಾಜ್ಯದ ಅಂಗನವಾಡಿ ಮತ್ತು ಶಾಲಾ ಮಕ್ಕಳಿಗೆ ಮೊಟ್ಟೆ ಭಾಗ್ಯ ಯೋಜನೆ ಜಾರಿಗೆ ತರುವ ಯೋಜನೆ ಇಲಾಖೆ ಮುಂದಿದೆಯೇ ; ಇದ್ದರೆ, ವಿವರ ನೀಡುವುದು ;

(ಇ) ರಾಜ್ಯದಲ್ಲಿ ಶಿಶು ಮರಣ ದಾಖಲಾದ ಪ್ರಕರಣಗಳೆಷ್ಟು; ಈ ಬಗ್ಗೆ ಇಲಾಖೆ ಕೈಗೊಂಡಿರುವ ಕಾರ್ಯಕ್ರಮಗಳೇನು ;

(ಈ) ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಮುಖಾಂತರ ಮಕ್ಕಳಿಗೆ ಅಪೌಷ್ಠಿಕತೆಯಿಂದ ಪಾರು ಮಾಡಲು ಹಮ್ಮಿಕೊಂಡಿರುವ ಕಾರ್ಯ ಕ್ರಮಗಳಾವುವು ; (ವಿವರ ನೀಡುವುದು)

(ಉ) ಮಹಿಳೆಯರ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಅತ್ಯಾಚಾರ, ಲೈಂಗಿಕ ಕಿರುಕುಳಗಳನ್ನು ತಡೆಗಟ್ಟಲು ಇಲಾಖೆ ಕೈಗೊಂಡ ಕ್ರಮಗಳಾವುವು ; ರಾಜ್ಯದಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ಅತ್ಯಾಚಾರ ಮತ್ತು ಕಿರುಕುಳ ನಡೆದ ಪ್ರಕರಣಗಳೆಷ್ಟು ; ಶಿಕ್ಷೆಗೆ ಒಳಗಾದ ಪ್ರಕರಣಗಳೆಷ್ಟು ? (ವಿವರ ನೀಡುವುದು)

## ಗಡಿನಾಡು ಅಭಿವೃದ್ಧಿ ಪ್ರಾಧಿಕಾರದಡಿ ಶಾಲೆಗಳ ಅಭಿವೃದ್ಧಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೨೫೦೭ (೩೦೭೯+೩೧೭೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಡಿನಾಡು ಅಭಿವೃದ್ಧಿ ಪ್ರಾಧಿಕಾರದಡಿಯಲ್ಲಿ ಗಡಿ ಭಾಗದ ಬೆಳಗಾವಿ ವಿಜಯಪುರ ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ/ಅನುದಾನಿತ/ ಅನುದಾನ ರಹಿತ ಶಾಲೆಗಳ ಅಭಿವೃದ್ಧಿಗೆ ಕೈಗೊಂಡ ಕಾರ್ಯಕ್ರಮಗಳು ಯಾವುವು ;

(ಆ) ಈ ಸೌಲಭ್ಯಗಳನ್ನು ಪಡೆಯಲು ಇರುವ ನಿಯಮಾವಳಿಗಳು ಏನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಗಡಿ ಭಾಗದಲ್ಲಿ ಅನುದಾನಿತ ಮರಾಠಿ ಹಾಗೂ ಕನ್ನಡ ಮಾಧ್ಯಮ ಶಾಲೆಗಳು ಒಂದೇ ಸಂಸ್ಥೆಯಡಿ ನಡೆಯುತ್ತಿದ್ದು, ಅಲ್ಲಿ ನಡೆಯುವ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿದ್ದು ಗಡಿನಾಡು ಅಭಿವೃದ್ಧಿ ಪ್ರಾಧಿಕಾರದಿಂದ ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗುವುದೇ ;

(ಈ) ಈ ನಿಟ್ಟಿನಲ್ಲಿ ಗಡಿನಾಡು ಅಭಿವೃದ್ಧಿ ಪ್ರಾಧಿಕಾರದ ಮೂಲಕ ವಿಶೇಷ ವೇತನಾನುದಾನ ಕಾರ್ಯಕ್ರಮ ಹಮ್ಮಿಕೊಳ್ಳಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಗಂಗಾ ಕಲ್ಯಾಣ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೦೮ (ಇ೨೧೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ಹಿಡುವಳಿದಾರರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ದಿ: ದೇವರಾಜ ಅರಸ್ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ನೀರಾವರಿ ಸೌಲಭ್ಯ ಕಲ್ಪಿಸಿಕೊಡಲಾಗುತ್ತದೆಯೇ ;

(ಆ) ಹಾಗಿದ್ದಲ್ಲಿ, ಸರಕಾರವು ಕಳೆದ ೫ ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನಲ್ಲಿ ಎಷ್ಟು ಜನ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಫಲಾನುಭವಿಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಿ ಎಷ್ಟು ಎಕರೆ ಪ್ರದೇಶ ನೀರಾವರಿಗೆ ಒಳಪಟ್ಟಿದೆ ;

(ಇ) ಈಗಾಗಲೇ ಈ ಯೋಜನೆಯಿಂದ ಎಷ್ಟು ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಕುಟುಂಬಗಳು ಆರ್ಥಿಕವಾಗಿ ಸದೃಢಗೊಂಡಿವೆ ;

(ಈ) ಈ ಯೋಜನೆಯಡಿ ಏತ ನೀರಾವರಿ ಮೂಲಕ ಪರಿಶಿಷ್ಠ ಜಾತಿ/ ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ?

## ಅನ್ನಭಾಗ್ಯ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೦೯ (೩೨೧೫) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದಲ್ಲಿ ಕಡುಬಡುವರಿಗಾಗಿ ಮಹತ್ವಕಾಂಕ್ಷಿಯ ಯೋಜನೆಯಾದ ಅನ್ನಭಾಗ್ಯ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಬಿ.ಪಿ.ಎಲ್. ಪಡಿತರ ಚೀಟಿಗಳು ಸಿಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಅರ್ಹ ಕಡುಬಡವರು ಅರ್ಜಿ ಸಲ್ಲಿಸಿ ಹಲವಾರು ತಿಂಗಳು ಕಳೆದರು ಕೂಡ ಪಡಿತರ ಚೀಟಿಗಳು ವಿಲೇವಾರಿ ಆಗದೆ ಸಾರ್ವಜನಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಕಾರ್ಡುಗಳು ಎಷ್ಟು; ಈಗಾಗಲೇ ಹೊಸ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದ ಕುಟುಂಬಗಳು ಎಷ್ಟು ; ಅವುಗಳು ವಿಲೇವಾರಿ ಮಾಡಿದ ಪಡಿತರ ಚೀಟಿಗಳು ಎಷ್ಟು ; ಇನ್ನೂ ಬಾಕಿ ಉಳಿದಿರುವ ಅರ್ಜಿಗಳು ಎಷ್ಟು ;

(ಈ) ಸದರಿ ಪಡಿತರ ಚೀಟಿಗಳ ನಿರೀಕ್ಷೆಯಲ್ಲಿರುವ ಕಡು ಬಡವರಿಗೆ ಯಾವ ಕಾಲಮಿತಿಯಲ್ಲಿ ಪಡಿತರ ಚೀಟಿಗಳನ್ನು ವಿತರಿಸಲಾಗುವುದು?

## ಭಾಗ್ಯಲಕ್ಷ್ಮಿ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೧೦ (೩೨೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಾರಿ ಇರುವ ಭಾಗ್ಯಲಕ್ಷ್ಮಿ ಯೋಜನೆ ಅಡಿಯಲ್ಲಿ ನಿಗದಿತ ಅವಧಿಯಲ್ಲಿ ಅರ್ಹ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಬಾಂಡ್ ಸಿಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಫಲಾನುಭವಿಯ ಅರ್ಜಿ ಸಲ್ಲಿಸಿ ಎಷ್ಟು ಕಾಲಮಿತಿಯಲ್ಲಿ ಬಾಂಡ್ ಸಿಗುವ ಕುರಿತು ನಿಬಂಧನೆ ಇದೆ;

(ಇ) ರಾಜ್ಯದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸನ್: ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಮಾಹಿತಿ ಒದಗಿಸುವುದು;

(ಈ) ಅದರಲ್ಲಿ ಈಗಾಗಲೇ ಎಷ್ಟು ಜನ ಫಲಾನುಭವಿಗಳಿಗೆ ಬಾಂಡ್ ವಿತರಿಸಲಾಗಿರುತ್ತದೆ; (ಒಟ್ಟು ಫಲಾನುಭವಿಗಳ ಸಂಖ್ಯೆ ವಿವರ ತಾಲ್ಲೂಕುವಾರು ಒದಗಿಸುವುದು)

(ಉ) ಬಾಕಿ ಉಳಿದಿರುವ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಬಾಂಡ್ ವಿತರಿಸಲಾಗುವುದು?

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ಕೊಟ್ಟಿರುವ ಅನುದಾನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೫೧೧ (೩೦೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯಕ್ಕೆ ಕೊಡ ಮಾಡಿರುವ ಅನುದಾನ ಕಾರ್ಯಕ್ರಮಗಳು ಯಾವುವು;

(ಆ) ಮಹಿಳಾ ವಿಶ್ವವಿದ್ಯಾಲಯ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿಯಾಗಿ ಮಹಿಳೆಯರ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು ಯಾವುವು; ಪ್ರಾಜೆಕ್ಟ್‌ಗಳು ಯಾವುವು; ಸರ್ವೆಕ್ಷಣೆಗಳು ಯಾವುವು; ಸಂಶೋಧನ ಕಾರ್ಯಗಳು ಯಾವುವು;

(ಇ) ರಾಜ್ಯದಲ್ಲಿ ಇರುವ ಏಕೈಕ ಮಹಿಳಾ ವಿಶ್ವವಿದ್ಯಾಲಯದ ಮೂಲಕ ಮಹಿಳೆಯರ ಅಭಿವೃದ್ಧಿಗೆ ಕಾರ್ಯಕ್ರಮ ರೂಪಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಾಕಿಕೊಂಡಿರುವ ಚಿಂತನೆ ಯೋಜನೆಗಳು ಯಾವುವು;

(ಈ) ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮಹಿಳಾ ಕಾಲೇಜುಗಳಿಗೆ ವೇತನ ಅನುದಾನ ಕೊಡುವ ಕುರಿತು ನಿರ್ಣಯವನ್ನು ಏಕೆ ಕೈಗೊಳ್ಳಬಾರದು;

(ಉ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮೂಲಕ ಅಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರಿಗೆ ಸ್ಕಾಲರ್ ಶಿಪ್ ಫೀ ಕನ್ಸಿಷನ್ ಸಂಶೋಧನಾ ಕಾರ್ಯಗಳಿಗೆ ನೆರವು ನೀಡುವುದು ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದೇ; ಸರ್ಕಾರದ ಚಿಂತನೆ ಕ್ರಮ ಏನು?

## ವೈದ್ಯಕೀಯ ಮಹಾವಿದ್ಯಾಲಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೫೧೨ (೩೦೮೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ನರ್ಸಿಂಗ್ ಕಾಲೇಜುಗಳು, ವೈದ್ಯಕೀಯ ಕಾಲೇಜುಗಳು, ಆಯುರ್ವೇದಿಕ್ ಮಹಾವಿದ್ಯಾಲಯುಗಳು, ಯುನಾನಿ ಹೋಮಿಯೋಪತಿ ಮಹಾವಿದ್ಯಾಲಯಗಳು, ಪ್ಯಾರಾ ಮೇಡಿಕಲ್ ಕೋರ್ಸ್ ವಿದ್ಯಾಲಯಗಳು ಎಷ್ಟು; (ಸರ್ಕಾರಿ ಅನುದಾನಿತ/ಅನುದಾನರಹಿತ ಸಂಸ್ಥೆಗಳ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಆ) ಈ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಸಿಬ್ಬಂದಿಗಳ ಹೆಸರು, ಹುದ್ದೆ, ಬೋಧಿಸುತ್ತಿರುವ ವಿಷಯ, ಇವುಗಳ ವಿವರವಾದ ಮಾಹಿತಿ ನೀಡುವುದು)

(ಇ) ಈ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿವರ್ಗಗಳ ವೇತನ ಭತ್ಯೆ, ನಿವೃತ್ತಿ ವೇತನ ಭತ್ಯೆ ಕುರಿತು ಇರುವ ಸರ್ಕಾರದ ನಿಯಮಾವಳಿಗಳು ಯಾವುವು; ಈಗ ಇವರು ಸದ್ಯ ಪಡೆಯುತ್ತಿರುವ ವೇತನ ಎಷ್ಟು;

(ಈ) ಈ ಸಿಬ್ಬಂದಿಯ ಸೇವಾ ಭದ್ರತೆಯ ಕುರಿತು ಇರುವ ನಿಯಮಾವಳಿಗಳು ಯಾವುವು ?

## ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಿಕ್ಷಣ ಸಂಸ್ಥೆಗಳ ನಿರ್ವಹಣೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೫೧೩ (೩೦೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ನಿರ್ವಹಣೆಯನ್ನು ಯಾವ ಸಂಸ್ಥೆಯಿಂದ ಮಾಡಲಾಗುತ್ತಿದೆ;

(ಆ) ಆ ಸಂಸ್ಥೆಯ ಆಡಳಿತ ಕಛೇರಿಗಳು ಎಲ್ಲೆಲ್ಲಿ ಅಸ್ತಿತ್ವದಲ್ಲಿರುತ್ತವೆ;

(ಇ) ಆ ಸಂಸ್ಥೆಯ ಆಡಳಿತವನ್ನು ಎಷ್ಟು ಹಂತಗಳ ಆಡಳಿತ ಕಛೇರಿಗಳ ಮೂಲಕ ನಡೆಸಲಾಗುತ್ತಿದೆ; ಈ ಸಂಸ್ಥೆ ಯಾವ ಯಾವ ಇಲಾಖೆಯಿಂದ ಅನುದಾನ ಪಡೆದುಕೊಂಡು ಕಾರ್ಯನಿರ್ವಹಿಸುತ್ತಿದೆ;

(ಈ) ಈ ಸಂಸ್ಥೆಯ ಅಡಿ ಶಾಲೆಗಳಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ ಹಾಗೂ ಎಷ್ಟು ಶಿಕ್ಷಕರಿದ್ದಾರೆ;

(ಉ) ಸೃಷ್ಠಿಯಾಗಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಊ) ಕೇಂದ್ರ ಆಡಳಿತ ಕಛೇರಿಯಲ್ಲಿ ಹಾಗೂ ಬೇರೆ ಹಂತಗಳಲ್ಲಿ ಆಡಳಿತ ಕಛೇರಿಗಳಿದ್ದರೆ, ಅಲ್ಲಿರುವ ಸಿಬ್ಬಂದಿಗಳು ಯಾರು; ಅವರ ಹೆಸರು ಹಾಗೂ ಹುದ್ದೆಯ ದರ್ಜೆಗಳೇನು; ಈ ನೌಕರರುಗಳು ಸರ್ಕಾರಿ ಸಿಬ್ಬಂದಿಗಳೇ; ಅನ್ಯಕಾರ್ಯ ನಿಮಿತ್ತ ಸಿಬ್ಬಂದಿಗಳೇ ಅಥವಾ ಹೊರ ಗುತ್ತಿಗೆ ಸಿಬ್ಬಂದಿಗಳೇ; (ಪ್ರತಿಯೊಬ್ಬರ ಸಂಪೂರ್ಣ ವಿವರ ನೀಡುವುದು)

(ಋ) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; KRIES ಸಂಸ್ಥೆಯಿಂದ ಏನೇನು ಕಾರ್ಯಗಳು ನಡೆಯುತ್ತಿವೆ? (ವಿವರ ನೀಡುವುದು)

## ಭಿಕ್ಷುಕರ ಪುನರ್ವಸತಿ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೧೪ (೩೦೮೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಭಿಕ್ಷುಕರ ಪುನರ್ವಸತಿ ಕೇಂದ್ರಗಳೇಷ್ಟು; (ವಿವರ ನೀಡುವುದು)

(ಆ) ಅವುಗಳಲ್ಲಿ ಮೂಲಭೂತ ಸೌಲಭ್ಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅಭಿವೃದ್ಧಿಗೆ ತೆಗೆದುಕೊಂಡ ಕ್ರಮಗಳೇನು; ಖರ್ಚು ಮಾಡಿದ ಮೊತ್ತವೆಷ್ಟು; (ವಿವರ ನೀಡುವುದು)

(ಇ) ಈ ಕೇಂದ್ರದಲ್ಲಿರುವ ಭಿಕ್ಷುಕರ ಸಂಖ್ಯೆ ಎಷ್ಟು; ಈ ಕೇಂದ್ರದಲ್ಲಿ ಭಿಕ್ಷುಕರುಗಳಿಗೆ ನೀಡುತ್ತಿರುವ ಸೌಲಭ್ಯಗಳಾವುವು; ಪೂರ್ಣ ವಿವರ ಒದಗಿಸುವುದು? (ಕೇಂದ್ರವಾರು ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ವಿದೇಶ ವ್ಯಾಸಂಗಕ್ಕೆ ಸಹಾಯಧನ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೧೫ (೩೦೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕೆ ವಿದೇಶಕ್ಕೆ ಹೋಗಲು ಸರ್ಕಾರದಿಂದ ಸಹಾಯಧನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಆ) ಎಷ್ಟು ಮೊತ್ತ ಹಾಗೂ ಎಷ್ಟು ದಿನಗಳಲ್ಲಿ ಸಹಾಯಧನ ಮಂಜೂರು ಆಗುವುದು;

(ಇ) ಇದುವರೆವಿಗೂ ಈ ಯೋಜನೆಯಲ್ಲಿ ಎಷ್ಟು ವಿದ್ಯಾರ್ಥಿಗಳು ಫಲಾನುಭವಿಗಳಾಗಿರುತ್ತಾರೆ; (ವಿವರ ನೀಡುವುದು)

(ಈ) ಈ ಯೋಜನೆಗೆ ನಿಗದಿಪಡಿಸಿರುವ ಮೊತ್ತ ಎಷ್ಟು ಖರ್ಚು ಮಾಡಿದ ಮೊತ್ತ ಎಷ್ಟು? (ವಿವರ ನೀಡುವುದು)

## ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಪುರ್ನವಸತಿ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೧೬ (೩೦೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇದುವರೆವಿಗೂ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವರುಗಳಿಗೆ ಪುನರ್ವಸತಿ ಮತ್ತು ಬದಲಿ ಉದ್ಯೋಗ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಎಷ್ಟು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳಿಗೆ ಪುನರ್ವಸತಿ ಮತ್ತು ಬದಲಿ ಉದ್ಯೋಗ ಕಲ್ಪಿಸಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)

## ವಿಕಲಚೇತನರ ಅಭಿವೃದ್ಧಿ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೧೭ (೩೦೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗವಿಕಲರ ಅಭಿವೃದ್ಧಿಗಾಗಿ ಇರುವ ನೀತಿ (Policy) ಏನು;

(ಆ) ರಾಜ್ಯದಲ್ಲಿ ಅಂಗವಿಕಲರಿಗಾಗಿ ಮೀಸಲಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅಂಗವಿಕಲರಿಗೆ ಗುರುತಿನ ಪ್ರಮಾಣ ಪತ್ರ ನೀಡುವ ಅಧಿಕಾರ ಜಿಲ್ಲಾ ಆಸ್ಪತ್ರೆ ಬೋರ್ಡ್‌ಗೆ ಮಾತ್ರ ಇರುವುದರಿಂದ ಈ ತೊಂದರೆಯನ್ನು ಪರಿಹರಿಸಲು ಸರ್ಕಾರದ ಚಿಂತನೆ ಏನು ;

(ಈ) ಅಂಗವಿಕಲರ ಸಮಸ್ಯೆ ಪರಿಹರಿಸಲು ರಾಜ್ಯ ಮಟ್ಟದಲ್ಲಿ ಒಬ್ಬ ಹಿರಿಯ ಅಧಿಕಾರಿಯನ್ನು ಕಾರ್ಯದರ್ಶಿಯಾಗಿ ನೇಮಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು?

## ಅಂಗವಿಕಲರ ಪುನರ್‌ವಸತಿ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೧೮ (೩೧೯೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಗವಿಕಲರ ಪುನರ್ ವಸತಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಯಾವ ಯಾವ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳನ್ನು ತೆರೆಯಲಾಗಿದೆ ; (ವಿವರ ನೀಡುವುದು)

(ಆ) ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕು ಕೇಂದ್ರಗಳಿಗೆ ಎಷ್ಟು ಅಧಿಕಾರಿಗಳನ್ನು (ಕೇಂದ್ರಗಳಲ್ಲಿ) ನಿಯುಕ್ತಿ ಮಾಡಲಾಗಿದೆ ? (ವಿವರ ನೀಡುವುದು)

(ಇ) ಬಜೆಟ್‌ನಲ್ಲಿನ ಶೇ. ೩ರಷ್ಟು ಹಣವನ್ನು ಪ್ರತಿ ಸ್ಥಳೀಯ ಸಂಸ್ಥೆಗೆ ಮೀಸಲಿಡಬೇಕೆಂಬ ಸರ್ಕಾರದ ಆದೇಶದಂತೆ ಯಾವ ಯಾವ ಸ್ಥಳೀಯ ಸಂಸ್ಥೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೀಸಲಿರಿಸಿದ ಹಣ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಅಂಗವಿಕಲರ ಕ್ಷೇಮಕ್ಕಾಗಿ ಮೀಸಲಿಟ್ಟ ಹಣದಲ್ಲಿ ಕಳೆದ ಮೂರು ವರ್ಷಗಳಲ್ಲಿ ವೆಚ್ಚವಾಗಿರುವ ಮೊಬಲಗು ಎಷ್ಟು; ಯಾವ ಉದ್ದೇಶಗಳಿಗೆ ಬಳಕೆಯಾಗಿದೆ; (ವಿವರ ನೀಡುವುದು)

(ಉ) ರಾಜ್ಯದಲ್ಲಿನ ಅಂಗವಿಕಲರ ಸಂಖ್ಯೆಯ ಜಿಲ್ಲಾವಾರು ವಿವರ ನೀಡುವುದು?

## ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವೈದ್ಯರ ನೇಮಕಾತಿ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೧೯ (೩೦೯೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿ ಹೊಸದಾಗಿ ತಾಯಿ ಮತ್ತು ಶಿಶು ಆರೈಕೆ (MCH) ಗಾಗಿ ೨೦೦ ಹಾಸಿಗೆ (Beds) ವ್ಯವಸ್ಥೆವುಳ್ಳ ಆಸ್ಪತ್ರೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ರಾಯಚೂರು ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ನೇಮಕಾತಿ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಮಾನ್ವಿ ಪಟ್ಟಣದ ನಗರ ಕೇಂದ್ರ (Urban Centre) ಆಸ್ಪತ್ರೆ ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ಸಿ. ದರ್ಜೆ, ಡಿ. ದರ್ಜೆ ನೌಕರರಿಗೆ ವೇತನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

## ರಾಯಚೂರಿನಲ್ಲಿರುವ ರಾಜೀವ್ ಗಾಂಧಿ ಸ್ಪೇಷಾಲಿಟಿ ಆಸ್ಪತ್ರೆಯ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೦ (೩೦೯೬) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ರಾಜೀವ್ ಗಾಂಧಿ ಸ್ಪೇಷಾಲಿಟಿ ಆಸ್ಪತ್ರೆಯ ನಿರ್ಮಾಣದ ಬಗ್ಗೆ ಸರ್ಕಾರವು ತೆಗದುಕೊಂಡ ನಿರ್ಧಾರವೇನು;

(ಆ) ಸದರಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳಿಗೆ ಪ್ರಸ್ತುತ ನೀಡುತ್ತಿರುವ ವೇತನ ಎಷ್ಟು; ವೇತನವನ್ನು ಹೆಚ್ಚಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು;

(ಇ) ರಾಯಚೂರಿನಲ್ಲಿರುವ RIMS ಆಸ್ಪತ್ರೆಯಲ್ಲಿ ಪೂರ್ತಿ ಪ್ರಮಾಣದ ವೈದ್ಯರ ನೇಮಕಾತಿ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು? (ಸಂಪೂರ್ಣ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ವಸತಿ ಶಾಲೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೧ (೩೦೯೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಯಚೂರು ಜಿಲ್ಲೆಯಲ್ಲಿ ೨೦೧೪–೧೫ರಲ್ಲಿ ನೂತನವಾಗಿ ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರಾಗಿರುವ ವಸತಿ ಶಾಲೆಗಳೆಷ್ಟು; (ವರ್ಗವಾರು ಮಾಹಿತಿ ನೀಡುವುದು)

(ಆ) ಮಾನ್ವಿ ತಾಲ್ಲೂಕಿನ ಕುರ್ಡಿ ಗ್ರಾಮದ ಹತ್ತಿರ ಮೊರಾರ್ಜಿ ವಸತಿ ಶಾಲೆ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗ) ನಿರ್ಮಾಣ ಮಾಡುವ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗದುಕೊಂಡ ಕ್ರಮವೇನು;

(ಇ) ರಾಯುಚೂರು ಜಿಲ್ಲೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ೨೦೧೫–೧೬ರಲ್ಲಿ ವಿವಿಧ ಯೋಜನೆಗಳ ಮುಖಾಂತರ ಮಂಜೂರಾತಿಗಿರುವ ಕಾರ್ಯಕ್ರಮಗಳೇನು?

## ಡಾ॥ ಡಿ.ಎಂ. ನಂಜುಂಡಪ್ಪ ವರದಿ ಅನುಷ್ಠಾನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೨ (೩೦೯೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ॥ ಡಿ.ಎಂ. ನಂಜುಂಡಪ್ಪ ವರದಿ ಅನುಗುಣವಾಗಿ ೨೦೧೪–೧೫ರಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಬರುವ ೪೦ ವಿಧಾನಸಭಾ ಕ್ಷೇತ್ರಗಳಿಗೆ ವಿವಿಧ ಯೋಜನೆಗಳ ಮುಖಾಂತರ ಖರ್ಚಾಗಿರುವ ಮೊತ್ತವೆಷ್ಟು;

(ಆ) ೨೦೧೫–೧೬ರಲ್ಲಿ ಡಾ॥ ಡಿ.ಎಂ. ನಂಜುಂಡಪ್ಪ ವರದಿ ಅನುಗುಣವಾಗಿ ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಬರುವ ೪೦ ವಿಧಾನಸಭಾ ಕ್ಷೇತ್ರಗಳಿಗೆ ವಿವಿಧ ಯೋಜನೆಗಳ ಮುಖಾಂತರ ಬಂದಿರುವಂತಹ ಅನುದಾನ ಎಷ್ಟು; ಖರ್ಚಾಗಿರುವ ಮೊತ್ತವೆಷ್ಟು?

## ಮಾನ್ವಿ ಪಟ್ಟಣದಲ್ಲಿ ಬಸ್ ಡಿಪೋಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೩ (೩೦೯೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದರ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಕವಿತಾಳ ಪಟ್ಟಣದಲ್ಲಿ ಉದ್ದೇಶಿಸಿರುವ ಬಸ್‌ನಿಲ್ದಾಣ ನಿರ್ಮಾಣದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) NEKSRTC ನಲ್ಲಿ ಬರುವ ಬಸ್‌ನಿಲ್ದಾಣಗಳಲ್ಲಿ ಮೂಲಭೂತ ಸೌಲಭ್ಯಗಳಾದ ಪ್ರಯಾಣಿಕರಿಗೆ ಕುಡಿಯುವ ನೀರು, ಶೌಚಾಲಯ, ಆಸನ ವ್ಯವಸ್ಥೆ ಈ ಎಲ್ಲಾ ಸೌಲಭ್ಯಗಳನ್ನು ಉತ್ತಮಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಬಗ್ಗೆ ಮಾಹಿತಿ

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):–**

೨೫೨೪ (೩೦೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಅಲ್ಲಿಯ ಜಿಲ್ಲಾ ಆಸ್ಪತ್ರೆಯನ್ನು ಹಸ್ತಾಂತರಿಸಬೇಕೆಂದು ಸರ್ಕಾರ ಆದೇಶ ಮಾಡಿದೆಯೇ; ಹಾಗಿದ್ದಲ್ಲಿ, ಜಿಲ್ಲಾ ಆಸ್ಪತ್ರೆಯನ್ನು ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಹಸ್ತಾಂತರಿಸಲಾಗಿದೆಯೇ;

(ಆ) ಜಿಲ್ಲಾ ಆಸ್ಪತ್ರೆ ಹಸ್ತಾಂತರ ಆಗದೇ ಇದ್ದಲ್ಲಿ ವಿಳಂಬವಾಗಲು ಕಾರಣವೇನು; ಇದನ್ನು ಯಾವಾಗ ಸರಿಪಡಿಸಲಾಗುವುದು;

(ಇ) M.C.I. ನಿಯಮದ ಪ್ರಕಾರ ಪ್ರತಿ ಆಸ್ಪತ್ರೆಯು ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿಯಂತ್ರಣದ ಅಡಿಯಲ್ಲಿ ಇರಬೇಕು ಎಂಬ ನಿಯಮ ಇರುವುದು ನಿಜವೇ?

## ಕಿದ್ವಾಯಿ ಆಸ್ಪತ್ರೆಯಲ್ಲಿ ನೇಮಕಾತಿ ಹಾಗೂ ಕಾಮಗಾರಿಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೫ (೩೧೦೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಕಿದ್ವಾಯಿ ಆಸ್ಪತ್ರೆಯಲ್ಲಿರುವ ವಿವಿಧ ದರ್ಜೆಗಳ ಒಟ್ಟು ನೌಕರರ ಸಂಖ್ಯೆ ಎಷ್ಟು;

(ಆ) ಯಾವ ಯಾವ ದರ್ಜೆಯಲ್ಲಿ ಎಷ್ಟೆಷ್ಟು ನೌಕರರ ಹುದ್ದೆಗಳ ಎಷ್ಟೆಷ್ಟು ವರ್ಷಗಳಿಂದ ಖಾಲಿಯಿವೆ; ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿಲ್ಲವೇ;

(ಇ) ಮೇಲ್ಕಂಡ ಎಲ್ಲಾ ವೃಂದಗಳ ಹುದ್ದೆಗಳನ್ನು ಭರ್ತಿ ಮಾಡುವಾಗ ಅನುಸರಿಸಲಾಗುವ ನೀತಿ ನಿಯಮಗಳೇನು;

(ಈ) ಕಳೆದ ೨ ವರ್ಷಗಳಿಂದ ಸದರಿ ಆಸ್ಪತ್ರೆಯಲ್ಲಿನ ಯಾವ ಯಾವ ಕಾಮಗಾರಿಗಳಿಗಾಗಿ ಎಷ್ಟೆಷ್ಟು ಅನುದಾನ ಮಂಜೂರಾಗಿದೆ;

(ಉ) ಯಾವ ಯಾವ ಕಾಮಗಾರಿಗಳನ್ನು ಯಾವ ಯಾವ ದಿನಾಂಕಗಳಂದು ಮುಗಿಸಲಾಗಿದೆ ಹಾಗೂ ಇನ್ನೂ ಮುಕ್ತಾಯವಾಗದ ಹಾಗೂ ಪ್ರಾರಂಭಿಸದ ಕಾಮಗಾರಿಗಳು ಯಾವುವು?

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೨೬ (೩೧೩೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಹೊಸ ಬಸ್ಸುಗಳ ಖರೀದಿಗಾಗಿ ಕೇಂದ್ರ ಸರ್ಕಾರದ ನರ್ಮ್ ಯೋಜನೆಯಡಿ ಒದಗಿಸಲಾಗಿರುವ ಅನುದಾನವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಖರೀದಿಸಲಾದ ಬಸ್ಸುಗಳ ಸಂಖ್ಯೆ ಎಷ್ಟು; (ವಿಭಾಗವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಬೆಂಗಳೂರಿನಲ್ಲಿ ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ೧೫ ವರ್ಷಗಳಿಗೂ ಮೇಲ್ಪಟ್ಟ ಸಂಚರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು; (ವಿಭಾಗವಾರು ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗೆ ಬಂದಿರುವ ವಾರ್ಷಿಕ ಆದಾಯವೆಷ್ಟು; (ವಿಭಾಗವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) ಬೆಂಗಳೂರು ರೈಲು ನಿಲ್ದಾಣದಲ್ಲಿ ಬಿಎಂಟಿಸಿ ಬಸ್‌ಬೇ ವ್ಯವಸ್ಥೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇಲ್ಲಿಂದ ಪ್ರತಿದಿನ ಎಷ್ಟು ಬಸ್ಸುಗಳು ಸಂಚರಿಸುತ್ತಿವೆ;

(ಊ) ಕೇಂದ್ರ ಹಾಗೂ ರಾಜ್ಯ ಸರ್ಕಾರಿ ನೌಕರರ ಅನುಕೂಲಕ್ಕಾಗಿ ಬೆಂಗಳೂರು ರೈಲು ನಿಲ್ದಾಣದಲ್ಲಿ ಬಿಎಂಟಿಸಿ ಬಸ್ ನಿಲ್ದಾಣದವರೆಗೆ ಬೆಳಿಗ್ಗೆ ಮತ್ತು ಸಂಜೆ ಸಾರಿಗೆ ಸೌಲಭ್ಯ ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

## ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ ಬೋಧಕೇತರ ಸಿಬ್ಬಂದಿಗಳ ಕೊರತೆಯ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೭ (೩೧೦೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಇಲಾಖೆಗಳ ವತಿಯಿಂದ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಬೋಧಕ/ ಬೋಧಕೇತರರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ವಿವಿಧ ಅಭಿವೃದ್ಧಿ ನಿಗಮಗಳಿಗೆ ಸಾಲ ಸೌಲಭ್ಯವನ್ನು ನೀಡುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೮ (೩೧೦೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ॥ ಅಂಬೇಡ್ಕರ್, ಜಗಜೀವನ್ ರಾಮ್, ದೇವರಾಜ್ ಅರಸು, ವಾಲ್ಮೀಕಿ ಮತ್ತು ಲಂಬಾಣಿ ತಾಂಡಾ ಅಭಿವೃದ್ಧಿ ನಿಗಮಗಳು ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿವೆ (ನಿಗಮಗಳವಾರು ವಿವರಗಳನ್ನು ನೀಡುವುದು)

(ಆ) ಈ ನಿಗಮಗಳು ಯಾವ ಯಾವ ಯೋಜನೆಯಡಿ ಸಾಲ ಸೌಲಭ್ಯಗಳನ್ನು ನೀಡುತ್ತಿವೆ ; (ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಯೋಜನೆಗಳಡಿ ನೇರ ಸಾಲ ಸೌಲಭ್ಯಗಳನ್ನು ನೀಡಲಾಗಿದೆ ; ಇದರಲ್ಲಿ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ನಿಗಮಗಳವಾರು ಹಾಗೂ ಯೋಜನೆಗಳವಾರು ವಿವರಗಳನ್ನು ನೀಡುವುದು)

(ಈ) ಈ ಎಲ್ಲಾ ನಿಗಮಗಳು ನೀಡುವ ನೇರ ಸಾಲ ಸೌಲಭ್ಯಗಳಿಗೆ ಸರ್ಕಾರ ಸಹಾಯಧನವನ್ನೇನಾದರೂ ನೀಡುತ್ತಿದೆಯೇ, ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಸಹಾಯ ಧನವನ್ನು ನೀಡುತ್ತಿದೆ ?

## ಸರ್ಕಾರಿ ವೈದ್ಯರುಗಳು ಖಾಸಗಿ ಚಿಕಿತ್ಸಾಲಯವನ್ನು ಹೊಂದಿರುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨೯ (೩೧೦೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮತ್ತು ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರು ಮತ್ತು ವೈದ್ಯಕೀಯ ಭೋದಕರ ಸಂಖ್ಯೆ ಎಷ್ಟು; (ವೈದ್ಯಕೀಯ ಕಾಲೇಜುಗಳವಾರು ಮತ್ತು ವೃಂದಗಳವಾರು ವಿವರಗಳನ್ನು ನೀಡುವುದು)

(ಆ) ಈ ವೈದ್ಯರು ಮತ್ತು ವೈದ್ಯಕೀಯ ಬೋಧಕರುಗಳಿಗೆ ನೀಡುತ್ತಿರುವ ವೇತನ ಎಷ್ಟು; (ಕಾಲೇಜುವಾರು ಮತ್ತು ವೃಂದವಾರು ವಿವರಗಳನ್ನು ನೀಡುವುದು)

(ಇ) ಸರ್ಕಾರಿ ವೈದ್ಯರುಗಳು ಖಾಸಗಿಯಾಗಿ ಚಿಕಿತ್ಸಾ ಕೇಂದ್ರಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸರ್ಕಾರಿ ವೈದ್ಯರುಗಳು ಖಾಸಗಿ ಚಿಕಿತ್ಸಾ ಕೇಂದ್ರಗಳನ್ನು ಹೊಂದಲು ಕಾನೂನಿನಲ್ಲಿ ಅವಕಾಶವಿದೆಯೇ; ಹಾಗಿಲ್ಲದಿದ್ದಲ್ಲಿ, ಖಾಸಗಿ ಚಿಕಿತ್ಸಾ ಕೇಂದ್ರಗಳನ್ನು ಹೊಂದಿರುವ ವೈದ್ಯರುಗಳ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ;

(ಉ) ಇದುವರೆವಿಗೂ ಖಾಸಗಿ ಚಿಕಿತ್ಸಾ ಕೇಂದ್ರಗಳನ್ನು ಹೊಂದಿರುವ ಎಷ್ಟು ಪ್ರಕರಣಗಳು ದಾಖಲಾಗಿವೆ ಮತ್ತು ಆ ವೈದ್ಯರುಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಪೂರ್ಣ ವಿವರ ನೀಡುವುದು)

## ಹಿಂದುಳಿದ ವರ್ಗಗಳಿಗೆ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೩೦(೩೧೦೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ವಿವಿಧ ದರ್ಜೆಯ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಸಂಖ್ಯಾ ವಿವರಗಳನ್ನು ನೀಡುವುದು)

(ಆ) ವಿದ್ಯಾರ್ಥಿಗಳ ಬೇಡಿಕೆಗನುಗುಣವಾಗಿ ಹಾಸ್ಟೆಲ್‌ಗಳ ವ್ಯವಸ್ಥೆಯನ್ನು ಮಾಡಲಾಗಿದೆಯೇ; ಇಲ್ಲವಾದಲ್ಲಿ ಎಷ್ಟು ಹಾಸ್ಟೆಲ್‌ಗಳನ್ನು ನಿರ್ಮಿಸಲು ಯೋಜನೆಯನ್ನು ರೂಪಿಸಲಾಗಿದೆ; (ವಿವರ ಒದಗಿಸುವುದು)

(ಇ) ವಿದ್ಯಾರ್ಥಿ ನಿಲಯಗಳ ಮೂಲಕ ಒಟ್ಟು ಎಷ್ಟು ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ?

## ತುಮಕೂರು ಜಿಲ್ಲೆಯ ಸಮುದಾಯ ಭವನಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೩೧ (೩೧೦೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮುದಾಯ ಭವನ ನಿರ್ಮಾಣಕ್ಕೆ ಮಂಜೂರು ಮಾಡುವಾಗ ಸರ್ಕಾರ ಅನುಸರಿಸುತ್ತಿರುವ ನೀತಿ–ನಿಯಮಗಳು ಯಾವುವು;

(ಆ) ತುಮಕೂರು ಜಿಲ್ಲೆಯಲ್ಲಿ ಕಳೆದ ಎರಡು ವರ್ಷದಿಂದ ಸಮುದಾಯ ಭವನ ನಿರ್ಮಾಣ ಮಾಡಲು ಬಂದಿರುವ ಬೇಡಿಕೆಗಳೆಷ್ಟು;

(ಇ) ಪ್ರತಿಯೊಂದು ವಿಳಾಸದೊಂದಿಗೆ ವಿವರ ನೀಡುವುದು;

(ಈ) ಬೇಡಿಕೆಗೆ ತಕ್ಕಂತೆ ಮಂಜೂರು ಮಾಡಿರುವ ಸಮುದಾಯ ಭವನಗಳು ಎಷ್ಟು;

(ಉ) ಉಳಿದಿರುವ ಬೇಡಿಕೆಗಳಿಗೆ ಯಾವಾಗ ಮಂಜೂರು ಮಾಡಲಾಗುವುದು?

## ಬಸ್ ಸಂಚಾರದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೩೨ (೩೧೧೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ನಗರದಲ್ಲಿರುವ ಬಸ್ ಡಿಪೋದಲ್ಲಿನ ಪ್ರತಿ ತಿಂಗಳ ಆದಾಯದಲ್ಲಿ ವ್ಯತ್ಯಾಸವಾಗುತ್ತಿರುವುದು ನಿಜವಲ್ಲವೆ; ಈ ಡಿಪೋ ಬಗ್ಗೆ ಸಮಗ್ರ ಮಾಹಿತಿ ನೀಡುವುದು;

(ಆ) ದಿನವಹಿ ಡಿಪೋದಿಂದ ಎಷ್ಟು ಬಸ್ಸುಗಳು ಆಚೆ ಹೋಗುತ್ತವೆ; ಎಷ್ಟು ಬರುತ್ತವೆ? (ವಿವರ ನೀಡುವುದು) (ರೂಟ್ ಸಮೇತ)

(ಇ) ಬಸ್‌ನಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಒದಗಿಸಿರುವ ಸೌಲಭ್ಯಗಳಾವುವು;

## ಮಾಹಿತಿ ತಂತ್ರಜ್ಞಾನ ಕಂಪನಿಗಳಲ್ಲಿ ಕನ್ನಡಿಗರನ್ನು ಕಡ್ಡಾಯವಾಗಿ ನೇಮಿಸಿಕೊಳ್ಳುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೩೩ (೩೧೦೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮಾಹಿತಿ ತಂತ್ರಜ್ಞಾನ ಕಂಪನಿಗಳ ಸ್ಥಾಪನೆಗೆ ಸರ್ಕಾರ ಗುರುತಿಸಿದ ಎರಡನೇ ಹಂತದ ನಗರಗಳು ಯಾವುವು;

(ಆ) ಈ ನಗರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಕಂಪನಿಗಳ ಸಂಖ್ಯೆ ಎಷ್ಟು; (ನಗರವಾರು ಮಾಹಿತಿ ನೀಡುವುದು)

(ಇ) ಈ ಕಂಪನಿಗಳಲ್ಲಿ ಕೆಲಸ ಮಾಡುತ್ತಿರುವ ಮಾಹಿತಿ ತಂತ್ರಜ್ಞಾನದ ಸಂಖ್ಯೆ ಎಷ್ಟು;

(ಈ) ಆ ಪೈಕಿ ಕನ್ನಡಿಗರ ಸಂಖ್ಯೆ ಎಷ್ಟು ?

(ಉ) ತುರುವೇಕೆರೆ ತಾಲ್ಲೂಕಿನಲ್ಲಿ ಸದರಿ ಕಂಪನಿಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

## ತೀವ್ರ ನಿಗಾ ಘಟಕಗಳ ಸ್ಥಾಪನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೨೫೩೪ (೩೧೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ತೀವ್ರ ನಿಗಾ ಘಟಕ (ಐ.ಸಿ.ಯು) ಹೊಂದಿರುವ ಸರ್ಕಾರಿ ಆಸ್ಪತ್ರೆಗಳೆಷ್ಟು; ಈ ತೀವ್ರ ನಿಗಾ ಘಟಕಗಳಲ್ಲಿರುವ ಹಾಸಿಗೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ತೀವ್ರ ನಿಗಾ ಘಟಕಗಳು ರೋಗಿಗಳ ಅನುಪಾತಕ್ಕೆ ಅನುಗುಣವಾಗಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ರೋಗಿಗಳ ಅನುಪಾತಕ್ಕನುಗುಣವಾಗಿ ತೀವ್ರ ನಿಗಾ ಘಟಕಗಳನ್ನು ಸ್ಥಾಪಿಸಲು ಇರುವ ತೊಂದರೆಗಳೇನು ;

(ಈ) ಈ ವರ್ಷದ ಆಯವ್ಯಯದಲ್ಲಿ ಎಷ್ಟು ಘಟಕಗಳನ್ನು ಎಲ್ಲೆಲ್ಲಿ ಮಂಜೂರು ಮಾಡಲಾಗುವುದು?

## ಮಕ್ಕಳು ಕಾಣೆಯಾಗುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೫ (೩೧೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಕ್ಕಳು ಕಾಣೆಯಾಗುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ೦೫ ವರ್ಷಗಳಲ್ಲಿ ಕಾಣೆಯಾದ ಮಕ್ಕಳ ಸಂಖ್ಯೆ ಎಷ್ಟು; ಜಿಲ್ಲಾವಾರು ವಿವರಗಳನ್ನು ನೀಡುವುದು. ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಪತ್ತೆ ಮಾಡಲಾಗಿದೆ ?

(ಇ) ನಾಪತ್ತೆ ಪ್ರಕರಣಗಳಲ್ಲಿ ಎಫ್.ಐ.ಆರ್. ದಾಖಲಿಸಲಾಗುತ್ತಿದೆಯೇ; ಇಲ್ಲವಾದಲ್ಲಿ ಕಾರಣವೇನು? (ಕಾನೂನು ಸಮರ್ಥನೆ ನೀಡುವುದು)

## ಉತ್ತರ ಕರ್ನಾಟಕದಲ್ಲಿ ಸಾಂಸ್ಕೃತಿಕ ಅಭಿವೃದ್ಧಿ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೬ (೩೧೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕವು ಸಾಂಸ್ಕೃತಿಕ ಅಭಿವೃದ್ಧಿ ವಲಯದಲ್ಲಿ ತನ್ನ ಸೂಕ್ತ ಪಾಲನ್ನು ಪಡೆದಿಲ್ಲ ಎಂಬ ಸತ್ಯಾಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಧಾರವಾಡ ಅಥವಾ ಬೆಳಗಾವಿಯಲ್ಲಿ ಸಾಂಸ್ಕೃತಿಕ ತರಬೇತಿ ಕೇಂದ್ರವನ್ನು ಸ್ಥಾಪಿಸಲಾಗುವುದೇ;

(ಇ) ಸರ್ಕಾರಿ ಸೇವೆಯಿಂದ ನಿವೃತ್ತರಾದ ಹಿರಿಯ ನಾಗರಿಕರಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯವನ್ನು ವಿಸ್ತರಿಸಲಾಗುವುದೆ?

## ಉತ್ತರ ಕರ್ನಾಟಕದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಅಭಿವೃದ್ಧಿಪಡಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೭ (೩೧೧೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕವು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ತೀವ್ರ ಹಿಂದುಳಿದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳೇನು;

(ಇ) ಡಾ॥ ಡಿ.ಎಂ. ನಂಜುಂಡಪ್ಪರವರ ವರದಿ ಪ್ರಕಾರ ರಾಜ್ಯದ ಪ್ರತಿಯೊಂದು ವಿಭಾಗದಲ್ಲಿ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕನಿಷ್ಠ ಒಂದು ಮುಂದುವರೆದ ಕೇಂದ್ರವನ್ನು ಸ್ಥಾಪಿಸಲಾಗುವುದೇ?

## ಹುಬ್ಬಳ್ಳಿ–ಧಾರವಾಡ ನಡುವೆ ಜೋಡಿ ರಸ್ತೆಗಳನ್ನು ನಿರ್ಮಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೩೮ (೩೧೨೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ–ಧಾರವಾಡಗಳ ನಡುವಣ ವಾಹನಗಳ ಸಂಚಾರ ದಟ್ಟಣೆ ಹೆಚ್ಚಾಗಿದ್ದು, ಇದರಿಂದ ಅಪಘಾತಗಳು ಹೆಚ್ಚಾಗಿ ವೇಗಮಿತಿಯನ್ನು ೪೦ ಕಿ.ಮೀ.ಗೆ ಸೀಮಿತಗೊಳಿಸಿರುವ ಕಾರಣ ಸಾರ್ವಜನಿಕರಿಗೆ ತೊಂದರೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪರ್ಯಾಯ ಜೋಡಿ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದೇ;

(ಇ) ಹುಬ್ಬಳ್ಳಿ–ಧಾರವಾಡಗಳ ಮಧ್ಯೆ ಮೆಟ್ರೋ ರೈಲು ಸಂಚಾರ ಕಲ್ಪಿಸಲಾಗುವುದೇ?

## ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮಾಜಕಲ್ಯಾಣ ಇಲಾಖೆಯ ವಸತಿ ನಿಲಯಗಳ ಅವ್ಯವಸ್ಥೆಯ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೩೯ (೩೧೧೫) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸಲಾಗುತ್ತಿರುವ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳೆಷ್ಟು;

(ಆ) ಪ್ರತಿ ವರ್ಷ ಈ ಬಾಡಿಗೆ ಕಟ್ಟಡಗಳಿಗೆ ನೀಡುತ್ತಿರುವ ಬಾಡಿಗೆ ಮತ್ತು ನಿರ್ವಹಣಾ ವೆಚ್ಚವೆಷ್ಟು;

(ಇ) ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ವಸತಿ ನಿಲಯಗಳೆಷ್ಟು; ಅವುಗಳನ್ನು ವಿದ್ಯಾರ್ಥಿಗಳ ವಾಸ್ತವ್ಯಕ್ಕೆ ನೀಡಲಾಗಿದೆಯೇ;

(ಈ) ಈ ಎಲ್ಲಾ ವಸತಿ ನಿಲಯಗಳಲ್ಲಿ ಶೌಚಾಲಯ ಮತ್ತು ಸ್ನಾನದಗೃಹಗಳು ಸುಸ್ಥಿತಿಯಲ್ಲವೆಯೇ;

(ಉ) ಹೊಸ ಕಟ್ಟಡಗಳ ನಿರ್ಮಾಣ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ; ಇದ್ದರೆ ಯಾವಾಗ ಮಾಡಲಾಗುವುದು?

## ಮಕ್ಕಳಲ್ಲಿ ಕಂಡುಬಂದ ಅಪೌಷ್ಠಿಕತೆಯ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೦ (೩೧೧೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಕಂಡುಬಂದ ಮಕ್ಕಳಲ್ಲಿನ ಅಪೌಷ್ಠಿಕತೆಯ ಪ್ರಕರಣಗಳು ಎಷ್ಟು; (ಜಿಲ್ಲಾವಾರು ನೀಡುವುದು)

(ಆ) ಈ ಅಪೌಷ್ಠಿಕತೆಯನ್ನು ಹೊಂದಿರುವ ಮಕ್ಕಳಿಗೆ ಸರ್ಕಾರದಿಂದ ದೊರೆಯಬಹುದಾದ ಸೌಲಭ್ಯಗಳು ಯಾವುವು;

(ಇ) ಸೌಲಭ್ಯಗಳು ಇದ್ದಲ್ಲಿ, ಸರ್ಕಾರ ಅವರನ್ನು ಗುರುತಿಸುವ ಮತ್ತು ಅವರಿಗೆ ತಲುಪಿಸುವ ವಿಧಾನ ಯಾವುದು;

(ಈ) ಈ ಅಪೌಷ್ಠಿಕತೆಯ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ವಸತಿ ನಿಲಯಗಳಿಗೆ ಕಳಪೆ ಗುಣಮಟ್ಟದ ಆಹಾರ ಪೂರೈಕೆಯಾಗುತ್ತಿರುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೫೪೧ (೩೧೧೪) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸುತ್ತಿರುವ ವಸತಿ ನಿಲಯಗಳಿಗೆ ಕಳಪೆ ಗುಣಮಟ್ಟದ ಆಹಾರ ಪೂರೈಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರತಿ ವಿದ್ಯಾರ್ಥಿಗೆ ಸರ್ಕಾರ ವಾರ್ಷಿಕವಾಗಿ ಮಾಡುತ್ತಿರುವ ವೆಚ್ಚವೆಷ್ಟು; (ವಿವರ ನೀಡುವುದು)

(ಇ) ಕಳಪೆ ಆಹಾರ ಸಾಮಗ್ರಿ ಪೂರೈಕೆ ಮಾಡಿದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು;

(ಈ) ಪೂರೈಕೆಯಾಗುವ ಆಹಾರದ ಗುಣಮಟ್ಟವನ್ನು ಸರ್ಕಾರದಿಂದ ಪರಿಶೀಲಿಸಲಾಗುತ್ತಿದೆಯೇ;

(ಉ) ೨೦೧೫ರಲ್ಲಿ ನಡೆದ ಆಹಾರ ಸರಬರಾಜುದಾರರ ಆಯ್ಕೆಯ ಟೆಂಡರ್ ಪ್ರಕ್ರಿಯೆಯ ಬಗ್ಗೆ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯರ ಕೊರತೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೨ (೩೧೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳು ಎಷ್ಟು;

(ಆ) ಇವುಗಳಲ್ಲಿ ಮಂಜೂರಾದ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಹುದ್ದೆಗಳೆಷ್ಟು; ಎಷ್ಟು ಹುದ್ದೆಗಳು ಖಾಲಿಯಿವೆ;

(ಇ) ಸಿಬ್ಬಂದಿಯ ಕೊರತೆಯಿಂದ ರೋಗಿಗಳಿಗೆ ಚಿಕಿತ್ಸೆ ಪಡೆಯಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಯನ್ನು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು?

## ಬೆಂಗಳೂರು ಉತ್ತರ ತಾಲ್ಲೂಕು ರಾವುತ್ತನಹಳ್ಳಿ ಗೌಡಹಳ್ಳಿಗೆ ಬಸ್ ಸೌಲಭ್ಯವಿಲ್ಲದ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೩ (೩೧೧೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಬೆಂಗಳೂರು ಉತ್ತರ ತಾಲ್ಲೂಕಿನ ಗೌಡಹಳ್ಳಿ, ರಾವುತ್ತನಹಳ್ಳಿ ಗ್ರಾಮಗಳ ಜನತೆ ಸೂಕ್ತ ಬಸ್ ಸೌಲಭ್ಯವಿಲ್ಲದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಮೇಲ್ಕಾಣಿಸಿದ ಮಾರ್ಗದಲ್ಲಿ ಸಂಚರಿಸುವ ಬಸ್‌ಗಳ ಸಂಖ್ಯೆಯೆಷ್ಟು ಎಷ್ಟು ಟ್ರಿಪ್ ಸಂಚರಿಸುತ್ತವೆ;

(ಇ) ಈ ಮಾರ್ಗದ ಜನತೆಗೆ ಸೂಕ್ತ ಬಸ್ ಸೌಲಭ್ಯವೊದಗಿಸಲು ಸರ್ಕಾರ ಕೈಗೊಂಡ ಕ್ರಮವೇನು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಬಸ್ ಸೌಕರ್ಯದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೪ (೩೧೨೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ತಾಲ್ಲೂಕು ಕೇಂದ್ರದಿಂದ ಹೋಬಳಿ ಹಾಗೂ ಹಳ್ಳಿ ಸಂಪರ್ಕಗಳಿಗೆ ಬಸ್ ಸೌಕರ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಈ ಜಿಲ್ಲೆಗಳಲ್ಲಿ ಟಾಂ ಟಾಂ ಹಾಗೂ ಮ್ಯಾಕ್ಸಿ ಕ್ಯಾಬ್‌ಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ೨೦೧೩ ರಿಂದ ಇಲ್ಲಿಯವರೆಗೆ ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೫ (೩೧೧೯) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ೨೦೧೩ನೇ ಸಾಲಿನಿಂದ ಇಲ್ಲಿಯವರೆಗೆ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಯಾವ ಯಾವ ಹೊಸ ಯೋಜನೆಗಳನ್ನು ರೂಪಿಸಲಾಗಿದೆ;

(ಆ) ಈ ರೀತಿ ರೂಪಿಸಿದ ಯೋಜನೆಗಳು ಕಾರ್ಯರೂಪಕ್ಕೆ ಬಂದಿದೆಯೇ; ಬಂದಿದ್ದರೆ, ಯೋಜನೆಗಳ ವಿವರ ನೀಡುವುದು;

(ಇ) ಈ ಯೋಜನೆಯಿಂದ ಹೈದರಾಬಾದ್ ಕರ್ನಾಟಕ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆಯಾಗಿದೆ; ಇದರಲ್ಲಿ ಬಳಕೆಯಾದ ಅನುದಾನ ಎಷ್ಟು;

(ಈ) ಈ ಯೋಜನೆಗಳು ಜಾರಿಯಲ್ಲಿದ್ದರು ವಿದ್ಯಾರ್ಥಿಗಳಿಗೆ ತಲುಪದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕಾರಣಗಳೇನು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ವೈದ್ಯಕೀಯ ಕಾಲೇಜಿನ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೬ (೩೧೨೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವೈದ್ಯಕೀಯ ಕಾಲೇಜಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಈ ಕಾಲೇಜಿಗೆ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ನೇಮಕಾತಿ ಸಂಪೂರ್ಣ ಆಗಿದೆಯೇ;

(ಇ) ಕಲಬುರಗಿ ವೈದ್ಯಕೀಯ ಕಾಲೇಜಿನ ಕಟ್ಟಡ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು;

(ಈ) ನೂತನ ಜಿಲ್ಲೆ ಯಾದಗಿರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ ನೂತನ ಕಾಲೇಜನ್ನು ಯಾವ ವರ್ಷದಿಂದ ಪ್ರಾರಂಭಿಸಲಾಗುವುದು?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ರಂಗಾಯಣ ರಂಗದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೪೭ (೩೧೨೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ರಂಗಾಯಣದ ರಂಗಕ್ಕೆ ಮೂಲಭೂತ ಸೌಲಭ್ಯ ಒದಗಿಸಲಾಗಿದೆಯೇ;

(ಆ) ಕಲಬುರಗಿ ರಂಗಾಯಣದ ಸ್ವತಂತ್ರ್ಯ ಕಲಾವಿದರ ತಂಡ ನೇಮಕಗೊಂಡಿದೆಯೇ;

(ಇ) ಕಲಬುರಗಿ ರಂಗಾಯಣ ಸ್ಥಾಪನೆ ಯಾವ ದಿನದಿಂದ ಆಗಿದೆ; ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನ ಎಷ್ಟು; ಬಳಕೆಯಾದ ಅನುದಾನ ಎಷ್ಟು? (ಮಾಹಿತಿ ನೀಡುವುದು)

## ಗಂಗಾ ಕಲ್ಯಾಣ ಯೋಜನೆ ಅಕ್ರಮಗಳ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೫೪೮ (೩೧೨೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಕಳೆದ ೫ ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯ "ನೀರಿಲ್ಲದಿದ್ದರೆ ಹಣವಿಲ್ಲ" ನಿಯಮದಡಿ ಕೊರೆದ ಕೊಳವೆಬಾವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಕೊರೆದ ಕೊಳವೆಬಾವಿಗಳಲ್ಲಿ ನೀರಿನ ಇಳುವರಿ ಲಭ್ಯತೆ ಇದೆಯೇ ; ಇದ್ದಲ್ಲಿ ಎಷ್ಟು ಕೊಳವೆಬಾವಿಗಳಲ್ಲಿ ನೀರಿನ ಲಭ್ಯತೆ ಇದೆ ; ಈ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ ; ಇದ್ದಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಕಲ್ಪಿಸಲಾಗಿದೆ ;

(ಇ) ನೀರು ಲಭ್ಯವಿಲ್ಲದಿದ್ದ ಕೊಳವೆಬಾವಿಗಳಿಗೆ ಹಣ ಪಾವತಿ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಮೊತ್ತದ ಹಣವನ್ನು ಪಾವತಿಸಲಾಗಿದೆ ; ಇದಕ್ಕೆ ಕಾರಣರಾದ ಅಧಿಕಾರಿ/ನೌಕರರ ವಿವರ ನೀಡುವುದು ಮತ್ತು ಇವರ ಮೇಲೆ ಕೈಗೊಂಡ ಕ್ರಮಗಳ ವಿವರ ನೀಡುವುದು ;

(ಈ) ಇದರಡಿ ಅನ್ಯಾಯಕ್ಕೊಳಗಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು? (ಫಲಾನುಭವಿಗಳ ಹೆಸರನ್ನೊಳಗೊಂಡತೆ ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರಗಳನ್ನು ನೀಡುವುದು)

## ಬಯಲು ಸೀಮೆ ಮಂಡಳಿಯ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೫೪೯ (೩೧೨೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಯಲುಸೀಮೆ ಮಂಡಳಿ ಯಾವಾಗ ಅನುಷ್ಠಾನಕ್ಕೆ ಬಂತು ; ಈ ಮಂಡಳಿಯ ಕೆಲಸ ಕಾರ್ಯಗಳು ಮತ್ತು ವ್ಯಾಪ್ತಿಯ ವಿವರಗಳನ್ನು ನೀಡುವುದು/ಹಾಗೂ ಈ ಮಂಡಳಿಯ ಕೇಂದ್ರ ಸ್ಥಾನ ಯಾವುದು;

(ಆ) ಬಯಲುಸೀಮೆ ಮಂಡಳಿ ಸ್ಥಾಪನೆಯಾದಾಗಿನಿಂದ ಇಲ್ಲಿಯವರೆಗೂ ಕಾರ್ಯನಿರ್ವಹಿಸಿದ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಹಾಗೂ ಇವರು ಕಾರ್ಯನಿರ್ವಹಿಸಿದ ಅವಧಿಯ ವಿವರ ನೀಡುವುದು ;

(ಇ) ಈ ಮಂಡಳಿಗೆ ಇಲ್ಲಿಯವರೆಗೂ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ವರ್ಷಾವಾರು ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಈ ಮಂಡಳಿಯು ಕೈಗೊಂಡ ಕಾಮಗಾರಿಗಳ ವಿವರ ನೀಡುವುದು ;

(ಉ) ಈ ಮಂಡಳಿಯನ್ನು ಇನ್ನೂ ಹೆಚ್ಚು ಬಲಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಔಷಧಿಗಳ ಖರೀದಿ ಮತ್ತು ಸರಬರಾಜು ಪ್ರಕ್ರಿಯೆಯಲ್ಲಿ ಅವ್ಯವಹಾರ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೫೫೦ (೩೧೨೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೮ ರಿಂದ ೨೦೧೩ರವರೆಗೆ ಆರೋಗ್ಯ ಇಲಾಖೆಯ ಸರ್ಕಾರಿ ಆಸ್ಪತ್ರೆಗಳಿಗೆ ಸರಬರಾಜು ಮಾಡುವ ಔಷಧಿಗಳ ಖರೀದಿ ಮತ್ತು ಸರಬರಾಜು ಪ್ರಕ್ರಿಯೆಯಲ್ಲಿ ಯಾವ ನಿಯಮಗಳನ್ನು ಪಾಲಿಸಲಾಗುತ್ತಿದೆ; (ವಿವರಗಳನ್ನು ನೀಡುವುದು) ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಮಹಾಲೇಖಪಾಲರ (CAG) ವರದಿಯಲ್ಲಿ ಆಕ್ಷೇಪಣೆ ಎತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅದರ ವಿವರಗಳು ಮತ್ತು ಸಂಬಂಧಪಟ್ಟವರ ವಿರುದ್ಧ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ರೀತಿಯ ಅವ್ಯವಹಾರಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕಟ್ಟುನಿಟ್ಟಿನ ಕ್ರಮಗಳೇನು ? (ವಿವರ ನೀಡುವುದು)

## ವೈದ್ಯಕೀಯ ಕಾಲೇಜು ಪ್ರಾರಂಭ ಮಾಡುವ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೫೫೧ (೩೧೨೭) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಈ ವೈದ್ಯಕೀಯ ಕಾಲೇಜನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಇ) ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಈವರೆಗೂ ತೆಗೆದುಕೊಂಡಿರುವ ಕ್ರಮಗಳೇನು ?

## ಖಾಸಗಿ ಬಸ್ಸುಗಳ ಮಾಲೀಕರ ಜೊತೆ KSRTC ಸಿಬ್ಬಂದಿ ಶಾಮೀಲಾಗಿರುವ ಬಗ್ಗೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೫೫೨ (೩೧೨೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಜಿಲ್ಲೆಯ ಶ್ರೀನಿವಾಸಪುರದಿಂದ ಚಿಂತಾಮಣಿ ಬೈಪಾಸ್, ಹೆಚ್–ಕ್ರಾಸ್–ದೇವನಹಳ್ಳಿ ಮಾರ್ಗವಾಗಿ ಬೆಂಗಳೂರು ನಗರಕ್ಕೆ ಪ್ರತಿನಿತ್ಯ ಸಂಚರಿಸುವ ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು ; ಈ ಬಸ್ಸುಗಳು ಯಾವ ಯಾವ ನಿಗದಿತ ಸಮಯಕ್ಕೆ ಸಂಚರಿಸುತ್ತವೆ ; (ವಿವರ ನೀಡುವುದು)

(ಆ) ಈ ನಿಗದಿತ ಸಮಯಕ್ಕೆ ಸಂಚರಿಸುವ ಬಸ್ಸುಗಳಲ್ಲಿ ಎಷ್ಟು ಪ್ರಯಾಣಿಕರು ಸಂಚರಿಸುತ್ತಿದ್ದಾರೆ ; (ಬಸ್ಸುವಾರು ಸಂಚರಿಸುವ ಪ್ರಯಾಣಿಕರ ಸಂಖ್ಯೆ ನೀಡುವುದು)

(ಇ) ಈ ಸರ್ಕಾರಿ ಬಸ್ಸುಗಳು ನಿಗದಿತ ಸಮಯಕ್ಕೆ ಸಂಚರಿಸದೇ ಖಾಸಗಿ ಬಸ್ಸುಗಳು ಸಂಚರಿಸಿದ ನಂತರ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ ಬಸ್ಸುಗಳು ಸಮಯಕ್ಕೆ ಸರಿಯಾಗಿ ಸಂಚರಿಸಲು ಕೈಗೊಂಡ ಕ್ರಮಗಳೇನು ;

(ಈ) ಖಾಸಗಿ ಬಸ್ಸುಗಳಿಂದ ಸರ್ಕಾರಕ್ಕೆ ನಷ್ಟವಾಗದಂತೆ ಸರ್ಕಾರವು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯ ಸರ್ಕಾರದ "ಪ್ರಿಯದರ್ಶಿನಿ" ಯೋಜನೆಯ ಬಗ್ಗೆ

**ಶ್ರೀ ಅಶ್ವಥ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೩ (೩೧೩೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಇಲಾಖೆಯಡಿಯಲ್ಲಿನ "ಪ್ರಿಯದರ್ಶಿನಿ"ಗೆ ರಾಜ್ಯ ಸರ್ಕಾರದಿಂದ ಒದಗಿಸಿರುವ ಹಣ ಎಷ್ಟು ; ಮಹಿಳೆಯರಲ್ಲಿ ಜಾಗೃತಿ ಮೂಡಿಸಲು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; ಸದರಿ ಕಾರ್ಯಕ್ರಮಗಳಿಗೆ ಖರ್ಚಾಗಿರುವ ಹಣ ಎಷ್ಟು ; (ವಿವರ ನೀಡುವುದು)

(ಆ) ಖಾಸಗಿ ವ್ಯಕ್ತಿಗಳಿಂದ ಸಾಲ ಪಡೆದು ಹೆಚ್ಚಿನ ಬಡ್ಡಿಯನ್ನು ಪಾವತಿಸುತ್ತಿರುವುದನ್ನು ತಪ್ಪಿಸಲು ಹಾಗೂ ಈ ಬಗ್ಗೆ ಮಹಿಳೆಯರಲ್ಲಿ ಜಾಗೃತಿ ಮೂಡಿಸಲು ಸಹಕಾರ ಕ್ಷೇತ್ರದ ಮೂಲಕ ಮಹಿಳೆಯರ ಕಲ್ಯಾಣ ಕಾರ್ಯಕ್ರಮಗಳನ್ನು ರೂಪಿಸಿದ್ದರೆ, ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಡೆಂಗ್ಯೂ, ಚಿಕನ್‌ಗುನ್ಯ ಸಾಂಕ್ರಮಿಕ ರೋಗಗಳ ಬಗ್ಗೆ

**ಶ್ರೀ ಅಶ್ವಥ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೫೪ (೩೧೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜನವರಿ ೨೦೧೩ರಿಂದ ಇಲ್ಲಿಯವರೆವಿಗೂ ಬೆಂಗಳೂರಿನಲ್ಲಿ ಡೆಂಗ್ಯೂ, ಚಿಕನ್‌ಗುನ್ಯ ಹಾಗೂ ಇತರೆ ಸಾಂಕ್ರಾಮಿಕ ರೋಗಗಳಿಂದ ಕಳೆದ ಎರಡು ವರ್ಷಗಳಿಂದ ಸತ್ತವರ ಸಂಖ್ಯೆ ಎಷ್ಟು ;

(ಆ) ಈ ಯಾವ ಯಾವ ಖಾಯಿಲೆಗಳಿಗೆ ಯಾವ ಮಾದರಿಯ ಚಿಕಿತ್ಸೆ/ ಔಷಧಿಗಳನ್ನು ನೀಡಲಾಗುತ್ತಿದೆ ? (ವಿವರ ನೀಡುವುದು)

## ಬಳ್ಳಾರಿ ಜಿಲ್ಲೆಯಲ್ಲಿ ಸಫಾಯಿ ಕರ್ಮಚಾರಿಗಳ ಪುನರ್ ವಸತಿ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೫೫ (೩೧೭೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಸಫಾಯಿ ಕರ್ಮಚಾರಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಎಷ್ಟು ಜನರಿಗೆ ಪುನರ್ ವಸತಿ ಕಲ್ಪಿಸಲಾಗಿದೆ; ನೀಡಲಾದ ಸಹಾಯಧನವೆಷ್ಟು ;

(ಇ) ಕಳೆದ ೩ ವರ್ಷಗಳಲ್ಲಿ ಜಿಲ್ಲೆಯಲ್ಲಿ ಎಷ್ಟು ಸೇವಾಲಾಲ್ ಭವನಗಳನ್ನು ನಿರ್ಮಾಣ ಮಾಡಲಾಗಿದೆ ; ಎಲ್ಲೆಲ್ಲಿ ನಿರ್ಮಾಣ ಮಾಡಲಾಗಿದೆ ?

## ರಾಜ್ಯದ ಯೋಜನಾ ವೆಚ್ಚದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೫೫೬ (೩೧೮೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೮–೦೯ನೇ ಸಾಲಿನಿಂದ ೨೦೧೫–೧೬ನೇ ಸಾಲಿನವರೆಗೆ ರಾಜ್ಯದ ಆಯವ್ಯಯದಲ್ಲಿ ಯೋಜನಾ ಕಾರ್ಯಕ್ರಮಗಳಿಗೆ ನಿಗದಿಪಡಿಸಿದ ಅನುದಾನ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಪ್ರತಿ ವರ್ಷ ನಿಗದಿಪಡಿಸಿದ ಯೋಜನಾ ವೆಚ್ಚವನ್ನು ಖರ್ಚು ಮಾಡದಿರಲು ಕಾರಣಗಳೇನು ;

(ಇ) ಯಾವ ಯಾವ ಇಲಾಖೆಗಳು ತಮಗೆ ನಿಗದಿಪಡಿಸಿದ ಯೋಜನಾ ವೆಚ್ಚದ ಅಂದಾಜಿನ ಅನ್ವಯ ಕಡಿಮೆ ಖರ್ಚು ಮಾಡಿವೆ ;

(ಈ) ಕಡಿಮೆ ವೆಚ್ಚ ಮಾಡಿದ ಇಲಾಖೆಗಳ ಅಧಿಕಾರಿಗಳ ವಿರುದ್ಧ ಯಾವುದಾದರೂ ಕ್ರಮ ಕೈಗೊಳ್ಳಲು ಉದ್ದೇಶಿಸಲಾಗಿದೆಯೇ ?

## ಹುಬ್ಬಳ್ಳಿಯ ಬಾಲಕಿಯರ ವಸತಿನಿಲಯದ ಬಾಕಿ ಬಾಡಿಗೆಗೆ ಅನುದಾನ ಬಿಡುಗಡೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೫೫೭ (೩೧೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿಯ ತಾಲ್ಲೂಕು ಉಣಕಲ್ಲದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಬಾಡಿಗೆಯನ್ನು ಯಾವ ದಿನಾಂಕದಿಂದ ಹೆಚ್ಚಿಸಿ ಸರ್ಕಾರ ಆದೇಶ ಹೊರಡಿಸಿದೆ ;

(ಆ) ಈ ಆದೇಶವು ಹೆಚ್ಚುವರಿ ಬಾಡಿಗೆಯ ಬಾಕಿ ಮೊತ್ತವನ್ನು ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಇಲಾಖೆಗೆ ಯಾವ ದಿನಾಂಕದಂದು ಪ್ರಸ್ತಾವನೆ ಬಂದಿದೆ ;

(ಇ) ಹೆಚ್ಚುವರಿ ಅನುದಾನವನ್ನು ಯಾವ ದಿನಾಂಕದಂದು ಬಿಡುಗಡೆ ಮಾಡಲಾಗಿದೆ ;

(ಈ) ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿರದಿದ್ದಲ್ಲಿ ಯಾವ ದಿನಾಂಕದೊಳಗೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲಾಗುವುದು?

## ಬಿ.ಪಿ.ಎಲ್ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಖರ್ಚಾಗುತ್ತಿರುವ ಹಣದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೫೫೮ (೩೧೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್ ಕಾರ್ಡುಗಳ ಸಂಖ್ಯೆ ಎಷ್ಟು ;

(ಆ) ಬಿ.ಪಿ.ಎಲ್ ಕಾರ್ಡು ಹೊಂದಲು ಅರ್ಹತೆ ಇಲ್ಲದವರೂ ಕೂಡಾ ಬಿ.ಪಿ.ಎಲ್ ಕಾರ್ಡು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎಷ್ಟು ಅನರ್ಹ ಬಿ.ಪಿ.ಎಲ್ ಫಲಾನುಭವಿಗಳನ್ನು ಇಲ್ಲಿಯವರಿಗೆ ಗುರುತಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಅನರ್ಹ ಬಿ.ಪಿ.ಎಲ್ ಕಾರ್ಡುಗಳನ್ನು ರದ್ದುಪಡಿಸಲಾಗಿದೆಯೇ ;

(ಉ) ಹಾಗಿದ್ದಲ್ಲಿ, ರದ್ದುಪಡಿಸಲಾಗಿರುವ ಬಿ.ಪಿ.ಎಲ್ ಕಾರ್ಡುಗಳ ಸಂಖ್ಯೆ ಎಷ್ಟು ;

(ಊ) ಬಿ.ಪಿ.ಎಲ್ ಫಲಾನುಭವಿಗಳಿಗೆ ಒದಗಿಸುವ ಆಹಾರಧಾನ್ಯ, ಸಕ್ಕರೆ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ವೆಚ್ಚ ಮಾಡುವ ಹಣ ಎಷ್ಟು ;

(ಋ) ಅನರ್ಹ ಬಿ.ಪಿ.ಎಲ್ ಕಾರ್ಡುಗಳ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಖರ್ಚಾಗುವ ಹಣ ಎಷ್ಟು ?

## ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಿಬ್ಬಂದಿಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೨೫೪೯ (೩೧೮೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವತಿಯಿಂದ ಕಳೆದ ೨ ವರ್ಷಗಳಲ್ಲಿ ಎಷ್ಟು ಜನ ವಾಹನಚಾಲಕ ಹಾಗೂ ವಾಹನಚಾಲಕ ಕಂ ನಿರ್ವಾಹಕರನ್ನು ವರ್ಗಾಯಿಸಿ ಆದೇಶ ಹೊರಡಿಸಲಾಗಿದೆ ;

(ಆ) ಹೀಗೆ ವರ್ಗಾಯಿಸಿದ ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆ ಮಾಡಲಾಗಿದೆಯೇ ;

(ಇ) ಎಷ್ಟು ಜನ ಸಿಬ್ಬಂದಿಯನ್ನು ಕರ್ತವ್ಯದಿಂದ ಬಿಡುಗಡೆ ಮಾಡಲಾಗಿದೆ;

(ಈ) ಇನ್ನೂ ಎಷ್ಟು ಜನ ಸಿಬ್ಬಂದಿಯನ್ನು ಕರ್ತವ್ಯದಿಂದ ಬಿಡುಗಡೆ ಮಾಡುವುದು ಬಾಕಿ ಇದೆ ;

(ಉ) ವರ್ಗಾವಣೆ ಆದೇಶ ಹೊರಡಿಸಿದ್ದರೂ ಕೂಡಾ ಸಿಬ್ಬಂದಿಗಳನ್ನು ಬಿಡುಗಡೆ ಮಾಡದಿರಲು ಕಾರಣಗಳೇನು ;

(ಊ) ಕೆಲವು ಸಿಬ್ಬಂದಿಯನ್ನು ಬಿಡುಗಡೆಗೊಳಿಸಿ, ಇನ್ನೂ ಕೆಲ ಸಿಬ್ಬಂದಿಯನ್ನು ಬಿಡುಗಡೆ ಮಾಡದಿರಲು ಕಾರಣಗಳೇನು ; ಹಾಗೂ ಇದು ಇಲಾಖೆಯು ಅನುಸರಿಸುತ್ತಿರುವ ತಾರತಮ್ಯವಲ್ಲವೆ ?

## ಪಡಿತರ ಅಂಗಡಿಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆ ಅಳವಡಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೫೬೦ (೩೧೯೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲಿ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಹೊಂದಿರುವವರ ಸಂಖ್ಯೆ ಎಷ್ಟು ;

(ಆ) ಕಳೆದ ಎರಡು ವರ್ಷಗಳಲ್ಲಿ ಪತ್ತೆ ಹಚ್ಚಲಾಗಿರುವ ಅಕ್ರಮ ಬಿ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು ;

(ಇ) ಸಾರ್ವಜನಿಕರು ಬಿ.ಪಿ.ಎಲ್. ಕಾರ್ಡ್‌ಗಳನ್ನು ಪಡೆಯಲು ಯಾವ ಯಾವ ಅರ್ಹತೆ ಹೊಂದಿರಬೇಕು ; (ವಿವರ ನೀಡುವುದು)

(ಈ) ಪಡಿತರ ಅಂಗಡಿಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆ ಅಳವಡಿಸುತ್ತಿರುವುದು ನಿಜವೇ ; ಇದನ್ನು ಯಾವಾಗಿನಿಂದ ಜಾರಿಗೆ ತರಲಾಗುವುದು ;

(ಉ) ಈ ವ್ಯವಸ್ಥೆಯನ್ನು ಅಳವಡಿಸಿಕೊಂಡ ಮೇಲೆ, ಕಾರ್ಡುದಾರರು ಪಡಿತರ ಪಡೆಯುವ ಸಂದರ್ಭದಲ್ಲಿ ಕಾರ್ಡ್‌ನಲ್ಲಿ ಹೆಸರಿರುವ ಸದಸ್ಯರೆಲ್ಲರೂ ಹಾಜರಿರಬೇಕಾಗುವುದೊ ಅಥವಾ ಇವರಲ್ಲಿ ಯಾರಾದರೊಬ್ಬರು ಹಾಜರಿರಬಹುದೇ ? (ವಿವರ ನೀಡುವುದು)

## ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳನ್ನು ಹೈಟೆಕ್ ಬಸ್ ನಿಲ್ದಾಣಗಳನ್ನಾಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೫೬೧ (೩೧೮೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವತಿಯಿಂದ ಪ್ರತಿ ದಿನಕ್ಕೆ ಎಷ್ಟು ಮಾರ್ಗಗಳಲ್ಲಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿರುವ ಒಟ್ಟು ಬಸ್ಸುಗಳ ಸಂಖ್ಯೆ ಎಷ್ಟು ;

(ಇ) ಸದರಿ ಸಂಸ್ಥೆಯಲ್ಲಿ ಒಟ್ಟು ಎಷ್ಟು ಹುದ್ದೆಗಳು ಖಾಲಿಯಿರುತ್ತವೆ ; (ವೃಂದವಾರು ವಿವರ ನೀಡುವುದು)

(ಈ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿ ಬರುವ ಹಲವು ಬಸ್ ನಿಲ್ದಾಣಗಳು ತುಂಬಾ ಹಳೆಯದಾಗಿದ್ದು, ಇವುಗಳನ್ನು ಹೈಟೆಕ್ ಬಸ್ ನಿಲ್ದಾಣಗಳನ್ನಾಗಿ ಮಾಡಲು ಯೋಜಿಸಲಾಗಿದೆಯೇ ;

(ಉ) ಇದಕ್ಕೆ ಅವಶ್ಯಕತೆ ಇರುವ ಹಣ ಎಷ್ಟು ?

## ವಿಕಲಚೇತನರಿಗೆ ಉಚಿತ ಬೈಸಿಕಲ್ ಒದಗಿಸುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೫೬೨ (೩೧೯೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿಕಲಚೇತನರಿಗೆ ಪ್ರತಿ ತಿಂಗಳು ಎಷ್ಟು ಮಾಸಾಶನ ನೀಡಲಾಗುತ್ತಿದೆ ;

(ಆ) ಹಾಲಿ ನೀಡಲಾಗುತ್ತಿರುವ ಮಾಸಾಶನ ಹೆಚ್ಚಳ ಮಾಡಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ರಾಜ್ಯ ಸರ್ಕಾರದ ವತಿಯಿಂದ ಉಚಿತ ಬೈಸಿಕಲ್ ನೀಡಲಾಗುತ್ತದೆಯೇ ;

(ಈ) ಇಲ್ಲಿಯವರೆಗೂ ಎಷ್ಟು ಜನ ಅಂಗವಿಕಲರಿಗೆ ಉಚಿತ ಬೈಸಿಕಲ್ ನೀಡಲಾಗಿದೆ ?

## ತಾಲ್ಲೂಕಿಗೊಂದು ಕಿಯೋನಿಕ್ಸ್ ಕಂಪ್ಯೂಟರ್ ತರಬೇತಿ ಕೇಂದ್ರಗಳನ್ನು ತೆರೆಯುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೫೬೩ (೩೨೦೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಿಯೋನಿಕ್ಸ್ ಕಂಪ್ಯೂಟರ್ ತರಬೇತಿ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಿಯೋನಿಕ್ಸ್ ಕಂಪ್ಯೂಟರ್ ತರಬೇತಿ ಕೇಂದ್ರಗಳಲ್ಲಿ ಪಡೆಯುತ್ತಿರುವ ಶುಲ್ಕ ಬಡ ವಿದ್ಯಾರ್ಥಿಗಳಿಗೆ ಭರಿಸಲು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಬಡ ವಿದ್ಯಾರ್ಥಿಗಳಿಗೆ ಉಚಿತವಾಗಿ ತರಬೇತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕಿಯೋನಿಕ್ಸ್ ಕಂಪ್ಯೂಟರ್ ತರಬೇತಿ ಕೇಂದ್ರಗಳು ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ ಇರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಸದರಿ ತರಬೇತಿ ಕೇಂದ್ರಗಳನ್ನು ಇನ್ನು ಮುಂದೆ ತಾಲ್ಲೂಕಿಗೊಂದು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೫೬೪ (೩೮೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಬಡಜನರಿಗೆ ಯಾವ ಯಾವ ಚಿಕಿತ್ಸಾ ಸೌಲಭ್ಯಗಳನ್ನು ನೀಡಲಾಗುತ್ತಿದೆ ;

(ಆ) ಮುಖ್ಯವಾಗಿ, ಗ್ರಾಮೀಣ ಭಾಗದ ಜನರಿಗೆ ಸರ್ಕಾರದ ವತಿಯಿಂದ ಉಚಿತ ಚಿಕಿತ್ಸಾ ಸೌಲಭ್ಯಗಳನ್ನು ಪಡೆಯುವ ಮಾಹಿತಿಯ ಅರಿವು ಇಲ್ಲದೇ ಇರುವುದರಿಂದ ಇವರು ಖಾಸಗಿ ಆಸ್ಪತ್ರೆಗಳ ಮೊರೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಾದರೆ, ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಉಚಿತ ಚಿಕಿತ್ಸಾ ಸೌಲಭ್ಯಗಳ ಕುರಿತು ಗ್ರಾಮೀಣ ಭಾಗದ ಜನರಲ್ಲಿ ಅರಿವು ಮೂಡಿಸಲು ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು ?

## ಬಿ.ಎಂ.ಟಿ.ಸಿ. ಬಸ್ಸಿನಲ್ಲಿ ಮಹಿಳಾ ಪ್ರಯಾಣಿಕರು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೬೫ (೩೨೦೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ರಿಂದ ಇಲ್ಲಿಯವರೆಗೆ ಮಹಿಳಾ ಪ್ರಯಾಣಿಕರಿಂದ ಬಿ.ಎಂ.ಟಿ.ಸಿ. ಬಸ್ಸಿನಲ್ಲಿ ಮಹಿಳೆಯರಿಗೆ ನಡೆಯುವ ದೌರ್ಜನ್ಯವನ್ನು ಕುರಿತು ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಮಾಸಿಕವಾರು ಮಾಹಿತಿ ನೀಡುವುದು ;

(ಆ) ಈ ಸಂಬಂಧ ಏನು ಕ್ರಮ ಕೈಗೊಳ್ಳಲಾಗಿದೆ ; ದೌರ್ಜನ್ಯ ಮಾಡಿದ ಎಷ್ಟು ಜನರಿಗೆ ಶಿಕ್ಷೆ ವಿಧಿಸಲಾಗಿದೆ ;

(ಇ) ಸರಿಯಾದ ಕ್ರಮ ಕೈಗೊಳ್ಳಲು ಸಾಧ್ಯವಾಗಿಲ್ಲವಾದಲ್ಲಿ ಕಾರಣವೇನು ?

## ಏಡ್ಸ್ ನಿಯಂತ್ರಣ ಸಂಸ್ಥೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೬೬ (೩೨೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆಯ ಕರ್ತವ್ಯ ಮತ್ತು ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಆ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಪ್ರಸ್ತುತ ಚಿಕಿತ್ಸೆ ಪಡೆಯುತ್ತಿರುವ H.I.V. ಮತ್ತು ಏಡ್ಸ್ ಪೀಡಿತರ ಸಂಖ್ಯೆ ಎಷ್ಟು ; (ವಾರ್ಷಿಕವಾರು ವಿವರ ನೀಡುವುದು)

(ಇ) ೨೦೧೩–೧೪ನೇ ಸಾಲಿನಲ್ಲಿ ಮೃತಪಟ್ಟಿರುವ ರೋಗಿಗಳ ಸಂಖ್ಯೆ ಎಷ್ಟು ; ತೆಗೆದುಕೊಳ್ಳುತ್ತಿರುವ ಚಿಕಿತ್ಸೆಯನ್ನು ನಿಲ್ಲಿಸಿರುವವರ ಸಂಖ್ಯೆ ಎಷ್ಟು ? (ವಾರ್ಷಿಕವಾರು ವಿವರ ನೀಡುವುದು)

## ಜಪ್ತಿ ಮಾಡಲಾದ ತೊಗರಿ ಬೇಳೆಯನ್ನು ಅನ್ನಭಾಗ್ಯ ಯೋಜನೆಯಲ್ಲಿ ವಿತರಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೬೭ (೩೨೦೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೊಗರಿಬೇಳೆಯ ಬೆಲೆ ದುಬಾರಿಯಾಗಿರುವ ಹಿನ್ನೆಲೆಯಲ್ಲಿ ಜಪ್ತಿ ಮಾಡಿದ ತೊಗರಿಬೇಳೆಯ ದಾಸ್ತಾನವನ್ನು ಅನ್ನಭಾಗ್ಯ ಯೋಜನೆಯ ಬಿ.ಪಿ.ಎಲ್. ಕಾರ್ಡುದಾರರಿಗೆ ಕಡಿಮೆ ದರದಲ್ಲಿ ನೀಡಲು ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ ;

(ಆ) ಇಲ್ಲವಾದಲ್ಲಿ, ಸರ್ಕಾರವು ಸಂಬಂಧಪಟ್ಟ ಜಪ್ತಿ ಮಾಡಿದ ಇಲಾಖೆಯು ಜೊತೆ ಚರ್ಚಿಸಿ, ಕ್ರಮ ಕೈಗೊಳ್ಳಲು ಮುಂದಾಗುವುದೇ ;

(ಇ) ಇಲ್ಲವಾದಲ್ಲಿ, ಕಾರಣವೇನು ; ಅಗತ್ಯ ಕ್ರಮ ಕೈಗೊಳ್ಳಲು ಇರುವ ಅಡೆ–ತಡೆಗಳೇನು ?

## ನಕಲಿ ವೈದ್ಯರ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೬೮ (೩೧೯೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಕಲಿ ವೈದ್ಯರು ಸಿಕ್ಕಿಬಿದ್ದು ಆರೋಪ ಸಾಬೀತಾದರೆ, ಅಂತಹವರಿಗೆ ದಂಡ ಮತ್ತು ಶಿಕ್ಷೆ ವಿಧಿಸಲು ಇರುವ ಮಾನದಂಡಗಳೇನು ;

(ಆ) ಕಾನೂನಿನಡಿ ಕೇವಲ ೧೦೦ ರೂ. ದಂಡ ವಿಧಿಸಲು ಅವಕಾಶವಿರುವುದು ನಿಜವೇ ;

(ಇ) ದಂಡವನ್ನು ಹೆಚ್ಚಿಸುವ ವಿಷಯದಲ್ಲಿ ಇಲಾಖೆಯಿಂದ ಯಾವಾಗ ಮತ್ತು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; ಕೈಗೊಂಡ ಕ್ರಮಕ್ಕೆ ಬಂದಿರುವ ಪ್ರತಿಕ್ರಿಯೆ ಏನು ?

## ಅನ್ನಭಾಗ್ಯ ಯೋಜನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೫೬೯ (೩೨೦೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಗ್ರಾಹಕರಿಗೆ ನೀಡುತ್ತಿರುವ ಉಪ್ಪು ಕಳಪೆ ಗುಣಮಟ್ಟದಾಗಿದ್ದು, ಹುಳುಗಳು ಇರುವುದು ಹಾಗೂ ನೀರಿನಲ್ಲಿ ಕರಗದಷ್ಟು ಗಟ್ಟಿಯಾಗಿರುವುದೆನ್ನುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಏನು ಕ್ರಮ ಕೈಗೊಳ್ಳಲಾಗಿದೆ, ಉಪ್ಪನ್ನು ಸರಬರಾಜು ಮಾಡಿದ ಕಂಪನಿಯು ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ;

(ಇ) ಸದರಿ ಉಪ್ಪಿನ ಖರೀದಿಯಲ್ಲಿ ಯಾವ ರೀತಿಯ ಕ್ರಮ ಅನುಸರಿಸಲಾಗಿದೆ ? (ವಿವರ ನೀಡುವುದು)

## ಆರೋಗ್ಯ ಇಲಾಖೆಯಲ್ಲಿ ವೈದ್ಯರ ಕೊರತೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೦ (೩೨೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ತಾಲ್ಲೂಕು ಆಸ್ಪತ್ರೆಗಳ ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಾಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು ;

(ಇ) ಇಂತಹ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಈ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

## ಎಸ್.ಸಿ. ಮತ್ತು ಎಸ್.ಟಿ. ವರ್ಗಗಳ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೧ (೩೨೦೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ವರ್ಗಗಳ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು, ಆ ಕಾರ್ಯಕ್ರಮದಿಂದ ಫಲಾನುಭವಿಗಳು ಯಾವ ರೀತಿ ಪ್ರಯೋಜನ ಪಡೆಯಬಹುದು ;

(ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪರಿಶಿಷ್ಠ ವರ್ಗಗಳ ಕಾಲೋನಿಗಳಲ್ಲಿ ಈವರೆಗೆ ಎಷ್ಟು ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಮೂಡಿಗೆರೆ ತಾಲ್ಲೂಕಿನಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಸ್ಥಳ ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಭವನ ನಿರ್ಮಾಣ ಮಾಡಲು ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಯಾವಾಗ ನಿರ್ಮಾಣ ಮಾಡಲಾಯಿತು ?

## ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೨ (೩೨೦೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಮಹಿಳೆಯರ ಮೇಲಿನ ದೌರ್ಜನ್ಯ ತಡೆ ಮತ್ತು ಅವರುಗಳ ಶ್ರೇಯೋಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಆ) ಸರ್ಕಾರಿ ಕಛೇರಿ ಮತ್ತು ಖಾಸಗಿ ಕಂಪನಿಗಳಲ್ಲಿ ಕೆಲಸ ಮಾಡುವ ಮಹಿಳೆಯರು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಶೋಷಣೆಗೆ ಒಳಗಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಹಾಗಿದ್ದರೆ, ಕಳೆದ ೧ ವರ್ಷದಿಂದ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿದೆ ; ಇಂತಹ ಪ್ರಕರಣಗಳಲ್ಲಿ ಭಾಗಿಯಾದ ಎಷ್ಟು ಜನರ ವಿರುದ್ಧ ಕ್ರಮ ಜರುಗಿಸಿದೆ ;

(ಈ) ೧೦ ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುವ ಕಛೇರಿ ಮತ್ತು ಕಂಪನಿಗಳಲ್ಲಿ ಮಹಿಳಾ ಲೈಂಗಿಕ ದೌರ್ಜನ್ಯ ತಡೆ ಸಮಿತಿ ರಚಿಸುವ ಕಾಯ್ದೆಯನ್ನು ಸರ್ಕಾರ ಜಾರಿಗೊಳಿಸಿದೆಯೇ ;

(ಉ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಈ ಸಮಿತಿ ರಚನೆಯಾಗಿದೆ ; ರಚನೆಯಾಗದ ಸ್ಥಳಗಳಲ್ಲಿ ಈ ಬಗ್ಗೆ ಅರಿವು ಮೂಡಿಸಲು ಸರ್ಕಾರ ಯಾವ ರೀತಿ ಕ್ರಮ ಜರುಗಿಸಲಿದೆ ;

(ಊ) ಇತ್ತೀಚಿನ ದಿನಗಳಲ್ಲಿ ನಡೆಯುತ್ತಿರುವ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿನ ಚಿಕಿತ್ಸಾ ಸೌಕರ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೩ (೩೨೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಿಗೆ ಕಳೆದ ಎರಡು ವರ್ಷಗಳಿಂದ ಒದಗಿಸಿರುವ ರೋಗ ಪತ್ತೆ ಚಿಕಿತ್ಸಾ ಸಲಕರಣೆಯು ಉಪಕರಣಗಳಾವುವು ;

(ಆ) ಯಾವ ಯಾವ ಆಸ್ಪತ್ರೆಗಳಿಗೆ ಈ ಉಪಕರಣಗಳನ್ನು ಒದಗಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಉಪಕರಣಗಳನ್ನು ಖರೀದಿ ಮಾಡಲು ವೆಚ್ಚ ಮಾಡಿರುವ ಹಣವೆಷ್ಟು ;

(ಈ) ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಡೆಂಗ್ಯೂ ಹಾಗೂ ಇತರೆ ಸಾಂಕ್ರಾಮಿಕ ಖಾಯಿಲೆಗಳ ಪತ್ತೆ ಮಾಡುವ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದರೆ, ಮಾರಕವಾಗಿ ಹರಡುತ್ತಿರುವ ಡೆಂಗ್ಯೂ ಜ್ವರವನ್ನು ನಿಯಂತ್ರದಲ್ಲಿಡಲು ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಯ ಅನುಕೂಲವನ್ನು ಪೂರ್ಣವಾಗಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಆಟೋಗಳಿಗೆ ಡಿಜಿಟಲ್ ಮೀಟರ್ ಅಳವಡಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೪ (೩೨೦೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಒಟ್ಟು ಆಟೋಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಡಿಜಿಟಲ್ ಮೀಟರ್ ಅಳವಡಿಸಿಕೊಂಡಿರುವ ಆಟೋಗಳ ಸಂಖ್ಯೆ ಎಷ್ಟು ; ಮೀಟರ್ ಅಳವಡಿಸಿಕೊಳ್ಳದೆ ಇರುವ ಆಟೋಗಳ ಸಂಖ್ಯೆ ಎಷ್ಟು ; ಮೀಟರ್ ಅಳವಡಿಸಿಕೊಳ್ಳಲು ನೀಡಿದ್ದ ಕಾಲಮಿತಿ ಏನು ;

(ಆ) ಬೆಂಗಳೂರು ನಗರದಲ್ಲಿ ಕಾಲಮಿತಿ ಮುಗಿದಿದ್ದರೂ ಕೆಲ ಆಟೋಗಳಿಗೆ ಡಿಜಿಟಲ್ ಮೀಟರ್‌ಗಳಿಲ್ಲದಿರುವುದು ಸರ್ಕಾರ ಗಮನಿಸಿದೆಯೇ ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ರೀತಿಯ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದು ?

## ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೫ (೩೨೧೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ವೈದ್ಯಕೀಯ ಕಾಲೇಜುಗಳೆಷ್ಟು ; ಆ ಪೈಕಿ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ರಾಜ್ಯದ ವಿದ್ಯಾರ್ಥಿಗಳೆಷ್ಟು ; ಹೊರ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಯಲ್ಲಿ ಈ ಕಾಲೇಜುಗಳು ಪ್ರಾರಂಭವಾಗಲಿದೆ ?

## ಪಡಿತರ ಚೀಟಿ ವಿತರಣೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೬ (೩೨೧೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈವರೆಗೆ ವಿತರಿಸಲಾದ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಆ) ಬಿ.ಪಿ.ಎಲ್ ಕಾರ್ಡುದಾರರಿಗೆ ಪಡಿತರ ವಿತರಿಸದೆ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಪ್ರಕರಣಗಳು ಹೆಚ್ಚಾಗಲು ಕಾರಣಗಳೇನು; ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಂಘ ಸಂಸ್ಥೆಗಳಿಗೆ ಅನುದಾನ

**ಶ್ರೀ ನಾರಾಯಣ ಸಾ ಬಾಂಡಗೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೫೭೭ (೩೧೯೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಬೇರೆ ಬೇರೆ ಸಂಘಸಂಸ್ಥೆಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಅನುದಾನದ ವಿತರಣೆಯಲ್ಲಿ ಅನುಸರಿಸಿದ ಮಾನದಂಡಗಳೇನು ;

(ಇ) ಬಾಗಲಕೋಟೆ, ಗದಗ, ವಿಜಯಪುರ ಜಿಲ್ಲೆಗೆ ಯಾವ ಯಾವ ಜನಪದ ಕಲೆಗಳಿಗೆ ಹೆಚ್ಚಿನ ಅನುದಾನವನ್ನು ನೀಡಲಾಗಿದೆ ? (ಮಾಹಿತಿ ನೀಡುವುದು)

## ಬಾಗಲಕೋಟೆಯ ನ್ಯಾಯಬೆಲೆ ಅಂಗಡಿಗಳು

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭೮ (೩೯೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ, ಗದಗ, ವಿಜಯಪುರ ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ೨ ವರ್ಷಗಳಿಂದ ನ್ಯಾಯಬೆಲೆ ಅಂಗಡಿಗಳನ್ನು ಪ್ರಾರಂಭ ಮಾಡಲು ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಆ ಪೈಕಿ ಅನುಮತಿ ನೀಡಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) + ಶ್ರೀ ನಾರಾಯಣ ಸಾ.ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೭೯ (೩೯೫+೩೯೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಮಂಜೂರಾಗಿರುವ ಅಂಗನವಾಡಿ ಕೇಂದ್ರ ಸಂಖ್ಯೆಗಳು ಎಷ್ಟು ;

(ಆ) ಇದರಲ್ಲಿ ಉರ್ದು ಅಂಗನವಾಡಿ ಕೇಂದ್ರಗಳ ಸಂಖ್ಯೆಗಳು ಎಷ್ಟು ;

(ಇ) ದಾವಣಗೆರೆ ಜಿಲ್ಲೆ ಹಾಗೂ ಚಿತ್ರದುರ್ಗ ಜಿಲ್ಲೆಗಳಿಗೆ ಉರ್ದು ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭ ಮಾಡಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು ;

(ಈ) ಇವುಗಳಲ್ಲಿ ಎಷ್ಟು ಉರ್ದು ಅಂಗನವಾಡಿ ಕೇಂದ್ರಗಳಿಗೆ ಅನುಮತಿಯನ್ನು ನೀಡಿದ್ದು, ಉಳಿದ ಅಂಗನವಾಡಿ ಕೇಂದ್ರಗಳಿಗೆ ಯಾವ ಮಾನದಂಡದಲ್ಲಿ ಅನುಮತಿಯನ್ನು ನೀಡಲಾಗುವುದು ; (ಮಾಹಿತಿ ನೀಡುವುದು)

(ಉ) ಕಳೆದ ೩ ವರ್ಷಗಳಿಂದ ಬಾಗಲಕೋಟೆ, ಗದಗ, ಧಾರವಾಡ ಜಿಲ್ಲೆಗೆ ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಊ) ಮೇಲ್ಕಂಡ ಜಿಲ್ಲೆಗಳಿಗೆ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭ ಮಾಡಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ಅನುಮತಿಯನ್ನು ನೀಡಲಾಗಿದೆ ; ಉಳಿದ ಅಂಗನವಾಡಿ ಕೇಂದ್ರಗಳಿಗೆ ಯಾವ ಸಮಯದಲ್ಲಿ ಅನುಮತಿಯನ್ನು ನೀಡಲಾಗುವುದು ? (ಮಾಹಿತಿ ನೀಡುವುದು)

## ಆಸ್ಪತ್ರೆಯ ಕಟ್ಟಡ ಶಿಥಿಲಾವಸ್ಥೆಯಲ್ಲಿರುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೨೫೮೦ (೩೧೯೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಾವಣಗೆರೆ ನಗರದಲ್ಲಿರುವ ಸರ್ಕಾರಿ ಚಿಗಟೇರಿ ಜನರಲ್ ಆಸ್ಪತ್ರೆಯ ಕಟ್ಟಡ ತುಂಬಾ ಹಳೆಯದಾಗಿದ್ದು, ಶಿಥಿಲಾವಸ್ಥೆಯಲ್ಲಿರುವುದರಿಂದ ರೋಗಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಬಂದಿದ್ದರೆ, ಯಾವ ಹಂತದಲ್ಲಿ ಇದೆ ;

(ಇ) ಈ ಆಸ್ಪತ್ರೆಗೆ ದಿನ ನಿತ್ಯ ಸಾವಿರಾರು ರೋಗಿಗಳು ಬಂದು ಹೋಗುವುದರಿಂದ ಇಲ್ಲಿ ಸ್ವಚ್ಛತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೨೫೮೧(ಇ೧೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಾವಣಗೆರೆ ಜಿಲ್ಲೆಯ ತಾಲ್ಲೂಕಿನ ಹಳೆ ದಾವಣಗೆರೆ ನಗರದಲ್ಲಿ ಈಗಾಗಲೇ ಹೆರಿಗೆ ಆಸ್ಪತ್ರೆ ಇದ್ದು, ಇಲ್ಲಿ ವೈದ್ಯರು, ನರ್ಸ್, ಆಯಾ ಹಾಗೂ ಸಿಬ್ಬಂದಿಗಳ ಕೊರತೆ ಮತ್ತು ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ೧೦೦ ಹಾಸಿಗೆಯ ಸುಸಜ್ಜಿತವಾದ ಆಸ್ಪತ್ರೆಯನ್ನಾಗಿ ಪರಿವರ್ತಿಸುವ ಪ್ರಸ್ತಾಪ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಯಾವ ಹಂತದಲ್ಲಿ ಇದೆ ;

(ಈ) ಈ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು? (ಹುದ್ದೆವಾರು ಮಾಹಿತಿ ನೀಡುವುದು)

## ಕಲಾವಿದರು ಮತ್ತು ಕಲಾಸಂಸ್ಥೆಗಳಿಗೆ ಪ್ರೋತ್ಸಾಹ ನೀಡಲು ರೂಪಿಸಿರುವ ಯೋಜನೆಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮೨ (೩೧೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಭಾಗದಲ್ಲಿರುವ ಕಲಾವಿದರು ಮತ್ತು ಕಲಾ ಸಂಸ್ಥೆಗಳ ಸಂಖ್ಯೆ ಎಷ್ಟು ;

(ಆ) ಈ ಭಾಗದಲ್ಲಿನ ಕಲಾವಿದರ ಪ್ರೋತ್ಸಾಹಕ್ಕಾಗಿ ಇಲಾಖೆಯವರು ರೂಪಿಸಿದ ಯೊಜನೆಗಳಾವುವು ;

(ಇ) ಈ ಭಾಗದ ಕಲಾವಿದರ, ಕಲಾ ಸಂಘಗಳ ಪ್ರೋತ್ಸಾಹಕ್ಕೆ ಪ್ರತ್ಯೇಕ ಅನುದಾನವನ್ನೇನಾದರೂ ಮೀಸಲಿರಿಸಲಾಗಿದೆಯೇ ; ಇದ್ದಲ್ಲಿ, ಅನುದಾನದ ಪ್ರಮಾಣ ಎಷ್ಟು ;

(ಈ) ೨೦೧೩–೧೪ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೂ ಕಲಾವಿದರಿಗೆ/ ಕಲಾ ಸಂಸ್ಥೆಗಳಿಗೆ ಹಂಚಿಕೆ ಮಾಡಲಾದ ಅನುದಾನದ ವಿವರಗಳನ್ನು ನೀಡುವುದು ?

## ಸಮಾಜ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳಿಗೆ ಬಂದಿರುವ ಅರ್ಜಿಗಳ ಮಾಹಿತಿ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮೩ (೩೧೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯಲ್ಲಿ ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ಡಿ. ದೇವರಾಜ್ ಅರಸು ಅಭಿವೃದ್ಧಿ ನಿಗಮ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳಲ್ಲಿ ಸ್ವೀಕೃತವಾದ ಅನುದಾನದ ಪ್ರಮಾಣ ಎಷ್ಟು;

(ಆ) ಸದರಿ ನಿಗಮಗಳಲ್ಲಿ ಎಲ್ಲಾ ಬಗೆಯ ಸಾಲ ಹಾಗೂ ಗಂಗಾ ಕಲ್ಯಾಣಕ್ಕಾಗಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು;

(ಇ) ಅವುಗಳಲ್ಲಿ ಮಂಜೂರಾದ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತ ಅರ್ಜಿಗಳ ಸಂಖ್ಯೆ ಎಷ್ಟು;

(ಈ) ಪ್ರತಿ ನಿಗಮುಗಳಿಗೂ ನಿಗಧಿಪಡಿಸಲಾದ ಗುರಿ ಮತ್ತು ಸಾಧನೆಗಳೇನು ; (ವಿವರ ನೀಡುವುದು)

(ಉ) ಎಲ್ಲಾ ನಿಗಮಗಳಲ್ಲಿ ಸದ್ಯ ನೀಡಿರುವ ಗುರಿಯನ್ನು ವಿಸ್ತರಿಸಿರುವ ವಿಚಾರ ಸರಕಾರದ ಮುಂದಿದೆಯೇ ?

## ಕೊಪ್ಪಳ ಜಿಲ್ಲೆಯಲ್ಲಿ ನಿರ್ಮಾಣ ಮಾಡುತ್ತಿರುವ ಬಸ್ ನಿಲ್ದಾಣ ಕಾಮಗಾರಿಯ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮೪ (ಇ೧೮೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯಲ್ಲಿ ಹೊಸದಾಗಿ ನಿರ್ಮಾಣವಾಗುತ್ತಿರುವ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಪ್ರತಿ ಬಸ್ ನಿಲ್ದಾಣಕ್ಕಾಗಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು;

(ಇ) ಬಸ್ ನಿಲ್ದಾಣಗಳ ನಿರ್ಮಾಣವನ್ನು ಯಾವ ಕಂಪನಿ ಗುತ್ತಿಗೆ ಪಡೆದುಕೊಂಡಿದೆ ;

(ಈ) ಸದರಿ ನಿಲ್ದಾಣಗಳ ಕಾಮಗಾರಿ ಪ್ರಾರಂಭದ ದಿನಾಂಕವೇನು ; ಗುತ್ತಿಗೆದಾರರಿಗೆ ಕಾಮಗಾರಿಯನ್ನು ಮುಕ್ತಾಯಗೊಳಿಸಲು ನಿಗಧಿಪಡಿಸಲಾಗಿದ್ದ ದಿನಾಂಕ ಯಾವುದು ?

## ವಿಕಲಚೇತನರ ಕಲ್ಯಾಣಕ್ಕಾಗಿ ಕೈಗೊಂಡ ಕ್ರಮಗಳ ಕುರಿತು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೮೫ (೩೧೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ಕೈಗೊಂಡ ಕ್ರಮಗಳೇನು ;

(ಆ) ೨೦೧೩–೧೪ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೂ ತ್ರಿಚಕ್ರ ವಾಹನ ಕೋರಿ ಎಷ್ಟು ಅಂಗವಿಕಲರಿಂದ ಅರ್ಜಿಗಳು ಸ್ವೀಕೃತವಾಗಿವೆ ;

(ಇ) ಇವುಗಳಲ್ಲಿ ತ್ರಿಚಕ್ರ ವಾಹನಗಳನ್ನು ಎಷ್ಟು ಅಂಗವಿಕಲರಿಗೆ ವಿತರಿಸಲಾಗಿದೆ ; ಬಾಕಿ ಉಳಿದ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಅರ್ಜಿಗಳು ವಿಲೇವಾರಿಯಾಗದೇ ಇರುವುದಕ್ಕೆ ಕಾರಣಗಳೇನು ;

(ಈ) ಜಿಲ್ಲೆಯಲ್ಲಿರುವ ಒಟ್ಟು ವಿಕಲಚೇತನರ ಸಂಖ್ಯೆಯನ್ನು ಕ್ರೂಢೀಕರಿಸಲಾಗಿದೆಯೇ ; ಇದ್ದಲ್ಲಿ, ತಾಲ್ಲೂಕುವಾರು ವಿವರ ನೀಡುವುದು ?

## ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೮೬ (೩೦೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ಎಷ್ಟು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಘಟಕಗಳಿವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಡಯಾಲಿಸಿಸ್ ಘಟಕಗಳಲ್ಲಿ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತಿವೆ ; ಕಾರ್ಯನಿರ್ವಹಿಸದಿರುವ ಘಟಕಗಳೆಷ್ಟು ; ಇದಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆಗೆ ಹೆಚ್ಚಿನ ಒತ್ತಡವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ;

(ಈ) ಹಾಗಿದ್ದಲ್ಲಿ, ಪ್ರತಿ ತಾಲ್ಲೂಕಿನ ಕನಿಷ್ಠ ಎರಡು–ಮೂರು ಡಯಾಲಿಸಿಸ್ ಘಟಕಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ತಾಲ್ಲೂಕುವಾರು ವಿವರ ನೀಡುವುದು)

## ಖಾಸಗಿ ಆಸ್ಪತ್ರೆಗಳಿಂದ ಶೋಷಣೆ ನಡೆಯುತ್ತಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೮೭ (೩೦೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಖಾಸಗಿ ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳ ಸಂಖ್ಯೆ ಎಷ್ಟು; ಅವು ಯಾವುವು; ಇವುಗಳ ಹೆಸರು, ವಿಳಾಸ ಮತ್ತು ಮುಖ್ಯಸ್ಥರ ಹೆಸರು ಮತ್ತು ದೂರವಾಣಿ ಮತ್ತು ಮೊಬೈಲ್ ಸಂಖ್ಯೆ ಮಾಹಿತಿಯನ್ನು ನೀಡುವುದು ;

(ಆ) ಈ ಖಾಸಗಿ ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳಲ್ಲಿ ಚಿಕಿತ್ಸೆಗಾಗಿ ಸೇರ್ಪಡೆಯಾಗುವ ರೋಗಿಗಳಿಂದ ನಿಯಮಗಳನ್ನು ಮೀರಿ ಮನಬಂದಂತೆ ಹಣವನ್ನು ವಸೂಲು ಮಾಡುವ ಮೂಲಕ ಶೋಷಣೆ ಮಾಡುತ್ತಿರುವುದು ಗಮನದಲ್ಲಿದ್ದರೂ ಇಲಾಖಾಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೇ ಇರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಕಳೆದ ಒಂದು ವರ್ಷದ ಅವಧಿಯಲ್ಲಿ ಇಲಾಖಾಧಿಕಾರಿಗಳು ನಗರ ಜಿಲ್ಲೆಯ ಎಷ್ಟು ಖಾಸಗಿ ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ ; ಎಷ್ಟು ಲೋಪಗಳನ್ನು ಪತ್ತೆ ಮಾಡಿದ್ದಾರೆ; (ಭೇಟಿ ನೀಡಿರುವ ಆಸ್ಪತ್ರೆಗಳ ಪಟ್ಟಿಯನ್ನು ಒದಗಿಸುವುದು)

(ಈ) ನಗರದ ಖಾಸಗಿ ಆಸ್ಪತ್ರೆಗಳು ಮತ್ತು ನರ್ಸಿಂಗ್ ಹೋಂಗಳಲ್ಲಿ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸಲು ಸರ್ಕಾರದ ಮುಂದಿರುವ ಕ್ರಮಗಳೇನು ;

(ಉ) ಇದಕ್ಕಾಗಿ ಅಸ್ತಿತ್ವದಲ್ಲಿರುವ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಯು ಕಳೆದ ಎರಡು ವರ್ಷಗಳ ಅವಧಿಯಲ್ಲಿ ಎಷ್ಟು ಸಭೆಗಳನ್ನು ನಡೆಸಿದೆ ; ಯಾವ ಯಾವ ಖಾಸಗಿ ಆಸ್ಪತ್ರೆಗಳಿಗೆ ಭೇಟಿ ನೀಡಿದೆ ? (ಪೂರ್ಣ ವಿವರಗಳನ್ನು ಒದಗಿಸುವುದು)

## ಜನರಿಕ್ ಔಷಧಿಗಳ ಮಳಿಗೆ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೮೮ (೩೦೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಸ್ಥಳಗಳಲ್ಲಿ ಬಡವರಿಗೆ ಅನುಕೂಲ ಮಾಡಿಕೊಡುವ ಸಲುವಾಗಿ ಜನರಿಕ್ ಔಷಧಿ ಮಳಿಗೆಗಳನ್ನು ತೆರೆಯುವುದಾಗಿ ಈ ಹಿಂದಿನ ವರ್ಷಗಳಲ್ಲಿ ಸರ್ಕಾರ ಘೋಷಣೆ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆವಿಗೆ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಎಷ್ಟು ಔಷಧಿ ಮಳಿಗೆಗಳನ್ನು ತೆರೆಯಲಾಗಿದೆ ; (ಮಳಿಗೆಗಳ ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಇಲ್ಲಿಯವರೆವಿಗೂ ತೆರೆಯದೇ ಇದ್ದಲ್ಲಿ ಕಾರಣಗಳೇನು ; ಈ ಮಳಿಗೆಗಳನ್ನು ತೆರೆಯಲಾಗುವುದು ಯಾವಾಗ ;

(ಈ) ಈ ಯೋಜನೆಯ ಅನುಷ್ಠಾನಕ್ಕಾಗಿ ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆವಿಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ? (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿ ತಂಬಾಕು ನಿಷೇಧಿಸುವ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೨೫೮೯ (೩೦೭೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಾರಾಷ್ಟ್ರ ಮಾದರಿಯಲ್ಲಿ ಜಗಿಯುವ ತಂಬಾಕು, ಬೀಡಿ, ಸಿಗರೇಟು ಮಾರಾಟ ನಿಷೇಧಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಇದನ್ನು ನಮ್ಮ ರಾಜ್ಯದಲ್ಲಿ ಜಾರಿಗೆ ತರಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಆ) ರಾಜ್ಯದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಈ ವಸ್ತುಗಳನ್ನು ಸಂಪೂರ್ಣವಾಗಿ ನಿಷೇಧ ಮಾಡುವುದರಿಂದ ಸಾರ್ವಜನಿಕ ಆರೋಗ್ಯ ಸುಧಾರಣೆ ಆಗುವುದಿಲ್ಲವೇ ; ಈ ನಿಟ್ಟಿನಲ್ಲಿ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದೆ ;

(ಇ) ಉತ್ತರ ಕರ್ನಾಟಕ ಜನತೆಯು ಅಧಿಕವಾಗಿ ಬಾಯಲ್ಲಿ ಜಗಿಯುವ ತಂಬಾಕು ವಸ್ತುಗಳನ್ನು ತಿಂದು ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಗೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಂತಹ ತಂಬಾಕು, ಬೀಡಿ, ಸಿಗರೇಟು ಹಾಗೂ ಜಗಿಯುವ ಪದಾರ್ಥಗಳಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು ;

(ಉ) ಜನರ ಆರೋಗ್ಯಕ್ಕೆ ಸರ್ಕಾರ ವಾರ್ಷಿಕವಾಗಿ ಖರ್ಚು ಮಾಡುವ ಹಣ ಎಷ್ಟು ;

(ಊ) ಈ ಯೋಜನೆ ಅನುಷ್ಠಾನಕ್ಕಾಗಿ ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ? (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

## ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉದ್ಯೋಗವಕಾಶ ಕಲ್ಪಿಸುವ ಕುರಿತು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೫೯೦ (೩೦೭೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ರಾಜ್ಯದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉದ್ಯೋಗವಕಾಶಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಉದ್ಯೋಗವಕಾಶಗಳನ್ನು ಸೃಷ್ಠಿಸಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉದ್ಯೋಗ ಒದಗಿಸಿಕೊಡಲು ಅನುಸರಿಸುವ ಮಾನದಂಡಗಳೇನು ;

(ಇ) ಹಾಗಾದರೆ, ಗ್ರಾಮೀಣ ಭಾಗದಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸಲು ಸರ್ಕಾರದ ಯೋಜನೆಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೫೯೧ (೩೦೭೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ನ್ಯಾಯಬೆಲೆ ಅಂಗಡಿಗಳಿವೆ ; ಸೀಮೆ ಎಣ್ಣೆ ಪರವಾನಗಿ ಅಂಗಡಿಗಳೆಷ್ಟು ; (ವಿವರ ಒದಗಿಸುವುದು)

(ಆ) ಈ ನ್ಯಾಯಬೆಲೆ ಅಂಗಡಿಗಳು ಹೊಂದಿರುವ ಪಡಿತರ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಮಾಹಿತಿಯನ್ನು ಒದಗಿಸುವುದು)

(ಇ) ಜಿಲ್ಲೆಯಲ್ಲಿ ಯಾವುದಾದರೂ ನ್ಯಾಯಬೆಲೆ ಅಂಗಡಿಗಳನ್ನು ರದ್ದುಪಡಿಸಲಾಗಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣವೇನು ? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೫೯೨ (೨೮೭೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಇರುವ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಈ ವಿದ್ಯಾರ್ಥಿ ನಿಲಯಗಳಲ್ಲಿ ಅಧ್ಯಯನ ಮಾಡುತ್ತಿರುವ ವಿಧ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಇ) ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಈ) ಇಂತಹ ವಿದ್ಯಾರ್ಥಿನಿಲಯಗಳಿಗೆ ಕಳೆದ ೩ ವರ್ಷಗಳಿಂದ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ? (ವಿವರ ಒದಗಿಸುವುದು)

## ಗಂಗಾ ಕಲ್ಯಾಣ ಯೋಜನೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೫೯೩ (೨೮೭೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕಲಬುರಗಿ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಬಿಡುಗಡೆಯಾಗಿರುವ ಅನುದಾನದಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ; (ವಿವರ ಒದಗಿಸುವುದು)

(ಇ) ಕೊರೆಯದೆ ಬಾಕಿ ಉಳಿದುಕೊಂಡಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; ಇದಕ್ಕೆ ಸೂಕ್ತ ಕಾರಣ ತಿಳಿಸುವುದು ;

(ಈ) ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೯೪ (೨೮೫೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳೆಷ್ಟು; ಈ ಕಾಲೇಜುಗಳಿಂದ ದೊರಕುವ ಸೀಟುಗಳ ಸಂಖ್ಯೆ ಎಷ್ಟು; ಅದೇ ರೀತಿ ಚಾಮರಾಜನಗರ ಮತ್ತು ಮಡಿಕೇರಿ ವೈದ್ಯಕೀಯ ಕಾಲೇಜುಗಳಿಂದ ದೊರಕುವ ಸೀಟುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷದಲ್ಲಿ ಹೊಸದಾಗಿ ತೆರೆದ ವೈದ್ಯಕೀಯ ಕಾಲೇಜುಗಳು ಯಾವುವು ; ಮತ್ತೆ ಸರ್ಕಾರದ ವತಿಯಿಂದ ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಬೇಡಿಕೆಯ ಪ್ರಸ್ತಾವನೆ ಇದೆಯೇ ; ಹಾಗಿದ್ದಲ್ಲಿ, ಆ ಕಾಲೇಜುಗಳನ್ನು ಯಾವ ಜಿಲ್ಲೆಯಲ್ಲಿ ತೆರೆಯಲಾಗುವುದು ; (ವಿವರ ನೀಡುವುದು)

(ಇ) ಚಾಮರಾಜನಗರ ಮತ್ತು ಮಡಿಕೇರಿಯಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ಕಾಲೇಜನ್ನು ಪ್ರಾರಂಭಿಸಲಾಗುವುದು, ಈ ಕಾಲೇಜುಗಳ ಕಾಮಗಾರಿಯು ಪೂರ್ಣಗೊಂಡಿದೆಯೇ ಹಾಗೂ ಎಲ್ಲಾ ರೀತಿಯ ಮೂಲಭೂತ ಸೌಲಭ್ಯವನ್ನು ಒದಗಿಸಲಾಗಿದೆಯೇ ? (ವಿವರ ನೀಡುವುದು)

## ಕೊಳವೆ ಮಾರ್ಗದ ಮೂಲಕ ನೈಸರ್ಗಿಕ ಅನಿಲ ಪೂರೈಕೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೫೫ (೨೮೭೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮಹಾನಗರಗಳಲ್ಲಿ ವಾಸ ಮಾಡುವ ಕುಟುಂಬಗಳಿಗೆ ಕೊಳವೆ ಮಾರ್ಗದ ಮೂಲಕ ನೈಸರ್ಗಿಕ ಅನಿಲ ಪೂರೈಸುವ ಕಾರ್ಯ ಯಾವಾಗಿನಿಂದ ಪ್ರಾರಂಭ ಮಾಡಲಾಗುವುದು ;

(ಆ) ಹಾಗಿದ್ದಲ್ಲಿ, ಮೊದಲನೆಯದಾಗಿ ಯಾವ ಯಾವ ಮಹಾನಗರಗಳನ್ನು ಈ ವ್ಯವಸ್ಥೆಗೆ ಆಯ್ಕೆ ಮಾಡಿಕೊಳ್ಳಲಾಗುವುದು ;

(ಇ) ಮಹಾರಾಷ್ಟ್ರದ ದಾಭೋಲ್‌ನಿಂದ ಬೆಂಗಳೂರು ಕೇಂದ್ರಕ್ಕೆ ಕೊಳವೆ ಮಾರ್ಗದಲ್ಲಿ ಬರುವ ನೈಸರ್ಗಿಕ ಅನಿಲವನ್ನು ಈ ಮಾರ್ಗದುದ್ದಕ್ಕೂ ಬರುವ ನಗರ /ಪುರಸಭೆ/ಪಟ್ಟಣ/ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ವಾಸ ಮಾಡುತ್ತಿರುವ ಕುಟುಂಬಗಳಿಗೂ ಸಂಪರ್ಕವನ್ನು ಕಲ್ಪಿಸಿ ಕೊಡಲಾಗುವುದೇ ; ಹಾಗಾದರೆ, ಆ ನಗರ ಪ್ರದೇಶಗಳಾವುವು ; (ವಿವರ ನೀಡುವುದು)

(ಈ) ಮುಂದಿನ ದಿನಗಳಲ್ಲಿ ಮೈಸೂರು ನಗರಕ್ಕೆ ನೈಸರ್ಗಿಕ ಅನಿಲವನ್ನು ಕೊಳವೆ ಮಾರ್ಗದ ಮೂಲಕ ಸಂಪರ್ಕ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಉ) ಮೈಸೂರು ನಗರದಲ್ಲಿ ವಾಹನಗಳಿಗೆ ಬಳಸುವ ನೈಸರ್ಗಿಕ ಅನಿಲ ಪೂರೈಸುವ ಎಷ್ಟು ಬಂಕ್‌ಗಳಿವೆ ; ಇವುಗಳಿಂದ ಎಷ್ಟು ಪ್ರಮಾಣದ ನೈಸರ್ಗಿಕ ಅನಿಲ ಖರ್ಚಾಗುತ್ತಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಅಕ್ರಮ ದಾಸ್ತಾನು ಬೇಳೆ ಕಾಳುಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೯೬ (೨೯೮೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನಧಿಕೃತವಾಗಿ ಸಂಗ್ರಹಿಸಲಾಗಿದ್ದ ಯಾವ ಯಾವ ಬೇಳೆ ಕಾಳುಗಳನ್ನು ಎಲ್ಲೆಲ್ಲಿ ಎಷ್ಟು ಮೌಲ್ಯದ ಅಕ್ರಮ ದಾಸ್ತಾನುಗಳನ್ನು ವಶಪಡಿಸಲಾಗಿದೆ ; (ಜಿಲ್ಲಾವಾರು, ಗೋದಾಮುವಾರು ಮಾಹಿತಿ ಒದಗಿಸುವುದು)

(ಆ) ಈ ಅಕ್ರಮ ದಾಸ್ತಾನು ಬೇಳೆ ಕಾಳುಗಳು ಯಾರ ಯಾರ ಗೋದಾಮಿನಲ್ಲಿದ್ದು, ಎಷ್ಟು ಮೌಲ್ಯದ್ದು, ಯಾವ ಯಾವ ಮಾಲೀಕರಿಗೆ ಸೇರಿದೆ ; (ಸಂಪೂರ್ಣ ಜಿಲ್ಲಾವಾರು, ಗೋದಾಮುವಾರು, ಮೌಲ್ಯವಾರು ಮಾಹಿತಿ ಒದಗಿಸುವುದು)

(ಇ) ಬೇಳೆ ಕಾಳುಗಳ ದರ ಹತೋಟಿಗೆ ತರಲು ಕೈಗೊಂಡ ಕ್ರಮಗಳೇನು ; ಎಷ್ಟು ದಿನಗಳಲ್ಲಿ ದರವನ್ನು ಹತೋಟಿಗೆ ತರಲು ಕ್ರಮವನ್ನು ಜರುಗಿಸಲಾಗುವುದು ?

## ಹಾವೇರಿ ಜಿಲ್ಲೆಯಲ್ಲಿ ಬಯಲು ರಂಗಮಂದಿರ ನಿರ್ಮಾಣ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೯೭ (೨೮೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಹಾವೇರಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಬಯಲು ರಂಗಮಂದಿರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಂಗಮಂದಿರ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮವೇನು ; ಹೊಸ ಬಯಲು ರಂಗಮಂದಿರ ನಿರ್ಮಾಣಕ್ಕಾಗಿ ಸರ್ಕಾರ ಸ್ಥಳ ಗುರುತಿಸಿದೆಯೇ ; ಗುರುತಿಸಿದ್ದಲ್ಲಿ, ರಂಗಮಂದಿರ ನಿರ್ಮಾಣಕ್ಕಾಗಿ ನಿಗಧಿಪಡಿಸಿರುವ ಅನುದಾನ ಮೊತ್ತವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಿಗೆ ಒದಗಿಸಲಾದ ಉಪಕರಣಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೮ (೨೮೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಸರ್ಕಾರಿ ಆಸ್ಪತ್ರೆಗಳಿಗೆ ರೋಗಗಳ ಪತ್ತೆ ಹಚ್ಚುವಿಕೆ ಮತ್ತು ಚಿಕಿತ್ಸೆ ದೃಷ್ಠಿಯಿಂದ ಒದಗಿಸಲಾದ ಉಪಕರಣಗಳು ಯಾವುವು ; ಯಾವ ಯಾವ ಆಸ್ಪತ್ರೆಗಳಿಗೆ ಉಪಕರಣ ಸಲಕರಣೆಗಳನ್ನು ಒದಗಿಸಲಾಗಿದೆ ; (೨೦೧೩–೧೪ ರಿಂದ ಇಲ್ಲಿವರೆಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಖರೀದಿಸಲಾದ ಉಪಕರಣಗಳಿಗೆ ವಿನಿಯೋಗಿಸಿದ ಹಣವೆಷ್ಟು ; ಪ್ರಸ್ತುತ ಈ ಉಪಕರಣಗಳನ್ನು ಉಪಯೋಗಿಸಿ ನಿರ್ವಹಿಸಲು ಅಗತ್ಯ ತಾಂತ್ರಿಕ ಸಿಬ್ಬಂದಿಯ ಕೊರತೆ ಇರುವುದು ನಿಜವೇ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕಳೆದ ೩ ವರ್ಷಗಳಲ್ಲಿ ಹಾವೇರಿ ಜಿಲ್ಲೆಯ ಆಸ್ಪತ್ರೆಗಳಿಗೆ ಸರ್ಕಾರದಿಂದ ಬಂದ ಅನುದಾನವೆಷ್ಟು; ಯಾವ ಯಾವ ಯೋಜನೆಗಳಲ್ಲಿ ಈ ಅನುದಾನವನ್ನು ಬಳಕೆ ಮಾಡಲಾಗಿದೆ; (೨೦೧೩-೧೪ ರಿಂದ ಇಲ್ಲಿಯವರೆಗೆ ವಿವರ ನೀಡುವುದು)

(ಈ) ಹಾವೇರಿ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು; ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಆಸ್ಪತ್ರೆಗಳಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು; ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ತೆಗೆದುಕೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಉ) ಹಾವೇರಿ ಜಿಲ್ಲೆಯಲ್ಲಿರುವ ಆಯುರ್ವೇದ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು;

(ಊ) ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ; ಉದ್ದೇಶಿಸಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು? (ತಾಲ್ಲೂಕುವಾರು ಮಾಹಿತಿ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 0 209/800 ಪ್ರತಿಗಳು/17-11-2015